ಸಂಪುಟ: 21, ಸಂಚಿಕೆ: 191, ಪುಟಗಳು: 8, ಶನಿವಾರ, 20 ಏಪ್ರಿಲ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

### ಪಂಚಾಂಗ

(ಶನಿವಾರ 20, ಏಪ್ರಿಲ್ -2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ಚೈತ್ರ ಮಾಸ, ಶುಕ್ಲ ಪಕ್ಷ,
- ದ್ವಾದಶಿ, ಶನಿವಾರ,
- ಪೂರ್ವ ಪಾಲ್ಗುಣಿ ನಕ್ಷತ್ರ
- ಉತ್ತರ ಪಾಲ್ಗುಣಿ ನಕ್ಷತ್ರ.
- ರಾಹುಕಾಲ: 09:15 ರಿಂದ 10:49
- ಗುಳಿಕಕಾಲ: 06:08 ರಿಂದ 07:42
- ಯಮಗಂಡ ಕಾಲ: 01:56 ರಿಂದ 03:29

## ಸಂಕ್ಷಿಪ್ತ ಸುದ್ದಿ

### ರಾಷ್ಟ್ರಪತಿ ಆಡಳಿತ ಹೇರಲು ಬಿಜೆಪಿ ಯತ್ನ



**ಬೆಂಗಳೂರು:** ರಾಜ್ಯದಲ್ಲಿ ರಾಷ್ಟ್ರಪತಿ ಆಡಳಿತ ಹೇರಲು ಬಿಜೆಪಿ ಗೋಪ್ಯವಾಗಿ ಯೋಜನೆ ರೂಪಿಸುತ್ತಿದೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಆರೋಪಿಸಿದ್ದಾರೆ. ಇದರ ಬೆನ್ನಲ್ಲೇ, ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ತುಂಬಾ ಚೆನ್ನಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಹೇಳಿದ್ದಾರೆ. ಹುಬ್ಬಳ್ಳಿಯ ವಿದ್ಯಾರ್ಥಿನಿ ನೇಹಾ ಹಿರೇಮಠ್ ಕೊಲೆ ಹಾಗೂ ರಾಜ್ಯದಲ್ಲಿ ಗುರುವಾರ ಒಂದೇ ದಿನ 12ಕ್ಕೂ ಹೆಚ್ಚು ಹತ್ಯೆಗಳಾದ ಹಿನ್ನೆಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಕಾಂಗ್ರೆಸ್ ಸರ್ಕಾರ ವಿಫಲವಾಗಿದೆ ಎಂದು ಪ್ರತಿಪಕ್ಷ ಬಿಜೆಪಿ ಟೀಕಿಸಿತ್ತು. ಪುಟ 2

### ನಾಮಪತ್ರ ಸಲ್ಲಿಸಿದ ನಟ ಬಾಲಯ್ಯ: ಹೆಂಡತಿ ಆಸ್ತಿಯೇ ಹೆಚ್ಚು



**ಹೈದರಾಬಾದ್:** ತೆಲುಗಿನ ಖ್ಯಾತ ನಟ ಬಾಲಯ್ಯ ನಿನ್ನೆ ನಾಮ ಪತ್ರ ಸಲ್ಲಿಸಿದ್ದಾರೆ. ಟಿಡಿಪಿ ಅಭ್ಯರ್ಥಿಯಾಗಿ ಈ ಬಾರಿ ಅವರು ಸ್ಪರ್ಧಿಸಿದ್ದಾರೆ. ಕರ್ನಾಟಕದ ಗಡಿಯ ಹಿಂದೂಪುರ ವಿಧಾನಸಭಾ ಕ್ಷೇತ್ರದಲ್ಲಿ ಅವರು ಗೆಲುವನ್ನು ಅರಸಿ ಹೊರಟಿದ್ದಾರೆ. ಈಗಾಗಲೇ ಹಿಂದೂಪುರ ಕ್ಷೇತ್ರದ ಹಾಲಿ ಶಾಸಕರೂ ಆಗಿರುವ ಬಾಲಯ್ಯ, ನಾಮಪತ್ರ ಸಲ್ಲಿಸಿದಾಗ ತಮ್ಮ ಆಸ್ತಿಯನ್ನೂ ಘೋಷಣೆ ಮಾಡಿದ್ದು, ತಮಗಿಂತಲೂ ಪತ್ನಿಯ ಆಸ್ತಿಯೇ ಹೆಚ್ಚಾಗಿರುವುದು ಕಂಡು ಬಂದಿದೆ. 9 ಕೋಟಿ ರೂಪಾಯಿ ಸಾಲವನ್ನು ತೋರಿಸಿದ್ದರೆ, 81 ಕೋಟಿ ರೂಪಾಯಿ ಆಸ್ತಿಯನ್ನು ಬಾಲಯ್ಯ ಹೊಂದಿದ್ದಾರೆ. ಪುಟ 2

### ಕರ್ನಾಟಕದ ಹಲವೆಡೆ ಭಾರಿ ಮಳೆ

## ಶಿವಮೊಗ್ಗ, ಬೀದರ್‌ನಲ್ಲಿ ವರುಣಾರ್ಭಟಕ್ಕೆ ಇಬ್ಬರು ಬಲಿ

**ಬೆಂಗಳೂರು:** ರಾಜ್ಯದ ವಿವಿಧೆಡೆ ಬೇಸಿಗೆ ಮಳೆ ಮುಂದುವರೆದಿದೆ. ಮಳೆ ಪರಿಣಾಮ ಹಲವೆಡೆ ಜನಜೀವನ ಅಸ್ತವ್ಯಸ್ತ ಆಗಿದೆ. ಬೀದರ್ ಮತ್ತು ಶಿವಮೊಗ್ಗದಲ್ಲಿ ಸಿಡಿಲು ಬಡಿದು ಇಬ್ಬರು ಮೃತಪಟ್ಟಿರುವ ಘಟನೆ ನಡೆದಿದೆ. ಇನ್ನೂ 3 ದಿನ ರಾಜ್ಯದ ಹಲವೆಡೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.



148 ದಿನಗಳ ಬಳಿಕ ಬೆಂಗಳೂರಿನ ಕೆಂಗೇರಿ ಸೇರಿ ಹಲವೆಡೆ ವರುಣನ ದರ್ಶನವಾಗಿದೆ. ದೊಡ್ಡಬಳ್ಳಾಪುರ, ನೆಲಮಂಗಲದಲ್ಲಿ ಶುಕ್ರವಾರ ಸಂಜೆ ಮಳೆ ಆಗಿದೆ. ರಾಮನಗರದ ವಡ್ಡರಹಳ್ಳಿಯಲ್ಲಿ ಬಿರುಗಾಳಿಸಹಿತ ಭಾರಿ ಮಳೆಗೆ ಎರಡ್ಮೂರು ಮನೆಗಳ ಮೇಲ್ಛಾವಣಿ ಎಗರಿವೆ. ಅದೃಷ್ಟವಶಾತ್ ಮನೆಯಲ್ಲಿದ್ದವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.



ಹೊಳೆನರಸೀಪುರದಲ್ಲಿ ಮಳೆ ನಡುವೆಯೇ ಸಿಎಂ ಭಾಷಣ ಮಾಡಿದ್ದಾರೆ. ಕಾಂಗ್ರೆಸ್ ಕಾರ್ಯಕರ್ತರು ಕುರ್ಚಿ ಹಿಡಿದು ಭಾಷಣ ಕೇಳಿದ್ದಾರೆ. ಕೊನೆಗೆ ಕುರ್ಚಿಗಳನ್ನೇ ಹೊತ್ತೊಯ್ದಿದ್ದಾರೆ. ಹಾಸನದಲ್ಲಿ ಆಲಿಕಲ್ಲು ಮಳೆ ಆಗಿದೆ. ರಾಯಚೂರಿನ ಸಿಂಧನೂರಲ್ಲಿ ಮೊದಲ ಮಳೆಯಾಗಿದ್ದು, ಯುವಕನೊಬ್ಬ ರಸ್ತೆಯಲ್ಲಿ ಕುಣಿದು ಕುಪ್ಪಳಿಸಿ ಸಂತಸ ವ್ಯಕ್ತಪಡಿಸಿದ್ದಾನೆ. ಕೊಡಗಿನಲ್ಲಿ ಒಂದು ವಾರದಿಂದ ಮಳೆ ಆಗ್ತಿದ್ದು, ಕಾಫಿ ಬೆಳೆಗಾರರಲ್ಲಿ ಮಂದಹಾಸ ಮೂಡಿದೆ. ಚಿತ್ರದುರ್ಗ, ಶಿವಮೊಗ್ಗದಲ್ಲಿ ಗುಡುಗು ಸಿಡಿಲು ಸಹಿತ ಮಳೆ ಆಗಿದೆ. ನಿನ್ನೆ ಮಂಡ್ಯದಲ್ಲಿ ಆದಿಚುಂಚನಗಿರಿ ಕಮಾನು ಉರುಳಿತ್ತು. ಇದರ ಸಿಸಿಟಿವಿ ದೃಶ್ಯ ಇದೀಗ ವೈರಲ್ ಆಗಿದೆ. ರಾಜ್ಯದ ಬಹುತೇಕ ಕಡೆ ಮುಂದಿನ ಮೂರು ದಿನ ಮಳೆ ಆಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಸಿಡಿಲು ಬಡಿದು ರೈತ ಮಹಿಳೆ ಸಾವನ್ನಪ್ಪಿರುವ ಘಟನೆ ಬೀದರ್‌ನಲ್ಲಿ ನಡೆದಿದೆ. ಬೀದರ್ ತಾಲೂಕಿನ ಬರೂರ ಗ್ರಾಮದಲ್ಲಿ ಪುಷ್ಪಲತಾ ಎಂಬ ಮಹಿಳೆ ಪುಟ 2

### ಬಾಬ್ರಿ ಮಸೀದಿಗಾಗಿ ಹೋರಾಡಿದವರು ಪ್ರಾಣ ಪ್ರತಿಷ್ಠಾಪನೆಗೆ ಬಂದ್ರು

# ಕಾಂಗ್ರೆಸ್‌ನವರು ಬರಲಿಲ್ಲ

**ಮಧ್ಯಪ್ರದೇಶ:** ಬಾಬ್ರಿ ಮಸೀದಿ ಪರ ಅಂದು ಕೋರ್ಟ್ ಮೆಟ್ಟಿಲೇರಿದ್ದ ಅರ್ಜಿದಾರರಲ್ಲಿ ಒಬ್ಬರಾದ ಇಕ್ಬಾಲ್ ಅನ್ಸಾರಿ ಮತ್ತು ಅವರ ಕುಟುಂಬವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಹಾಡಿಹೊಗಳಿದ್ದಾರೆ. ಮಧ್ಯಪ್ರದೇಶದ ದಾಮೋಹ್‌ನಲ್ಲಿ ನಡೆದ ಸಾರ್ವಜನಿಕ ರ್‍ಯಾಲಿಯಲ್ಲಿ ಮಾತನಾಡಿದ ಅವರು, ಅನ್ಸಾರಿ ಕುಟುಂಬದ ಎರಡು ತಲೆಮಾರಿನವರು ಬಾಬರಿ ಮಸೀದಿಗಾಗಿ ಹಿಂದೂಗಳ ವಿರುದ್ಧ ನ್ಯಾಯಾಲಯದಲ್ಲಿ ಶತಮಾನಗಳ ಕಾಲ ಹೋರಾಟ ನಡೆಸಿದರು. ಆದರೆ ಸುಪ್ರೀಂ ಕೋರ್ಟ್ ಹಿಂದೂಗಳ ಪರವಾಗಿ ತೀರ್ಪು ನೀಡಿದಾಗ ಅವರು ಸಂತೋಷದಿಂದ ಸ್ವಾಗತಿಸಿದರು. ಅಯೋಧ್ಯೆ ರಾಮಮಂದಿರದ ಪ್ರಾಣ ಪ್ರತಿಷ್ಠಾ ಕಾರ್ಯಕ್ರಮಕ್ಕೆ ಅವರು ಆಗಮಿಸಿದ್ದರು ಆದರೆ ಕಾಂಗ್ರೆಸ್ ನ ನಾಯಕರು ಮಾತ್ರ ಆಗಮಿಸಿರಲಿಲ್ಲ ಎಂದು ಕಿಡಿಕಾರಿದ್ದಾರೆ.

ಶತಮಾನಗಳ ಕಾಲ ಹಿಂದೂಗಳ ವಿರುದ್ಧ ಹೋರಾಟ ಮಾಡಿದ್ದ ಇಕ್ಬಾಲ್ ಅನ್ಸಾರಿ ಮತ್ತು ಅವರ ಕುಟುಂಬಕ್ಕೆ ರಾಮಮಂದಿರ ಟ್ರಸ್ಟ್‌ನಿಂದ ಆಹ್ವಾನ ನೀಡಲಾಗಿತ್ತು. ಅಷ್ಟೇ



ಅಲ್ಲದೆ ಆಹ್ವಾನ ಸ್ವೀಕರಿಸಿದ್ದ ಇಕ್ಬಾಲ್ ಅನ್ಸಾರಿ ಅವರು ರಾಮಮಂದಿರ ಕಾರ್ಯಕ್ರಮಕ್ಕೆ ಸ್ವತಃ ಹಾಜರಾಗಿದ್ದರು. ಆ ಮೂಲಕ ಅವರು ಸುಪ್ರೀಂ ಕೋರ್ಟ್‌ನ ತೀರ್ಪನ್ನು ಒಪ್ಪಿಕೊಂಡಿದ್ದರು ಎಂದು ಪ್ರಧಾನಿ ಮೋದಿ ಒತ್ತಿ ಹೇಳಿದ್ದಾರೆ.

ಇಕ್ಬಾಲ್ ಅನ್ಸಾರಿ ಅವರಿಗೆ ಆಹ್ವಾನ ನೀಡಿದಂತೆ ಕಾಂಗ್ರೆಸ್, ಸಮಾಜವಾದಿ ಪಕ್ಷ ಮತ್ತು ಭಾರತ ಮೈತ್ರಿಕೂಟದ ನಾಯಕರಿಗೂ ರಾಮಮಂದಿರ ಟ್ರಸ್ಟ್‌ನಿಂದ ಪ್ರಾಣ ಪ್ರತಿಷ್ಠಾ ಸಮಾರಂಭಕ್ಕೆ ಆಹ್ವಾನ ನೀಡಲಾಗಿತ್ತು. ಪುಟ 2

### ಕಾಂಗ್ರೆಸ್, ಕಮ್ಯೂನಿಸ್ಟರು ಬಿಜೆಪಿ ಪರ ಕೆಲಸ ಮಾಡ್ತಿದಾರೆ

## ಅವರಿಗೆ ವೋಟ್ ಹಾಕಬೇಡಿ

**ಕೋಲ್ಕತಾ:** ರಾಷ್ಟ್ರಮಟ್ಟದಲ್ಲಿ ಇಂಡಿಯಾ ಮೈತ್ರಿಕೂಟ ರಚನೆ ಆಗಲು ನಾನೇ ಕಾರಣ. ಇಂಡಿಯಾ ಎಂದು ಮೈತ್ರಿಕೂಟಕ್ಕೆ ಹೆಸರು ಸೂಚಿಸಿದ್ದೇ ನಾನು. ಆದರೆ ಪಶ್ಚಿಮ ಬಂಗಾಳದಲ್ಲಿ ಸಿಪಿಐಎಂ ಮತ್ತು ಕಾಂಗ್ರೆಸ್ ಪಕ್ಷಗಳು ಬಿಜೆಪಿ ಪರ ಕೆಲಸ ಮಾಡುತ್ತಿವೆ. ಬಂಗಾಳದಲ್ಲಿ ಯಾರೂ ಕೂಡ ಈ ಪಕ್ಷಗಳಿಗೆ ಮತ ಹಾಕಬೇಡಿ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಕರೆ ನೀಡಿರುವ ಘಟನೆ ವರದಿಯಾಗಿದೆ. ಮುರ್ಷಿದಾಬಾದ್ ನಲ್ಲಿ ಚುನಾವಣಾ ಪ್ರಚಾರ ಸಭೆ ಉದ್ದೇಶಿಸಿ ಭಾಷಣ ಮಾಡುವ ವೇಳೆ ಮಮತಾ ಬ್ಯಾನರ್ಜಿ ಅವರು ಇಂಡಿಯಾ ಮೈತ್ರಿಕೂಟದಲ್ಲಿನ ಒಡಕನ್ನು ಜಾಹೀರುಗೊಳಿಸಿದ್ದಾರೆ.



ರಾಷ್ಟ್ರ ಮಟ್ಟದಲ್ಲಿ ನಾನೇ ಇಂಡಿಯಾ ಮೈತ್ರಿಕೂಟ ಮಾಡಿದೆ. ಆದರೆ ಪಶ್ಚಿಮ ಬಂಗಾಳದಲ್ಲಿ ಯಾವ ಇಂಡಿಯಾ ಕೂಟ ಇಲ್ಲ. ನೀವು ಬಿಜೆಪಿಯನ್ನು ಸೋಲಿಸಬೇಕೆಂದಿದ್ದರೆ ಕಾಂಗ್ರೆಸ್ ಮತ್ತು ಸಿಪಿಐಎಂ ಪಕ್ಷಕ್ಕೆ ಮತ ಹಾಕಬೇಡಿ. ಈ ಎರಡು ಪಕ್ಷಗಳು ಬಿಜೆಪಿ ಪರ ಕೆಲಸ ಮಾಡುತ್ತಿವೆ ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ.

ಮುರ್ಶಿದಾಬಾದ್ ಜಿಲ್ಲೆಯಲ್ಲಿ ರಾಮನವಮಿ ದಿನದಂದು ಸಂಭವಿಸಿದ ಹಿಂಸಾಚಾರದ ಬಗ್ಗೆ ಪ್ರತಿಕ್ರಿಯಿಸಿದ ದೀದಿ, ಇದು ಪೂರ್ವಯೋಜಿತ ಕೃತ್ಯವಾಗಿದೆ. ಬಿಜೆಪಿ ಉದ್ದೇಶಪೂರ್ವಕವಾಗಿ ಹಿಂಸಾಚಾರಕ್ಕೆ ಪ್ರಚೋದನೆ ನೀಡಿತು ಎಂದು ಆರೋಪಿಸಿದ್ದಾರೆ.

ರಾಮನವಮಿ ಆಚರಣೆ ವೇಳೆ ಮುರ್ಶಿದಾಬಾದ್ ನಲ್ಲಿ ಹಿಂದೂಗಳನ್ನು ರಕ್ಷಿಸಲು ಮುಖ್ಯಮಂತ್ರಿ ವಿಫಲರಾಗಿದ್ದಾರೆ. ಇದರ ಜವಾಬ್ದಾರಿ ಅವರು ಹೊರಬೇಕು. ಅವರದ್ದು ಹಿಂದೂ ವಿರೋಧಿ ಸರ್ಕಾರ ಎಂದು ಬಿಜೆಪಿ ಆರೋಪಿಸುತ್ತಿದೆ. ಪುಟ 2

### 'ಲೋಕ' ಚುನಾವಣೆ

## 1 ಸಾವಿರ ಬಾರ್‌ಗೆ ನೋಟಿಸ್

**ಬೆಂಗಳೂರು:** ಲೋಕಸಭಾ ಚುನಾವಣೆ ಕಾವು ರಂಗೇರುತ್ತಿದೆ. ಮತದಾನಕ್ಕೆ ಕೆಲವೇ ದಿನ ಬಾಕಿ ಇದೆ. ಈ ಮಧ್ಯೆ ಬೆಂಗಳೂರು ಚುನಾವಣಾಧಿಕಾರಿಗಳು ಬಾರ್ ರೆಸ್ಟೋರೆಂಟ್ ಗಳಿಗೆ ಬಿಸಿ ಮುಟ್ಟಿಸಿದ್ದಾರೆ.

ಅವಧಿ ಮೀರಿ ಬಾರ್ ಓಪನ್ ಮಾಡಿರುವ ಒಂದು ಸಾವಿರಕ್ಕೂ ಹೆಚ್ಚು ಬಾರ್ ರೆಸ್ಟೋರೆಂಟ್ ಗಳಿಗೆ ನೋಟಿಸ್ ನೀಡಿದ್ದಾರೆ. ದಾಖಲೆ ಇಲ್ಲದೇ ಮದ್ಯ ಮಾರಾಟ ಮಾಡ್ತಾ ಇದ್ದವರ ವಿರುದ್ಧ ಕಾನೂನು ಕ್ರಮಕ್ಕೆ ಮುಂದಾಗಿದ್ದಾರೆ.



ಚುನಾವಣಾ ಹಿನ್ನೆಲೆ ಬಾರ್ ರೆಸ್ಟೋರೆಂಟ್‌ಗಳಿಗೆ ಚುನಾವಣಾ ಆಯೋಗ ಕೆಲವೊಂದು ನಿಯಮ ಪಾಲನೆಗೆ ಸೂಚಿಸಿದೆ. ಅದನ್ನ ಜಿಲ್ಲಾ ಚುನಾವಣಾಧಿಕಾರಿಗಳು ಮಾನಿಟರ್ ಮಾಡುತ್ತಿದ್ದಾರೆ. ಅದೇ ರೀತಿಯಲ್ಲಿ ಬೆಂಗಳೂರು ನಗರದಲ್ಲಿ ಬಾರ್ ರೆಸ್ಟೋರೆಂಟ್‌ಗಳು, ಎಂಆರ್‌ಪಿಗಳು ನಿಯಮ ಉಲ್ಲಂಘನೆ ಮಾಡುತ್ತಿವೆ. ಸಮಯ ಮುಗಿದಿದ್ದರೂ ಬಾರ್ ಓಪನ್ ಮಾಡಿ ವ್ಯಾಪಾರ ವ್ಯವಹಾರ ಮಾಡುತ್ತಿದ್ದಾರೆ. ನಿಯಮಕ್ಕೆ ವಿರುದ್ಧವಾಗಿ ನಡೆದುಕೊಳ್ಳುತ್ತಿವೆ. ಹೀಗಾಗಿ ಜಿಲ್ಲಾ ಚುನಾವಣಾಧಿಕಾರಿಗಳು ಒಂದು ಸಾವಿರಕ್ಕೆ ಹೆಚ್ಚು ಪ್ರಕರಣಗಳನ್ನ ದಾಖಲಿಸಿಕೊಂಡು ಬಾರ್ ರೆಸ್ಟೋರೆಂಟ್‌ಗಳಿಗೆ ನೋಟಿಸ್ ನೀಡಲಾಗಿದೆಯಂತೆ.

ಎಂಆರ್‌ಪಿ ಶಾಪ್‌ಗಳು ಕೂಡ ನಿಯಮಕ್ಕೆ ವಿರುದ್ಧವಾಗಿ ನಡೆದುಕೊಳ್ಳುತ್ತಿದ್ದಾರೆ. ಅಕ್ರಮವಾಗಿ ಮದ್ಯ ಸಾಗಾಟ ಮಾಡುವುದು ಕಂಡು ಬಂದಿದ್ದು, ಮದ್ಯ ಜಪ್ತಿ ಮಾಡಿದ್ದಾರೆ. ಮತದಾನಕ್ಕೆ ಕೆಲವೇ ದಿನಗಳು ಬಾಕಿ ಇರುವ ಹೊತ್ತಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳು ನೋಟಿಸ್ ನೀಡಿ ಕೆಲವೊಂದು ಬಾರ್‌ಗಳನ್ನ ಮುಚ್ಚಿಸುವಂತಹ ಕೆಲಸಕ್ಕೆ ಮುಂದಾಗಲಿದ್ದಾರೆ.

ಬೆಂಗಳೂರಿನಲ್ಲಿ ವಿವಿಧ ಚೆಕ್‌ಪೋಸ್ಟ್‌ಗಳಲ್ಲಿ 2.98 ಕೋಟಿ ಮೌಲ್ಯದ ಮದ್ಯ ವಶಪಡಿಸಿಕೊಂಡಿದ್ದು. ನಿಯಮ ಉಲ್ಲಂಘಿಸಿರುವ ಬಾರ್‌ಗಳ ವಿರುದ್ಧ ಕಾನೂನು ಕ್ರಮಕ್ಕೆ ಮುಂದಾಗುತ್ತೇವೆ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

## ಮಂಡ್ಯದಲ್ಲಿ ಸುಮಲತಾ ಪ್ರಚಾರದ ಬಗ್ಗೆ ಹೆಚ್‌ಡಿಕೆ ಅಚ್ಚರಿಯ ಹೇಳಿಕೆ

**ಮೈಸೂರು:** ಲೋಕಸಭೆ ಚುನಾವಣೆಗೆ ಮಂಡ್ಯ ಕ್ಷೇತ್ರದಲ್ಲಿ ಬಿಜೆಪಿ ನಾಯಕಿ ಸುಮಲತಾ ಅಂಬರೀಶ್ ಲೋಕಸಭೆ ಚುನಾವಣೆ ಪ್ರಚಾರದ ಬಗ್ಗೆ ಮೈತ್ರಿ ಅಭ್ಯರ್ಥಿ, ಜೆಡಿಎಸ್ ಪಕ್ಷದ ಹೆಚ್‌ಡಿ ಕುಮಾರಸ್ವಾಮಿ ಪ್ರತಿಕ್ರಿಯಿಸಿದ್ದಾರೆ. ಸುಮಲತಾ ಇಂದು ಮೈಸೂರಿನಲ್ಲಿ ಬಿಜೆಪಿ ಪರ ಪ್ರಚಾರ ನಡೆಸಲಿದ್ದಾರೆ. ಆದರೆ ಮಂಡ್ಯದಲ್ಲಿ ಇನ್ನೂ ಪ್ರಚಾರ ಕೈಗೊಂಡಿಲ್ಲ. ಈ ಬಗ್ಗೆ ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಕುಮಾರಸ್ವಾಮಿ, ಅವರು ಈಗ ಬಿಜೆಪಿ ಸೇರಿದ್ದಾರೆ. ಪಕ್ಷ ಹೇಳಿದ ಕಡೆಗಳಲ್ಲಿ ಪ್ರಚಾರ ಮಾಡುತ್ತಿದ್ದಾರೆ. ಇನ್ನು ಮೂರು ದಿನ ಇದೆ, ನೋಡೋಣ ಎಂದರು.



ಸುಮಲತಾ ನಮ್ಮಲ್ಲಿ ಕೂಡ ಬಂದು ಪ್ರಚಾರ ಮಾಡಬಹುದು. ಕೇವಲ ಹೇಳಿಕೆಗಳನ್ನು ನೀಡುವುದರಿಂದ ಏನೂ ಆಗುವುದಿಲ್ಲ. ಹೇಳಿಕೆ ಕೊಡದೆಯೂ ಬೆಂಬಲ ನೀಡಬಹುದು ಅಲ್ಲವೇ ಎಂದು ಕುಮಾರಸ್ವಾಮಿ ಪ್ರಶ್ನಿಸಿದರು.

ಕಳೆದ ಬಾರಿ ಲೋಕಸಭೆ ಚುನಾವಣೆಯಲ್ಲಿ ಕುಮಾರಸ್ವಾಮಿ ಪುತ್ರ ನಿಖಿಲ್ ವಿರುದ್ಧ ಸ್ಪರ್ಧಿಸಿದ್ದ ಸುಮಲತಾ ಭರ್ಜರಿ ಗೆಲುವು ಸಾಧಿಸಿದ್ದರು. ಚುನಾವಣೆಯಲ್ಲಿ ಅವರಿಗೆ ಬಿಜೆಪಿ ಬಾಹ್ಯ ಬೆಂಬಲ ಘೋಷಿಸಿತ್ತು. ನಂತರ ಸುಮಲತಾ ಬಿಜೆಪಿ ಸೇರುವ ವದಂತಿಗಳಾಗಿದ್ದವು. ಆದರೆ ಕಾನೂನಾತ್ಮಕ ಸಮಸ್ಯೆಗಳಿಂದ ಅವರ ಪಕ್ಷ ಸೇರ್ಪಡೆಯಾಗಿರಲಿಲ್ಲ. ಇದೀಗ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಬಿಜೆಪಿ ಸೇರಿದ್ದಾರೆ. ಹಲವಾರು ಕಡೆಗಳಲ್ಲಿ ಪಕ್ಷದ ಪರ ಪ್ರಚಾರವನ್ನು ಮಾಡಿದ್ದಾರೆ. ಈ ಮಧ್ಯೆ, ಸುಮಲತಾ ಮಂಡ್ಯದಲ್ಲಿ ಕುಮಾರಸ್ವಾಮಿ ಪರ ಪ್ರಚಾರ ನಡೆಸದಿರುವುದು ಭಾರಿ ಚರ್ಚೆಗೆ ಗ್ರಾಸವಾಗಿತ್ತು. ಪುಟ 2

## ಯಲಹಂಕದಲ್ಲಿ ಸುಧಾಕರ್‌ಗೆ 1 ಲಕ್ಷ ಮತಗಳ ಲೀಡ್ ಕೊಡಿಸುತ್ತೇನೆ

**ಚಿಕ್ಕಬಳ್ಳಾಪುರ:** ಕಳೆದ ಬಾರಿ 2019ರಲ್ಲಿ ಯಲಹಂಕ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿಗೆ 45,000 ಮತಗಳ ಲೀಡ್ ದೊರೆತಿತ್ತು. ಈ ಬಾರಿ ಎನ್‌ಡಿಎಗೆ 1 ಲಕ್ಷಕ್ಕೂ ಹೆಚ್ಚು ಮತಗಳ ಲೀಡ್ ಸಿಗಲಿದೆ ಎಂದು ಶಾಸಕ ಎಸ್‌ಆರ್ ವಿಶ್ವನಾಥ್ ವಿಶ್ವಾಸ ವ್ಯಕ್ತಪಡಿಸಿದರು.

ಯಲಹಂಕ ವಿಧಾನಸಭಾ ಕ್ಷೇತ್ರದ ತೋಟದಗುಡ್ಡಹಳ್ಳಿ, ಅಂಚೆಪಾಳ್ಯ ಮೊದಲಾದ ಕಡೆಗಳಲ್ಲಿ ಶಾಸಕ ಎಸ್‌ಆರ್ ವಿಶ್ವನಾಥ್ ಅವರೊಂದಿಗೆ ಡಾ.ಕೆ ಸುಧಾಕರ್ ಪ್ರಚಾರ ಮತ್ತು ಸಭೆ ನಡೆಸಿದರು. ಬಳಿಕ ಮಾತನಾಡಿದ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಕೆ.ಸುಧಾಕರ್, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಯಲಹಂಕ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಒಂದಾದ ಬಳಿಕ ಕಾಂಗ್ರೆಸ್ ಆಟಕ್ಕುಂಟು ಲೆಕ್ಕಕ್ಕಿಲ್ಲ ಎಂಬ ಪರಿಸ್ಥಿತಿ ಉಂಟಾಗಿದೆ. 80% ರಷ್ಟು ಮತಗಳು ಬಿಜೆಪಿಗೆ ದೊರೆಯಲಿದೆ. ಆದರೆ ಕಾಂಗ್ರೆಸ್‌ಗೆ 20% ರಷ್ಟು ಮತಗಳು ದೊರೆಯುವುದು ಅನುಮಾನ. ಇದಕ್ಕೆ ಶಾಸಕರ ಅಭಿವೃದ್ಧಿ ಕಾರ್ಯಗಳೇ ಕಾರಣ ಎಂದರು.

ಯಲಹಂಕದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಸಂಘಟನೆ ಶಕ್ತಿಯುತವಾಗಿದೆ. ಪ್ರಧಾನಿ ನರೇಂದ್ರ, ಮೋದಿ ಮತ್ತು ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡರ ಸಮಾಗಮದಿಂದ ಇಲ್ಲಿ ಹೆಚ್ಚು ಲಾಭವಾಗಲಿದೆ ಎಂದು ಹೇಳಿದರು.



### ಇಂದು ಚಿಕ್ಕಬಳ್ಳಾಪುರ, ಬೆಂಗಳೂರಲ್ಲಿ

## ಮೋದಿ ಮೇನಿಯಾ

**ಬೆಂಗಳೂರು:** ಪ್ರಧಾನಿ ನರೇಂದ್ರ ಮೋದಿ ಇಂದು ಮತ್ತೆ ಬೆಂಗಳೂರಿಗೆ ಬರ್ತಿದ್ದಾರೆ. ಬೆಂಗಳೂರಿನ 4 ಲೋಕಸಭಾ ಕ್ಷೇತ್ರಗಳಿಗೆ ಸೀಮಿತವಾಗಿ ಇಂದು ಪಿಎಂ ಮೋದಿ ಸಮಾವೇಶ ನಡೆಸಲಿದ್ದಾರೆ. ಸಂಜೆ 5 ಗಂಟೆಗೆ ಪ್ಯಾಲೇಸ್‌ಗ್ರೌಂಡ್‌ನಲ್ಲಿ ಸಮಾವೇಶ ನಡೆಯಲಿದೆ. ಬೆಂಗಳೂರಲ್ಲಿ 3 ಕ್ಷೇತ್ರದಲ್ಲಿ ಬಿಜೆಪಿ ಗೆದ್ದಿದ್ದರೂ ಈ ಬಾರಿ ಅಭ್ಯರ್ಥಿಗಳಿಗೆ ವಿರೋಧ ವ್ಯಕ್ತವಾಗಿದೆ. ಹೀಗಾಗಿ ಪ್ರಧಾನಿ ಮೋದಿ ಈ ಭಾಗದಲ್ಲಿ ಮತಬೇಟೆಯಾಡಲಿದ್ದಾರೆ. ಶೋಭಾ ಕರಂದ್ಲಾಜೆ, ಪಿಸಿ ಮೋಹನ್, ತೇಜಸ್ವಿ ಸೂರ್ಯ, ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಡಾ.ಮಂಜುನಾಥ್ ಪರ ಮೋದಿ ಪ್ರಚಾರ ನಡೆಸಲಿದ್ದಾರೆ.

**ಭದ್ರತೆಗೆ 2 ಸಾವಿರ ಪೊಲೀಸರ ನಿಯೋಜನೆ:** ಪ್ರಧಾನಿ ನರೇಂದ್ರ ಮೋದಿ ಬೆಂಗಳೂರಲ್ಲಿ





ಬೃಹತ್ ಸಮಾವೇಶ ನಡೆಸೋ ಹಿನ್ನೆಲೆ ಪ್ಯಾಲೇಸ್ ಗ್ರೌಂಡ್‌ನಲ್ಲಿ ಭಾರಿ ಬಂದೋಬಸ್ತ್ ಕೈಗೊಳ್ಳಲಾಗಿದೆ. ನಮೋ ಕಾರ್ಯಕ್ರಮದ ಭದ್ರತೆಗಾಗಿ ಬರೋಬ್ಬರಿ 2 ಸಾವಿರ ಪೊಲೀಸರನ್ನು ಪ್ಯಾಲೇಸ್‌ಗ್ರೌಂಡ್ ಬಳಿ ನಿಯೋಜಿಸಲಾಗಿದೆ. ಪೊಲೀಸ್ ಕಮೀಷನರ್ ದಯಾನಂದ್, ಹೆಚ್ಚುವರಿ ಪೊಲೀಸ್ ಆಯುಕ್ತರಾದ ಸತೀಶ್ ಕುಮಾರ್, ರಮಣಗುಪ್ತ ನೇತೃತ್ವದಲ್ಲಿ ಬಂದೋಬಸ್ತ್ ಏರ್ಪಡಿಸಲಾಗಿದೆ. ಪುಟ 2

## ಸರ್ಕಾರದ ವಿರುದ್ಧ ಸಿ.ಟಿ.ರವಿ ಕಿಡಿ

**ಬೆಂಗಳೂರು:** ಹುಬ್ಬಳ್ಳಿಯಲ್ಲಿ ಯುವತಿ ಬರ್ಬರ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ಮಾಜಿ ಸಚಿವ ಸಿ.ಟಿ.ರವಿ ಕಿಡಿಕಾರಿದ್ದಾರೆ. ಅವರು ಅವಳ ಕುತ್ತಿಗೆಗೆ ಚಾಕು ಹಾಕಿ ಸಾಯಿಸುತ್ತಾರೆ. ಸರ್ಕಾರ ಮೂಕಪ್ರೇಕ್ಷಕನಂತಿರುತ್ತದೆ ಎಂದು ವಾಗ್ದಾಳಿ ನಡೆಸಿದ್ದಾರೆ.



ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ಸಿ.ಟಿ.ರವಿ, ರಾಜ್ಯದಲ್ಲಿ ಕಾಂಗ್ರೆಸ್ಸಿನ ತುಘಲಕ್ ದರ್ಬಾರ್‌ನಲ್ಲಿ ನಮ್ಮ ದುರ್ದೈವ. ಹನುಮಾನ್ ಚಾಲೀಸಾ ಕೇಳುತ್ತೀರಾ ಅವರು ನಿಮ್ಮ ಮೇಲೆ ಹಲ್ಲೆ ಮಾಡುತ್ತಾರೆ ಮತ್ತು ಕಾಂಗ್ರೆಸ್ ಸರ್ಕಾರ ನಿಮ್ಮ ಮೇಲೆಯೇ ಕೇಸ್ ಹಾಕುತ್ತಾರೆ. ರಾಮಮಂದಿರ ಉದ್ಘಾಟನೆ ವಿಜೃಂಭಣೆಯಿಂದ ಮಾಡ್ತೀರಾ ಅವರು ರಾಮೇಶ್ವರ ಕೆಫೆಗೆ ಬಾಂಬ್ ಇಡುತ್ತಾರೆ ಮತ್ತು ಕಾಂಗ್ರೆಸ್ ಸರ್ಕಾರ ಅದನ್ನು ಲೋ ಇಂಟೆನ್ಸಿಟಿ ಬಾಂಬ್ ಎಂದು ಮೂಲೆಗುಂಪು ಮಾಡುತ್ತದೆ.

ರಾಮನವಮಿ ದಿನ ಜೈ ಶ್ರೀರಾಮ್ ಅನ್ನುತ್ತೀರಾ ಅವರು ಅಲ್ಲಾ ಅಕ್ಬರ್ ಘೋಷಣೆ ಕೂಗಿ ಎಂದು ಹಲ್ಲೆ ಮಾಡುತ್ತಾರೆ ಮತ್ತು ಸರ್ಕಾರ ಮಗುಮ್ಮಾಗಿ ಕುಳಿತುಕೊಳ್ಳುತ್ತದೆ.

ನಿಮ್ಮ ಮನೆ ಮಗಳು ನಿನ್ನ ಲವ್ ಜಿಹಾದ್‌ಗೆ ಬಲಿಯಾಗುವುದಿಲ್ಲ ಎಂದು ತಿರಸ್ಕರಿಸುತ್ತಾಳಾ ಅವರು ಅವಳ ಕುತ್ತಿಗೆಗೆ ಚಾಕು ಹಾಕಿ ಸಾಯಿಸುತ್ತಾರೆ. ಮತ್ತು ಸರ್ಕಾರ ಮೂಕಪ್ರೇಕ್ಷಕನಂತಿರುತ್ತದೆ.

ಬಿಜೆಪಿ ಪರ ಚುನಾವಣಾ ಪ್ರಚಾರ ಕೈಗೊಳ್ಳುತ್ತೀರಾ ಅವರು ನಿಮ್ಮ ಮೇಲೆ ಕಾರು ಹರಿಸಿ ಸಾಯಿಸುತ್ತಾರೆ ಮತ್ತು ಎಲ್ಲರು ಮೌನವಾಗಿರುತ್ತಾರೆ. ನನಗಲ್ಲ ಎನ್ನುವ ಕಾಲ ಇದಲ್ಲ. ಪ್ರತಿಯೊಂದು ಬೆಳವಣಿಗೆಗೂ ನಮ್ಮ ಮೌನವು ಒಂದು ಕಾರಣ. ಇನ್ನಾದರೂ ಎದ್ದು ನಿಲ್ಲು ಹಿಂದೂ, ಸುಮ್ಮನಿದ್ದರೆ ದೇಶವೂ ಇರದು, ಜಾತಿಯು ಇರದು, ನಾನು ಇರೆನು, ನೀನು ಇರಲಾರೆ ಎಂದು ಸಿ.ಟಿ.ರವಿ ಬರೆದುಕೊಂಡಿದ್ದಾರೆ.

## ಹಟ್ಟಿ ಚಿನ್ನದ ಗಣಿಯಲ್ಲಿ ಏರ್ ಬ್ಲಾಸ್ಟ್ – ಕಾರ್ಮಿಕ ಗಂಭೀರ

**ರಾಯಚೂರು:** ಜಿಲ್ಲೆಯ ಲಿಂಗಸುಗೂರು ತಾಲೂಕಿನ ಚಿನ್ನದ ಗಣಿಯಲ್ಲಿ ನಡೆದ ಏರ್ ಬ್ಲಾಸ್ಟ್ ಘಟನೆಯಲ್ಲಿ ಒಟ್ಟು 6 ಮಂದಿಗೆ ಗಾಯಗಳಾಗಿದ್ದು, ಓರ್ವ ಕಾರ್ಮಿಕನ ಸ್ಥಿತಿ ಗಂಭೀರವಾಗಿದೆ.




ಸುರಂಗ ಮಾರ್ಗದಲ್ಲಿ ಕೆಲಸ ಮಾಡುತ್ತಿದ್ದ ಐವರು ಕಾರ್ಮಿಕರಿಗೆ ಗಾಯಗಳಾಗಿದೆ. ಓರ್ವ ಕಾರ್ಮಿಕನ ಮೇಲೆ ಕಲ್ಲುಗಳು ಬಿದ್ದಿದ್ದು ಸ್ಥಿತಿ ಗಂಭೀರವಾಗಿದೆ. ಗಂಭೀರವಾಗಿ ಗಾಯಗೊಂಡ ಕಾರ್ಮಿಕ ಬಸವರಾಜ್‌ನನ್ನ ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ರವಾನಿಸಲಾಗಿದೆ. ಹುಲಗಣ್ಣ, ಮಲ್ಲರಾವ್, ಪ್ರಭಾಕರ್, ಮೈಕಲ್, ಮರಿಸ್ವಾಮಿಗೆ ಗಾಯಗಳಾಗಿವೆ. ಸುರಂಗ ಮಾರ್ಗದ ಕೆಲಸದ ವೇಳೆ ಏಕಾಏಕಿ ಏರ್ ಬ್ಲಾಸ್ಟ್ ಆಗಿದ್ದು ಒಂದು ಬದಿಯಲ್ಲಿ ಮಣ್ಣು ಕುಸಿದಿದೆ. ಘಟನೆಯಲ್ಲಿ ಉಸಿರಾಟದ ಸಮಸ್ಯೆಯಿಂದ ನಿತ್ರಾಣಗೊಂಡು ಸುರಂಗದಲ್ಲೇ ಸಿಲುಕಿದ್ದ ಕಾರ್ಮಿಕರನ್ನ ಕೂಡಲೇ ರಕ್ಷಿಸಲಾಗಿದೆ. ಈ ಐದು ಮಂದಿ ಗಾಯಾಳುಗಳು ಹಟ್ಟಿ ಚಿನ್ನದ ಗಣಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

# ಇಬ್ಬರೂ ಪರಸ್ಪರ ಪ್ರೀತಿಸುತ್ತಿದ್ದರು.. ಲವ್ ಜಿಹಾದ್ ನನಗೆ ಕಾಣುತ್ತಿಲ್ಲ

**ತುಮಕೂರು:** ಇಬ್ಬರೂ ಪರಸ್ಪರ ಪ್ರೀತಿಸುತ್ತಿದ್ದರು. ಯಾವ ಲವ್ ಜಿಹಾದ್ ನನಗೆ ಕಾಣಿಸುತ್ತಿಲ್ಲ ಎಂದು ಹುಬ್ಬಳ್ಳಿ ಯುವತಿ ಹತ್ಯೆ ಪ್ರಕರಣದ ಬಗ್ಗೆ ಗೃಹ ಸಚಿವ ಜಿ.ಪರಮೇಶ್ವರ್ ಪ್ರತಿಕ್ರಿಯೆ ನೀಡಿದರು.

ಪ್ರಕರಣ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ನನಗೆ ಬಂದ ಮಾಹಿತಿ ಪ್ರಕಾರ, ಇಬ್ಬರೂ ಪರಸ್ಪರ ಪ್ರೀತಿಸುತ್ತಿದ್ದರು. ಯಾವಾಗ ಆ ಹೆಣ್ಣುಮಗಳು ದೂರ ಹೋಗಲು ಶುರು ಮಾಡಿದಳೋ ಆಗ ಹುಡುಗ ಹೋಗಿ ಚುಚ್ಚಿದ್ದಾನೆ. ಅದರಲ್ಲಿ ಲವ್ ಜಿಹಾದ್ ನನಗೆ ಕಾಣುತ್ತಿಲ್ಲ. ನನ್ನನ್ನು ಬಿಟ್ಟು ಬೇರೆ ಮದುವೆ ಮಾಡಿಕೊಳ್ತಾಳೋ ಏನೋ ಅಂದುಕೊಂಡು ಹೀಗೆ ಮಾಡಿರಬಹುದು. ನನಗೆ ಇದರ ಪೂರ್ತಿ ಮಾಹಿತಿ ಗೊತ್ತಿಲ್ಲ ಎಂದು ತಿಳಿಸಿದರು.

ಪರಸ್ಪರ ಪ್ರೀತಿ ಮೇಲೆ ಆಗಿರುವ ಘಟನೆ ಇದು. ಲವ್ ಜಿಹಾದ್ ಅನ್ನೋದು ಕಾಣುತ್ತಿಲ್ಲ. ಬಿಜೆಪಿಯವರು ಸ್ವಾಭಾವಿಕವಾಗಿ ಇಂತಹ ವಿಚಾರದಲ್ಲಿ ಕಾಂಗ್ರೆಸ್‌ನ್ನು ದೂಷಣೆ ಮಾಡೋದು ಅವರ ಕೆಲಸ. ಅದು ಅಷ್ಟು ಸಮಂಜಸ ಅಲ್ಲ. ನಾವು ಕಾನೂನು ಪ್ರಕಾರ ಕಂಟ್ರೋಲ್ ಮಾಡ್ತೀವಿ. ಎಲ್ಲವನ್ನೂ ರಾಜಕೀಯ ದೃಷ್ಟಿಯಿಂದ ನೋಡೋದು ಈ ಚುನಾವಣೆ ಸಂದರ್ಭದಲ್ಲಿ ಒಳ್ಳೆದಲ್ಲ. ಹೀಗೆ ತನಿಖೆ ಮಾಡಿ, ಈ ಸೆಕ್ಷನ್ನೇ ಹಾಕಿ ಎಂದು ಅವರು ಹೇಳೋಕೆ ಆಗಲ್ಲ. ಸಾಕ್ಷ್ಯಾಧಾರಗಳ



ಆಧಾರದ ಮೇಲೆ ಸೆಕ್ಸನ್ ಹಾಕಲಾಗುತ್ತದೆ ಎಂದು ಸ್ಪಷ್ಟಪಡಿಸಿದರು.

ಗದಗದಲ್ಲಿ ನಾಲ್ವರ ಹತ್ಯೆ ಪ್ರಕರಣದ ಬಗ್ಗೆ ಮಾತನಾಡಿ, ಈಗಾಗಲೇ ಇಲಾಖೆಯವರು ಗಮನ ಹರಿಸಿದ್ದಾರೆ. ಕಾನೂನು ಪ್ರಕಾರ ಕ್ರಮ ಕೈಗೊಳ್ಳುತ್ತಾರೆ. ಈ ಪ್ರಕರಣದಲ್ಲಿ ಯಾವುದೇ ರಾಜಕೀಯ ಹಿನ್ನೆಲೆ ಇರಲಿಕ್ಕಿಲ್ಲ. ನಾವು ಪರಿಶೀಲನೆ ಮಾಡಿ ಅದರ ಪ್ರಕಾರ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

ಬೆಂಗಳೂರು ಜೋಡಿ ಕೊಲೆ ಬಗ್ಗೆ ಪ್ರತಿಕ್ರಿಯಿಸಿ, ನಿನ್ನೆ ಬೆಂಗಳೂರಿನಲ್ಲಿ 2 ಕೊಲೆಯಾಗಿದೆ. ಇಬ್ಬರು ಒಂದೆ ಕಡೆ ಕೆಲಸ ಮಾಡುತ್ತಿದ್ದರು. ಇಬ್ಬರಿಗೂ ಲವ್ ಅಫೇರ್ ಇತ್ತು. ಕೆಲ ಕಾರಣಗಳಿಂದ ಯುವತಿ ಹುಡಗನಿಂದ ದೂರುವಾಗುವ ನಿರ್ಧಾರ ಮಾಡಿದ್ದಾಳೆ. ಅದಕ್ಕೆ ಯುವಕ ಕೊಲೆ ಮಾಡಿದ್ದಾನೆ. ಇದೇ ವೇಳೆ ಅಲ್ಲೆ ಇದ್ದ ತಾಯಿ ಅವನ ಮೇಲೆ ಹಲ್ಲೆ ಮಾಡಿ ಸಾಯಿಸಿದ್ದಾರೆ ಎಂದು ತಿಳಿಸಿದರು.

ಇಂಥಹ ಘಟನೆಗಳು ಆಕಸ್ಮಿಕವಾಗಿ ನಡೆಯುತ್ತವೆ. ಅಂಥವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ. ಬೆಂಗಳೂರು ಘಟನೆಯಲ್ಲಿ ವೀಕ್ ಸೆಕ್ಸನ್ ಹಾಕಲಾಗಿದೆ ಎಂಬ ಆರೋಪವಿದೆ. ಪ್ರಾರಂಭದಲ್ಲಿ ಯಾವ ಪ್ರಕರಣ ದಾಖಲಿಸಿಕೊಳ್ಳಬೇಕೋ ಅದನ್ನು ದಾಖಲು ಮಾಡಲಾಗಿದೆ. ತನಿಖೆ ಹಂತದಲ್ಲಿ ಯಾವುದನ್ನು ಆಡ್ ಮಾಡಬೇಕೋ ಅದನ್ನು ಮಾಡಲಾಗುವುದು ಎಂದು ಸ್ಪಷ್ಟಪಡಿಸಿದರು. ಯಾರು ಕಾನೂನುಬಾಹಿರವಾಗಿ ನಡೆದುಕೊಳ್ಳುತ್ತಾರೋ, ಅವರು ಯಾವುದೇ ಸಮುದಾಯ ಆಗಲಿ ಮುಲಾಜಿಲ್ಲದೇ ಕಾನೂನು ಕ್ರಮ ಕೈಗೊಳ್ಳುತ್ತೇವೆ. ಅವರನ್ನು ಓಲೈಸುವ ಕೆಲಸ ನಾವು ಯಾವತ್ತೂ ಮಾಡೋದಿಲ್ಲ. ನಾವು ಸಮಾಜವನ್ನು ಶಾಂತಿಯಿಂದ ಇಡಬೇಕು ಅನ್ನೋದೆ ನಮ್ಮ ಉದ್ದೇಶ ಎಂದರು.

## ಹುಬ್ಬಳ್ಳಿಯ ನೇಹಾ ಹತ್ಯೆಗೈದ ಫಯಾಜ್ ಕುಟುಂಬಸ್ಥರಿಗೆ ಪೊಲೀಸ್ ಭದ್ರತೆ

**ಬೆಳಗಾವಿ:** ಹುಬ್ಬಳ್ಳಿ ಯುವತಿ ಕೊಲೆ ಪ್ರಕರಣದ ಆರೋಪಿ ಫಯಾಜ್ ಮನೆಗೆ ಪೊಲೀಸ್ ಬಿಗಿ ಭದ್ರತೆ ಕಲ್ಪಿಸಲಾಗಿದೆ. ಮುಂಜಾಗ್ರತಾ ಕ್ರಮವಾಗಿ ಆರೋಪಿ ಕುಟುಂಬಸ್ಥರು ಬೆಳಗಾವಿ ಪೊಲೀಸರ ಸುಪರ್ದಿಯಲ್ಲಿದ್ದಾರೆ.

ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಮುನವಳ್ಳಿಯ ಸಾಯಿನಗರದಲ್ಲಿ ಆರೋಪಿ ಫಯಾಜ್ ಮನೆ ಇದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ಉದ್ದೇಶದಿಂದ ಆರೋಪಿ ಮನೆಗೆ ಪೊಲೀಸರು ಬಿಗಿ ಭದ್ರತೆ ಒದಗಿಸಿದ್ದಾರೆ.

ಆರೋಪಿಯ ತಂದೆ, ತಾಯಿ ಹಾಗೂ ಸಹೋದರಿ ಪೊಲೀಸ್ ಸುಪರ್ದಿಯಲ್ಲಿದ್ದಾರೆ. ಬೆಳಗಾವಿ ಎಸ್‌ಪಿ ಡಾ. ಭೀಮಾಶಂಕರ್ ಗುಳೇದರಿಂದ ಆರೋಪಿ ಕುಟುಂಬಸ್ಥರು ಸೆಕ್ಯೂರ್ ಮಾಡಲಾಗಿದೆ.

ಹುಬ್ಬಳ್ಳಿಯಲ್ಲಿ ನೇಹಾ ಹಿರೇಮಠ ಹತ್ಯೆಯನ್ನು ಖಂಡಿಸಿ ಮುನವಳ್ಳಿಯಲ್ಲಿ



ಬಿಜೆಪಿ ಪ್ರತಿಭಟನೆ ನಡೆಸುತ್ತಿದೆ. ಈ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಆರೋಪಿ ಮನೆಗೆ ಬಿಗಿ ಭದ್ರತೆ ಕಲ್ಪಿಸಲಾಗಿದೆ.

ಪ್ರೀತಿ ವಿಚಾರವಾಗಿ ನೇಹಾ ಯುವತಿಯನ್ನು ಹುಬ್ಬಳ್ಳಿ ಕಾಲೇಜಿನಲ್ಲೇ ಫಯಾಜ್ ಎಂಬಾತ ಚಾಕುವಿನಿಂದ 9 ಬಾರಿ ಇರಿದು ಕೊಂದಿದ್ದ. ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.

# ಎಲ್ಲೆಂದರಲ್ಲಿ ಕಾಂಡೋಮ್, ಬಿಯರ್ ಬಾಟಲ್!

**ಬೆಂಗಳೂರು:** ಅದು ಗಾಂಧಿನಗರದ ಸಂತೋಷ್ ಚಿತ್ರಮಂದಿರದ ಬಳಿ ಡಾ. ರಾಜ್ ಕುಮಾರ್ ಅವರ ಪುತ್ಥಳಿ ಇರುವ ಜಾಗ. ವರನಟನ ತಲೆಯ ಮೇಲೆ ಇರುವ ಈ ಸ್ಕೈವಾಕ್ ಈಗ ಶಿಥಲಗೊಂಡಿದೆ. ಹೇಳಿ ಕೇಳಿ ಇದು ಬಿಬಿಎಂಪಿ ಮೊಟ್ಟ ಮೊದಲು ನಿರ್ಮಿಸಿದ ಸ್ಕೈ ವಾಕ್ ಬೇರೆ. ಈ ಸ್ಕೈ ವಾಕ್ ಈಗ ಕುಡುಕರ ಅಡ್ಡೆಯಾಗಿ ಹೋಗಿದೆ. ರಸ್ತೆ ದಾಟಲು ಸ್ಕೈ ವಾಕ್ ಹತ್ತುವ ಪಾದಾಚಾರಿಗಳು ಮೂಗು ಮುಚ್ಚಿಕೊಂಡು ಓಡಾಡುತ್ತಿದ್ದಾರೆ. ಇದರ ಕಟ್ಟಡ ಸಂಪೂರ್ಣವಾಗಿ ಬಿರುಕು ಬಿಟ್ಟಿದೆ. ಜನರು ಜೀವ ಕೈಲ್ಲಿಟ್ಟುಕೊಂಡು ಓಡಾಡುತ್ತಿದ್ದಾರೆ. ರಸ್ತೆ ದಾಟುವುದು ಇಲ್ಲಿ ಸವಾಲಿನ ಕೆಲಸವೇ ಆಗಿದೆ.

ಗಾಂಧಿನಗರ, ಉಪ್ಪಾರಪೇಟೆ, ಮೆಜೆಸ್ಟಿಕ್ ಬಸ್ ನಿಲ್ದಾಣದ ಕಡೆಗೆ ಈ ಜಂಕ್ಷನ್ ಸಂಪರ್ಕ ಕಲ್ಪಿಸುತ್ತದೆ. ಪ್ರತಿ ಕ್ಷಣವೂ ಈ ಸಿಗ್ನಲ್ ಹಾದು ನೂರಾರು ವಾಹನಗಳು ಹೋಗುತ್ತದೆ. ಆದರೆ ವಾಹನ ಸವಾರರ ತಲೆಯ ಮೇಲೆ ತೂಗುಗತ್ತಿಯಂತೆ ಬಿರುಕು ಬಿಟ್ಟ ಈ ಸ್ಕೈವಾಕ್ ಇದೆ. ಮೆಟ್ಟಿಲುಗಳು, ಪಿಲ್ಲರ್ ಗಳು ಸಂಪೂರ್ಣ ಶಿಥಿಲಗೊಂಡು ರಾಡ್ ಗಳು ಹೊರ ಬಂದಿವೆ. ಅಕ್ಕಪಕ್ಕದಲ್ಲಿ ಸಿಟಿ ಸೆಂಟರ್ ಮಾರುಕಟ್ಟೆಯೂ ಇದೆ. ಇಲ್ಲಿಗೂ ಸಾವಿರಾರು ಮಂದಿ ಖರೀದಿಗೆ ಆಗಮಿಸುತ್ತಾರೆ. ಅದರ ನಡುವೆ ಈ ಪಾದಚಾರಿ ಮೇಲ್ಸೇತುವೆ ಅಪಾಯಕಾರಿ ಸ್ಥಿತಿಯಲ್ಲಿದೆ. ಪ್ರತಿ ಕ್ಷಣ ಇಲ್ಲಿ ವಾಹನಗಳು ಬಿರುಸಿನಿಂದ ಓಡಾಡುತ್ತದೆ. ಒಂದು ಸಿಗ್ನಲ್ ಓಪನ್ ಆಗುವ ಮತ್ತೊಂದು ಕ್ಲೋಸ್ ಆಗುತ್ತದೆ. ಕಾಲೇಜು ವಿದ್ಯಾರ್ಥಿಗಳು, ವಯಸ್ಕರು, ಮಹಿಳೆಯರು, ಸಿನಿಮಾ ವೀಕ್ಷಣೆಗೆ ಬರುವವರೂ ಇಲ್ಲಿ ದಿನನಿತ್ಯ ಓಡಾಡುತ್ತಾರೆ. ಆದರೆ ಇಲ್ಲಿರೋದು ಇದೊಂದೇ ಸ್ಕೈ ವಾಕ್. ಆದರೆ ನಿರ್ವಹಣೆ ಇಲ್ಲದೆ ಅದು



ಪಾಳು ಬಿದ್ದಿದೆ. ಬಿರುಕು ಬಿಟ್ಟಿದೆ. ಯಾವ ಸಮಯದಲ್ಲಿ ಬೇಕಿದ್ದರೂ ಕುಸಿಯುವ ಹಂತಕ್ಕೆ ಬಂದಿದೆ. ಬಿಬಿಎಂಪಿ ಅಧಿಕಾರಿಗಳು ಇದನ್ನು ದುರಸ್ಥಿ ಮಾಡಬೇಕು. ಇಲ್ಲದಿದ್ದರೆ ಇಲ್ಲಿ ಓಡಾಡುವುದು ಕಷ್ಟ ಎಂದು ಕೆಲ ಪಾದಚಾರಿಗಳು ಅಸಮಾಧಾನ ಹೊರ ಹಾಕಿದರು.

ಇದನ್ನು ಸರಿಪಡಿಸುವಂತೆ ಹಲವು ಬಾರಿ ಸಾರ್ವಜನಿಕರು ಪಾಲಿಕೆಗೆ ದೂರು ಕೊಟ್ಟಿದ್ದರು. ಆದರೂ ಕಳೆದ ಹಲವು ವರ್ಷಗಳಿಂದ ದುರಸ್ಥಿ ಮಾಡದೆ ಬಿಬಿಎಂಪಿ ನಿರ್ಲಕ್ಷ್ಯ ವಹಿಸಿದೆ. ರಾತ್ರಿ ಹೊತ್ತಲ್ಲಿ ಈ ಸ್ಕೈವಾಕ್ ಮೇಲೆ ಸಮಾಜಘಾತುಕ ಕೆಲಸಗಳಿಗೆ ನಡೆಯುತ್ತವೆ ಎನ್ನುವುದು ಸ್ಥಳೀಯ ಆರೋಪ. ಹಾಡಹಗಲೆ ರಾಶಿ ರಾಶಿ ಬಿಯರ್ ಬಾಟಲಿಗಳು, ಬಳಸಿದ ಕಾಂಡೋಮ್‌ಗಳು, ಕಸಕಡ್ಡಿಗಳು ಕೊಳೆತು ಗಬ್ಬೆದ್ದು ನಾರುತ್ತಿದೆ.

# ರಾಜ್ಯದಲ್ಲಿ ಪಾ'ಕೈ'ಸ್ತಾನ್ ಸರ್ಕಾರದಿಂದ ತಾಲಿಬಾನ್ ಮಾಡೆಲ್ ಜಾರಿ

**ಬೆಂಗಳೂರು:** ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂಬ ಆರೋಪಕ್ಕೆ ಸಂಬಂಧಿಸಿ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿರುವ ಬಿಜೆಪಿ, ರಾಜ್ಯದಲ್ಲಿ ಪಾ'ಕೈ'ಸ್ತಾನ್ ಸರ್ಕಾರದಿಂದ ತಾಲಿಬಾನ್ ಮಾಡೆಲ್ ಜಾರಿಯಾಗಿದೆ ಎಂದು ವ್ಯಂಗ್ಯವಾಡಿದೆ. ತೀವ್ರ ಆಕ್ರೋಶ ವ್ಯಕ್ತಪಡಿಸಿ ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಸಂದೇಶ ಪ್ರಕಟಿಸಿರುವ ಬಿಜೆಪಿ, ರಾಹುಲ್ ಗಾಂಧಿಯವರ ದ್ವೇಷದ ಅಂಗಡಿ ಕರ್ನಾಟಕವನ್ನು ಗಲಭೆಯ ತೋಟವನ್ನಾಗಿ ಮಾಡಿದೆ ಎಂದು ಟೀಕಿಸಿದೆ.

'ರಾಜ್ಯದಲ್ಲಿ ಕಾಂಗ್ರೆಸ್‌ನ ಪಾ'ಕೈ'ಸ್ತಾನ್ ಸರ್ಕಾರದಿಂದ ತಾಲಿಬಾನ್ ಮಾಡೆಲ್ ಜಾರಿಯಾಗಿದೆ. ಜೈ ಶ್ರೀರಾಮ್ ಎಂದರೆ 'ಬ್ರದರ್ಸ್'ಗಳಿಂದ ಹಲ್ಲೆ, ಲವ್ ಜಿಹಾದ್‌ಗೆ ಒಪ್ಪದೆ ಇದ್ದರೆ ಬರ್ಬರ ಕೊಲೆ. ಒಡೆಯರ್ ಪರ ನಿಂತರೆ ಕಾರು ಹರಿಸಿ ಕೊಲೆ. ಡ್ರಾಪ್ ಕೊಟ್ಟರೆ ಮತಾಂಧರಿಂದ ಹಿಗ್ಗಾಮುಗ್ಗ ಥಳಿತ. ಕನ್ನಡ ಮಾತನಾಡಿದರೆ ನಟಿ ಮೇಲೆಯೇ ಹಲ್ಲೆ ಯತ್ನ. ಚುನಾವಣೆ ಸಮಯದಲ್ಲಿ ಜಿಹಾದಿ ಮತಾಂಧ ಬ್ರದರ್ಸ್‌ಗಳನ್ನು ಸಿಎಂ ಸಿದ್ದರಾಮಯ್ಯ ಹಾಗೂ ಆ ದಿನಗಳ ಕೊತ್ವಾಲ್ ಶಿಷ್ಯ ಡಿಕೆ ಶಿವಕುಮಾರ್ ಬೀದಿಗೆ ಬಿಟ್ಟು



ಹಿಂದೂಗಳನ್ನೇ ಟಾರ್ಗೆಟ್ ಮಾಡಿ ಬೆದರಿಸುತ್ತಿದ್ದಾರೆ. ಕರ್ನಾಟಕವನ್ನು ಮತಾಂಧರ ಗಲಭೆಯ ತೋಟವನ್ನಾಗಿ ಮಾಡಿದೆ ರಾಹುಲ್ ಗಾಂಧಿ ಅವರು ದ್ವೇಷದ ಅಂಗಡಿ!' ಎಂದು ಬಿಜೆಪಿ ಎಕ್ಸ್ ಸಂದೇಶದಲ್ಲಿ ಕಿಡಿಕಾರಿದೆ.

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ ಆಡಳಿತ ವ್ಯವಸ್ಥೆ ಕುಸಿದಿದೆ ಎಂದು ಶಾಸಕ ಅಶ್ವತ್ಥನಾರಾಯಣ ಟೀಕಿಸಿದ್ದಾರೆ. ಹಾಸನ ಜಿಲ್ಲೆಯ ಸಕಲೇಶಪುರ ತಾಲೂಕಿನ ಹಾನುಬಾಳು ಗ್ರಾಮದಲ್ಲಿ ಮಾತನಾಡಿದ ಅವರು, ಕಾನೂನು ಕಾಪಾಡಲು ವಿಫಲವಾದ ಈ ಸರ್ಕಾರ ವಜಾ ಆಗಬೇಕು. ಸರ್ಕಾರದ ಮೃದುಧೋರಣೆಯ ವ್ಯವಸ್ಥೆಯಿಂದ ಯಾರಿಗೂ ಭಯವಿಲ್ಲದಂತಾಗಿದೆ. ನಾವು ಏನು ಬೇಕಾದರೂ ಮಾಡಬಹುದೆಂಬ ಮನಸ್ಥಿತಿ ನಿರ್ಮಾಣವಾಗಿದೆ. ಆತಂಕವಾದಿಗಳು ನಿರಾಳವಾಗಿ ಮನಬಂದಂತೆ ನಡೆದುಕೊಳ್ಳುತ್ತಿದ್ದಾರೆ ಎಂದರು.

ಕಾಂಗ್ರೆಸ್ ಸರ್ಕಾರದ ಲೋಪದಿಂದ ಕಾನೂನು ವ್ಯವಸ್ಥೆ ಕುಸಿದಿದೆ. ಜನರ ಸುರಕ್ಷತೆಗೆ ಆದ್ಯತೆ ನೀಡಿ, ಬಿಜೆಪಿಗೆ ಮತ ನೀಡಿ ಎಂದು ಅಶ್ವತ್ಥನಾರಾಯಣ ಹೇಳಿದರು.

## ವರುಣಾರ್ಭಟಕ್ಕೆ ಇಬ್ಬರು ಬಲಿ

ಮರದಡಿ ಕುಳಿತಿದ್ದಾಗ ಸಿಡಿಲು ಬಡಿದು ಮೃತಪಟ್ಟಿದ್ದಾರೆ. ಜಮೀನಿನಲ್ಲಿ ಕೆಲಸ ಮಾಡುತ್ತಿದ್ದಾಗ ಮಳೆಯಿಂದ ರಕ್ಷಿಸಿಕೊಳ್ಳಲು ಮರದಡಿ ಕುಳಿತಿದ್ದಾಗ, ಮರಕ್ಕೆ ಸಿಡಿಲು ಬಡಿದು ದುರ್ಮರಣ ಹೊಂದಿದ್ದಾರೆ. ಘಟನೆ ಜನವಾಡ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಸಿಡಿಲು ಬಡಿದು ಯುವಕ ಸಾವನ್ನಪ್ಪಿರುವ ಘಟನೆ ಶಿವಮೊಗ್ಗದಲ್ಲಿ ನಡೆದಿದೆ. ಶಿವಮೊಗ್ಗ ತಾಲೂಕಿನ ಹರಮಘಟ್ಟ ಗ್ರಾಮದಲ್ಲಿ ಗುಡುಗು ಸಹಿತ ಧಾರಾಕಾರ ಮಳೆಯಾಗಿದ್ದು, ಸಿಡಿಲು ಬಡಿತಕ್ಕೆ ರಾಕೇಶ್ ಎಂಬ ಯುವಕ ಬಲಿಯಾಗಿದ್ದಾನೆ. ತೋಟದಲ್ಲಿ ಕೆಲಸ ಮುಗಿಸಿಕೊಂಡು ರಾಕೇಶ್ ಹಿಂದಿರುಗುವಾಗ ಈ ದುರ್ಘಟನೆ ಸಂಭವಿಸಿದೆ.

ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಮೋಡ ಕವಿದ ವಾತಾವರಣ ಇದೆ. ಮಂಗಳೂರು ನಗರ ಸೇರಿದಂತೆ ಹಲವೆಡೆ ತುಂತುರು ಮಳೆಯಾಗಿದೆ. ತಡರಾತ್ರಿ ಗುಡುಗು, ಸಿಡಿಲು ಸಹಿತ ಮಳೆಯಾಗಿದೆ. ಬಂಟ್ವಾಳ, ಪುತ್ತೂರು ಭಾಗದಲ್ಲೂ ತುಂತುರು ಮಳೆಯಾಗಿದೆ. ಇಂದು ಎಲ್ಲೆಡೆ ಮಳೆಯಾಗುವ ಸಾಧ್ಯತೆ ಇದೆ.

**30 ಮರಗಳು ಬುಡಮೇಲು: ಹಾರಿಹೋದ ಮನೆ ಮೇಲ್ಛಾವಣಿ:** ತುಮಕೂರು ಜಿಲ್ಲೆಯಲ್ಲಿ ಗಾಳಿ, ಮಳೆಯಿಂದ ಅವಾಂತರವನ್ನೇ ಸೃಷ್ಟಿಸಿದೆ. ಕುಣಿಗಲ್ ತಾಲೂಕಿನ ಡಿ. ಹೊಸಹಳ್ಳಿಯಲ್ಲಿ ಗಾಳಿಯ ರಭಸಕ್ಕೆ 30ಕ್ಕೂ ಹೆಚ್ಚು ಮರಗಳು ನೆಲಸಮವಾಗಿವೆ. ಶಾಲಾ ಕಟ್ಟಡದ ಮೇಲೆ ಬೃಹತ್ ಗಾತ್ರದ ಮರ ಬಿದ್ದಿದೆ. ಇನ್ನು ರಾಜೇಂದ್ರಪುರ ಗ್ರಾಮದಲ್ಲಿ 3ಮನೆಗಳ ಮೇಲ್ಛಾವಣಿ ಹಾರಿಹೋಗಿವೆ.

ಚಿಕ್ಕಮಗಳೂರು ಜಿಲ್ಲೆಯಲ್ಲಿ ತಡರಾತ್ರಿ ಸಿಡಿಲು ಬಡಿದು ತೆಂಗಿನ ಮರ ಹೊತ್ತಿ ಉರಿದಿದೆ. ಕೊಪ್ಪ ರಸ್ತೆಯ ಇಸಾಕ್ ಎಂಬುವರ ಮನೆಯ ತೆಂಗಿನ ಮರ ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿದೆ. ಹಾಸನ ಜಿಲ್ಲೆಯ ಹೊಳೆನರಸೀಪುರದಲ್ಲಿ ನಡೆದ ಕಾಂಗ್ರೆಸ್ ಸಮಾವೇಶಕ್ಕೆ ಮಳೆ ಕಾಟ ನೀಡಿದೆ. ಡಿಸಿಎಂ ಡಿಕೆ ಭಾಷಣ ಮುಗಿಸಿ, ಸಿಎಂ ಮಾತು ಆರಂಭಿಸ್ತಿದ್ದಂತೆ ವರುಣ ಅಬ್ಬರಿಸಿದ್ದಾನೆ. ರಕ್ಷಣೆಗಾಗಿ ಜನರು ಪರದಾಡಿದದ್ರು. ಕೊನೆಗೆ ಪ್ಲಾಸ್ಟಿಕ್ ಚೇರ್ ಗಳನ್ನೇ ಆಶ್ರಯ ಪಡೆದು, ಸಿಎಂ ಭಾಷಣ ಆಲಿಸಿದರು.

**ಬೆಂಗಳೂರಿನಲ್ಲಿ ಎಲ್ಲೆಲ್ಲಿ ಮಳೆ:** ಬೆಂಗಳೂರಿನ ಕೆಂಗೇರಿ, ಕುಂಬಳಗೋಡು, ಯಲಹಂಕ ಸುತ್ತಮುತ್ತಲಿನ ಜನ ಈ ವರ್ಷದ ಮೊದಲ ಮಳೆ ಕಂಡು ಖುಷಿಯಾದರು. ಬ್ಯಾಟರಾಯನಪುರ ಸೇರಿದಂತೆ ಹಲವೆಡೆ ತುಂತುರು ಹನಿಗಳು ಮಂದಹಾಸ ಮೂಡಿಸಿದವು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲೂ ಮಳೆರಾಯನ ದರ್ಶನವಾಯ್ತು.

ಈ ಮಧ್ಯೆ, ಮುಂದಿನ 2 ದಿನ ರಾಜ್ಯದ ಹಲವೆಡೆ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

## ಕಾಂಗ್ರೆಸ್‌ನವರು ಬರಲಿಲ್ಲ

ಜೀವನಪರ್ಯಾಂತ ಬಾಬರಿ ಮಸೀದಿಗಾಗಿ ಹೋರಾಡಿದವರೇ ಪ್ರಾಣ ಪ್ರತಿಷ್ಠಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಆದರೆ ಕಾಂಗ್ರೆಸ್‌ನ ನಾಯಕರು ಮಾತ್ರ ಬರಲಿಲ್ಲ ಎಂದು ವಾಗ್ದಾಳಿ ಮಾಡಿದ್ದಾರೆ.

ಕಾಂಗ್ರೆಸ್‌ಗೆ ತಾನು ಚುನಾವಣೆಯಲ್ಲಿ ಗೆಲ್ಲಲ್ಲುವುದಿಲ್ಲ ಎಂದು ತಿಳಿದಿದೆ. ಆದ್ದರಿಂದ ಚುನಾವಣಾ ಫಲಿತಾಂಶದ ನಂತರ ದೇಶವು ಹೊತ್ತಿ ಉರಿಯುತ್ತದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬೆದರಿಕೆ ಹಾಕುತ್ತಿದ್ದಾರೆ ಎಂದು ಮೋದಿ ಟೀಕಿಸಿದ್ದಾರೆ.

## ಅವರಿಗೆ ವೋಟ್ ಹಾಕಬೇಡಿ

ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಈಗ ಟಿಎಂಸಿಗೆ ಪರ್ಯಾಯ ಶಕ್ತಿಯಾಗಿ ಬೆಳೆದಿದೆ. ಒಂದು ಕಾಲದಲ್ಲಿ ಮಾರ್ಕ್ಸ್ ವಾದಿ ಕಮ್ಯೂನಿಸ್ಟ್ ಪಕ್ಷದ ಪೂರ್ಣ ಪ್ರಾಬಲ್ಯ ಇದ್ದ ಈ ರಾಜ್ಯ ಕಳೆದ ಎರಡು ದಶಕದಿಂದ ಟಿಎಂಸಿಮಯವಾಗಿದೆ. ಪ್ರಮುಖ ವಿರೋಧ ಪಕ್ಷವಾಗಿದ್ದ ಕಾಂಗ್ರೆಸ್ ಈಗ ನಾಲ್ಕನೇ ಸ್ಥಾನಕ್ಕೆ ಸರ್ಕಸ್ ನಡೆಸುವಂತಾಗಿದೆ. ಒಂದು ಕಾಲದಲ್ಲಿ ಹೇಳಹೆಸರಿಲ್ಲದಂತಿದ್ದ ಬಿಜೆಪಿ ಪಕ್ಷ ಈಗ ಟಿಎಂಸಿಗೆ ಪರ್ಯಾಯವಾಗುವ ನಿಟ್ಟಿನಲ್ಲಿ ಬೆಳೆಯುತ್ತಿದೆ.

ಕಾಂಗ್ರೆಸ್ ಮತ್ತು ಕಮ್ಯೂನಿಸ್ಟ್ ಪಕ್ಷಗಳ ವಿರುದ್ಧವೇ ಹೋರಾಡುತ್ತ ಅಧಿಕಾರಕ್ಕೆ ಬಂದಿದ್ದು ಟಿಎಂಸಿ. ಈಗ ಈ ಮೂರು ಪಕ್ಷಗಳೂ ಇಂಡಿಯಾ ಮೈತ್ರಿಕೂಟದ ಭಾಗವಾಗಿರುವುದು ಕುತೂಹಲ. ಹಾಗೆಯೇ, ಕೇರಳದಲ್ಲಿ ಕಾಂಗ್ರೆಸ್ ಮತ್ತು ಕಮ್ಯೂನಿಸ್ಟ್ ಪಕ್ಷಗಳು ಹಾವು ಮುಂಗೂಸಿ ಇದ್ದಂತೆ.

ಮೊದಲನೇ ಪುಟದಿಂದ...

ಆದರೂ ಇವು ಇಂಡಿಯಾ ಮೈತ್ರಿಕೂಟದ ಭಾಗವಾಗಿವೆ.

## ಹೆಚ್‌ಡಿಕೆ ಅಚ್ಚರಿಯ ಹೇಳಿಕೆ

ಈ ವಿಚಾರವಾಗಿ ಪ್ರತಿಕ್ರಿಯಿಸಿದ್ದ ಸುಮಲತಾ ಪಕ್ಷದ ನಾಯಕರು ಹೇಳಿದ ಕಡೆ ಪ್ರಚಾರ ಮಾಡಲಿದ್ದೇನೆ ಎಂದು ಸ್ಪಷ್ಟನೆ ನೀಡಿದ್ದರು.

ಈ ಎಲ್ಲ ಬೆಳವಣಿಗೆಗಳ ಮಧ್ಯೆ ಸುಮಲತಾ ಮಾನಸ ಪುತ್ರ ನಟ ದರ್ಶನ್, ಮಂಡ್ಯದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಪರ ಪ್ರಚಾರ ನಡೆಸಿದ್ದು ಭಾರಿ ಚರ್ಚೆಗೆ ಗ್ರಾಸವಾಗಿತ್ತು. ಈ ಬಗ್ಗೆ ಸ್ಪಷ್ಟನೆ ನೀಡಿದ ಸುಮಲತಾ, ಅವರಿಗೆ ಇಷ್ಟವಾದವರ ಪರ ಪ್ರಚಾರ ನಡೆಸುತ್ತಾರೆ. ಅದನ್ನು ನಾನು ಕೇಳಲು ಸಾಧ್ಯವಿಲ್ಲ. ನಾನು ಪಕ್ಷ ಹೇಳಿದಂತೆ ನಡೆದುಕೊಳ್ಳುತ್ತೇನೆ ಎಂದು ಸ್ಪಷ್ಟಪಡಿಸಿದ್ದರು.

## ಮೋದಿ ಮೇನಿಯಾ

ಅಲ್ಲದೇ ನಾಲ್ವರು ಡಿಸಿಪಿಗಳು, ಎಸಿಪಿ, ಸಬ್‌ಇನ್ಸ್‌ಪೆಕ್ಟರ್ ಸೇರಿ 2 ಸಾವಿರ ಪೊಲೀಸರನ್ನ ನಿಯೋಜಿಸಲಾಗಿದೆ. ಕಾಂಗ್ರೆಸ್ ಕಾರ್ಯಕರ್ತರು ಚೊಂಬು ಪ್ರದರ್ಶಿಸಿ ಪ್ರತಿಭಟನೆ ನಡೆಸೋ ಸಾಧ್ಯತೆ ಹಿನ್ನೆಲೆ ಹೆಚ್ಚುವರಿ ಬಿಗಿ ಭದ್ರತೆ ಮಾಡಲಾಗಿದೆ.

ಇಂದು ಬೆಂಗಳೂರಿಗೆ ಎಂಟ್ರಿಕೊಡಲಿರೋ ಪ್ರಧಾನಿ ನರೇಂದ್ರ ಮೋದಿ, ಚಿಕ್ಕಬಳ್ಳಾಪುರದಲ್ಲೂ ಅಬ್ಬರದ ಪ್ರಚಾರ ಮಾಡಲಿದ್ದಾರೆ. ಬೆಂಗಳೂರಲ್ಲಿ ಸಮಾವೇಶ ಮಾಡೋದಕ್ಕೂ ಮೊದಲು ಚಿಕ್ಕಬಳ್ಳಾಪುರದಲ್ಲಿ ಕಾರ್ಯಕ್ರಮ ನಡೆಸಲಿದ್ದಾರೆ. ಮಧ್ಯಾಹ್ನ 3ಕ್ಕೆ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಈ ವೇಳೆ ಮಾಜಿ ಪ್ರಧಾನಿ ದೇವೇಗೌಡರು ಸೇರಿಸಿದಂತೆ ಬಿಜೆಪಿ ಮತ್ತು ಜೆಡಿಎಸ್ ಮುಖಂಡರು ಭಾಗಿಯಾಗಲಿದ್ದಾರೆ.

ಚಿಕ್ಕಬಳ್ಳಾಪುರ ಅಭ್ಯರ್ಥಿ ಡಾ.ಕೆ.ಸುಧಾಕರ್, ಕೋಲಾರದ ಜೆಡಿಎಸ್ ಅಭ್ಯರ್ಥಿ ಮಲ್ಲೇಶ್ ಬಾಬು ಪರ ಪ್ರಚಾರ ನಡೆಸಲಿದ್ದಾರೆ. ಕಳೆದ ಬಾರಿ ವಿಧಾನಸಭಾ ಚುನಾವಣೆಯಲ್ಲಿ ಹಿನ್ನಡೆ ಅನುಭವಿಸಿದ್ದ ಡಾ.ಕೆ.ಸುಧಾಕರ್‌ಗೆ ಮೋದಿ ಪ್ರಚಾರದಿಂದ ಪ್ಲಸ್ ಆಗೋ ಸಾಧ್ಯತೆ ಇದೆ. ದೇವೇಗೌಡ ಮತ್ತು ಕುಮಾರಸ್ವಾಮಿ ಆಗಮನದಿಂದಾಗಿ ಒಕ್ಕಲಿಗ ಮತಗಳು ಕ್ರೋಢೀಕರಣ ಆಗುವ ಲೆಕ್ಕಾಚಾರವೂ ಶುರುವಾಗಿದೆ.

## ಯತ್ನ

ಇದಕ್ಕೆ ಸಿದ್ದರಾಮಯ್ಯ ಮತ್ತು ಶಿವಕುಮಾರ್ ಪ್ರತಿಕ್ರಿಯಿಸಿದ್ದಾರೆ. ನೇಹಾ ಹಿರೇಮಠ್‌ರನ್ನು ಫಯಾಜ್ ಚಾಕುವಿನಿಂದ ಇರಿದು ಕೊಂದಿದ್ದ.

ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ಚೆನ್ನಾಗಿದೆ. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು ಸರ್ಕಾರದ ಕರ್ತವ್ಯ. ಅದನ್ನು ನಾವು ಮಾಡುತ್ತಿದ್ದೇವೆ ಎಂದು ಹೇಳಿದ ಸಿದ್ದರಾಮಯ್ಯ, 'ವೈಯಕ್ತಿಕ ಕಾರಣದಿಂದ' ನೇಹಾ ಕೊಲೆಯಾಗಿದೆ ಎಂದು ಹೇಳಿದ್ದಾರೆ.

ಈ ಮಧ್ಯೆ, ನೇಹಾ ಹತ್ಯೆಯನ್ನು ಶಿವಕುಮಾರ್ ಸಹ ಖಂಡಿಸಿದ್ದು, ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಹೇಳಿದ್ದಾರೆ. ಯಾರೇ ಕಾನೂನನ್ನು ಕೈಗೆ ತೆಗೆದುಕೊಂಡರೂ ನಾವು ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುತ್ತೇವೆ. ಇದಕ್ಕೆ ಸರ್ಕಾರ ಬದ್ಧವಾಗಿದೆ. ಯಾರೊಬ್ಬರೂ (ಸರ್ಕಾರದಿಂದ) ಪೊಲೀಸರ ಕೆಲಸಕ್ಕೆ ಅಡ್ಡಿಪಡಿಸುವುದಿಲ್ಲ ಎಂದು ಶಿವಕುಮಾರ್ ಹೇಳಿದ್ದಾರೆ.

ಬಿಜೆಪಿ ನಮಗೆ ಬೆದರಿಕೆ ಹಾಕಲು ಪ್ರಯತ್ನಿಸುತ್ತಿದೆ. ಕರ್ನಾಟಕವು ಅತ್ಯುತ್ತಮ ಕಾನೂನು ಮತ್ತು ಸುವ್ಯವಸ್ಥೆಯನ್ನು ಹೊಂದಿದೆ. ಬಿಜೆಪಿಯವರು ರಾಷ್ಟ್ರಪತಿ ಆಡಳಿತವನ್ನು ಹೇರಲಿದ್ದೇವೆ ಎಂದು ಪರೋಕ್ಷವಾಗಿ ಮತದಾರರಿಗೆ ಹೇಳುತ್ತಿದ್ದಾರೆ. ಪ್ರತಿಪಕ್ಷದ ನಾಯಕ ಆರ್ ಅಶೋಕ ಗೋಪ್ಯವಾಗಿ ಅದನ್ನೇ ಮಾಡಲು ಪ್ರಯತ್ನಿಸುತ್ತಿದ್ದಾರೆ. ಅದಕ್ಕಾಗಿಯೇ ನಾಟಕ ಮಾಡುತ್ತಿದ್ದಾರೆ. ಆದರೆ ಅವರು ಅದನ್ನು ಮಾಡಲು ಸಾಧ್ಯವಿಲ್ಲ. ಇದು ಅಸಾಧ್ಯ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ.

## ಹೆಚ್ಚು

ಬಾಲಯ್ಯ ಅವರ ಪತ್ನಿ ವಸುಂಧರಾ 140 ಕೋಟಿ ರೂಪಾಯಿಯ ಆಸ್ತಿ ಹೊಂದಿದ್ದು, ಬಾಲಯ್ಯ ಪುತ್ರ ಮೋಕ್ಷಜ್ಞ ಹೆಸರಿನಲ್ಲಿ 58 ಕೋಟಿ ರೂಪಾಯಿ ಆಸ್ತಿ ಇದೆ. ಒಟ್ಟಾರೆ ಬಾಲಯ್ಯ ಅವರ ಕುಟುಂಬದ ಆಸ್ತಿ 280.64 ಕೋಟಿ ರೂಪಾಯಿ ಘೋಷಣೆ ಆಗಿದೆ.

### ಮದುವೆಗಾಗಿ ಫಯಾಜ್ ನಮಗೆ ಪೀಡಿಸುತ್ತಿದ್ದ

# ಮಗಳಿಗೆ ಜೀವ ಬೆದರಿಕೆ ಹಾಕಿದ್ದ

**ಹುಬ್ಬಳ್ಳಿ:** ವಿದ್ಯಾರ್ಥಿ ನೇಹಾ ಹಿರೇಮಠ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ಫಯಾಜ್ ವಿರುದ್ಧ ನೇಹಾ ತಂದೆ ನಿರಂಜನ ಹಿರೇಮಠ ದೂರು ದಾಖಿಸಿದ್ದಾರೆ. ದೂರಿನಲ್ಲಿ ''ಆರೋಪಿ ಫಯಾಜ್ ಮತ್ತು ನೇಹಾ ಸಹಪಾಠಿಗಳು. ಬಿಸಿಎ ಅಂತಿಮ ವರ್ಷದಲ್ಲಿ ಓದುತ್ತಿರುವಾಗ ಫಯಾಜ್ ನೇಹಾಳಿಗೆ ಪ್ರಪೋಸ್ ಮಾಡಿದ್ದನು. ಅಲ್ಲದೆ ನಿಮ್ಮ ಮಗಳನ್ನು ನನಗೆ ಮದುವೆ ಮಾಡಿಕೊಡಿ ಅಂತ ನೇಹಾ ಪೋಷಕರಿಗೆ ಪದೇ ಪದೇ ಕರೆ ಮಾಡಿ ಪೀಡಿಸುತ್ತಿದ್ದನು. ಆಗ ನೇಹಾ ಪೋಷಕರು ನಮ್ಮ ಮಗಳು ನಿನ್ನನ್ನು ಇಷ್ಟಪಡುತ್ತಿಲ್ಲ, ಅವಳಿಗೆ ಹೆಚ್ಚಿನ ವ್ಯಾಸಂಗ ಮಾಡುವ ಇಚ್ಛೆ ಇದೆ ಎಂದು ಫಯಾಜ್ ಗೆ ಹೇಳಿದ್ದಾರೆ.

ಇದರಿಂದ ಕೋಪಗೊಂಡ ಫಯಾಜ್ ಗುರುವಾ (ಏ.18) ರಂದು ಸಾಯಂಕಾಲ 4:30ಕ್ಕೆ ನೇಹಾ ಹಿರೇಮಠ ಅವರ ಕತ್ತು, ಹೊಟ್ಟೆ ಮತ್ತು ಕಾಲಿಗೆ 7–8 ಬಾರಿ ಇರಿದು ಕೊಲೆ ಮಾಡಿದ್ದಾನೆ'' ಎಂದು ದೂರಿನಲ್ಲಿ ನೇಹಾ ತಂದೆ ನಿರಂಜನ ಹಿರೇಮಠ ದಾಖಲಸಿದ್ದಾರೆ.



ಈ ವಿಚಾರಕ್ಕೆ ಸಂಬಂಧಿಸಿದಂತೆ ನೇಹಾ ಪೋಷಕರು ಮಾತನಾಡಿ ''ನೇಹಾಳನ್ನು ಪ್ರೀತಿ ಮಾಡುತ್ತಿದ್ದೇನೆ, ಮದುವೆ ಮಾಡಿಕೊಡಿ ಅಂತ ಫಯಾಜ್ 4–5 ತಿಂಗಳಿಂದ ಬೆನ್ನು ಬಿದ್ದಿದ್ದನು. ಹೆಚ್ಚಿನ ವ್ಯಾಸಂಗ ಮಾಡುವುದಿದೆ ಅಂತ ಫಯಾಜ್ ನ ಫಯಾಜ್ ತಂದೆ, ತಾಯಿಗೆ ದೂರವಾಣಿ ಕರೆ ಮಾಡಿ ಹೇಳಿದ್ದೇವು. ಇಷ್ಟಾದರೂ ನಮ್ಮ ಮಗಳ ಬೆನ್ನು ಬಿಟ್ಟಿರಲಿಲ್ಲ. ಮದುವೆಯಾಗದಿದ್ದರೆ ನಿನ್ನನ್ನು ಜೀವಂತವಾಗಿ ಬಿಡುವುದಿಲ್ಲ ಎಂದು ಬೆದರಿಕೆ ಹಾಕಿದ್ದನು. ಈ ಬಗ್ಗೆ ನೇಹಾ ನಮಗೆ ಹೇಳಿದ್ದಳು'' ನೇಹಾ ಪೋಷಕರು ಹೇಳಿದರು.

**ನ್ಯಾಯ ಕೊಡಿಸುವ ಪ್ರಯತ್ನ ಮಾಡುತ್ತೇನೆ: ಹೆಬ್ಬಾಳ್ಕರ್:** ನೇಹಾ ಮನೆಗೆ ಇಂದು (ಏ.20) ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಭೇಟಿ ನೀಡಿ ನೇಹಾ ಕುಟುಂಬಕ್ಕೆ ಸಾಂತ್ವನ ಹೇಳಿದರು. ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ನೇಹಾ ತಂದೆ, ತಾಯಿ ತಮ್ಮ ದುಃಖವನ್ನು ತೋಡಿಕೊಂಡಿದ್ದಾರೆ. ಸೂಕ್ತ ತನಿಖೆ ಮಾಡಿ ನ್ಯಾಯ ಕೊಡಿಸುವ ಪ್ರಯತ್ನ ಮಾಡುತ್ತೇನೆ. ನಿಷ್ಪಕ್ಷಪಾತವಾಗಿ ತನಿಖೆ ಆಗಲು ನಾನು ಸಹಾಯ ಮಾಡುತ್ತೇನೆ. ಇಂತಹ ಕೃತ್ಯವೆಸಗಿದವರಿಗೆ ಕಠಿಣ ಶಿಕ್ಷೆಯಾಗಬೇಕು. ನಿಷ್ಪಕ್ಷಪಾತವಾಗಿ ತನಿಖೆ ಆಗುತ್ತೆ ಎಂದು ಭರವಸೆ ಕೊಟ್ಟಿದ್ದೇನೆ. ನಾನು ಬೇರೆ ವಿಚಾರ ಬಗ್ಗೆ ಮಾತನಾಡಿದರೆ ತನಿಖೆ ಬೇರೆ ಆಗುತ್ತೆ. ನಿರಂಜನ ಹಿರೇಮಠ ಕುಟಂಬ ಜತೆ ನಮ್ಮ ಪಕ್ಷದವರು ನಿಲ್ಲುತ್ತೇವೆ ಎಂದು ಹೇಳಿದರು.

**ತಕ್ಕ ಶಿಕ್ಷೆ ಆಗಬೇಕು: ಫಕೀರ ಸಿದ್ದೇಶ್ವರ ಸ್ವಾಮೀಜಿ:** ಯಾರು ತಪ್ಪು ಮಾಡಿದ್ದಾರೆ ಅವರಿಗೆ ತಕ್ಕ ಶಿಕ್ಷೆ ಆಗಬೇಕು. ಕಾಲಕ್ಕೆ ತಕ್ಕಂತೆ ಕಾನುನು ಬದಲಾಗಬೇಕು. ದುರಾಸೆ ಬಹಳ ಬೆಳೆದಿದೆ, ಆಚಾರ ವಿಚಾರ ಕಡಿಮೆ ಆಗಿದೆ. ಮಕ್ಕಳು ಮಾತು ಕೇಳದೆ ಇರುವುದರಿಂದ ಈ ರೀತಿ ಆಗುತ್ತಿದೆ ಎಂದು ಶಿರಹಟ್ಟಿ ಫಕೀರ ಸಿದ್ದೇಶ್ವರ ಸ್ವಾಮೀಜಿ ಹೇಳಿದರು.

## ಗ್ಯಾಂಗ್ ಸ್ಟರ್ ಹೆಸರಲ್ಲಿ ಸಲ್ಲು ಮನೆಯಿಂದ ಕ್ಯಾಬ್ ಬುಕ್ ಮಾಡಿದ ವ್ಯಕ್ತಿ

ಸಲ್ಮಾನ್ ಖಾನ್ ಅವರು ದೊಡ್ಡ ಮಟ್ಟದಲ್ಲಿ ಸುದ್ದಿ ಆಗುತ್ತಿದ್ದಾರೆ. ಅವರಿಗೆ ದಿನ ಕಳೆದಂತೆ ಬೆದರಿಕೆ ಹೆಚ್ಚುತ್ತಿದೆ. ಇತ್ತೀಚೆಗೆ ಅವರ ಮನೆಯ ಮೇಲೆ ಗುಂಡಿನ ದಾಳಿ ನಡೆದಿತ್ತು. ಈ ಪ್ರಕರಣಕ್ಕೆ ಸಂಬಂಧಿಸಿ ಮೂವರನ್ನು ಬಂಧಿಸಲಾಗಿತ್ತು. ಈಗ ಮತ್ತೊಂದು ಪ್ರಕರಣ ನಡೆದಿದೆ. ಗ್ಯಾಂಗ್ ಸ್ಟಾರ್ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ ನಿಂದ ಸಲ್ಲುಗೆ ಜೀವ ಬೆದರಿಕೆ ಇದೆ. ಈಗ ಮತ್ತೋರ್ವ ವ್ಯಕ್ತಿ ಅರೆಸ್ಟ್ ಆಗಿದ್ದಾರೆ.

ರೋಹಿತ್ ತ್ಯಾಗಿ ಎಂಬ 20 ವರ್ಷದ ವ್ಯಕ್ತಿ ಸಲ್ಮಾನ್ ಖಾನ್ ಮನೆಯಿಂದ ಕಾರ್ ಬುಕ್ ಮಾಡಿದ್ದ. ಇಷ್ಟೇ ಆಗಿದ್ದರೆ ಅಷ್ಟೇನು ಸಮಸ್ಯೆ ಆಗುತ್ತಿರಲಿಲ್ಲವೇನೋ. ಆತ ಕ್ಯಾಬ್ ಬುಕ್ ಮಾಡಿದ್ದು ಗ್ಯಾಂಗ್ ಸ್ಟರ್ ಲಾರೆನ್ಸ್ ಬಿಷ್ಣೋಯ್ ಹೆಸರಿನಿಂದ. ಈ ಕಾರಣಕ್ಕೆ ಆತನನ್ನು ಬಂಧಿಸಲಾಗಿದೆ. ಕ್ಯಾಬ್ ಬುಕ್ ಮಾಡಿದವನು ಉತ್ತರ ಪ್ರದೇಶದ ಗಜಿಯಾಬಾದ್ ನವನು.

ಕ್ಯಾಬ್ ಡ್ರೈವರ್ ಸಲ್ಮಾನ್ ಖಾನ್ ವಾಸವಾಗಿರುವ ಗ್ಯಾಲಾಕ್ಸಿ ಅಪಾರ್ಟ್ ಮೆಂಟ್ ಬಳಿ ಬಂದಿದ್ದಾನೆ. 'ಲಾರೆನ್ಸ್ ಬಿಷ್ಣೋಯ್ ಕ್ಯಾಬ್ ಬುಕ್ ಮಾಡಿದ್ದಾರೆ' ಎಂದು ಸೆಕ್ಯುರಿಟಿ ಬಳಿ ಹೇಳಿದ್ದಾರೆ. ಇದನ್ನು ಕೇಳಿ ಸೆಕ್ಯುರಿಟಿ ಶಾಕ್ ಆಗಿದ್ದಾರೆ. ತಕ್ಷಣ ಪೊಲೀಸ್ ಠಾಣೆಗೆ ಮಾಹಿತಿ



ನೀಡಿದ್ದಾರೆ. ಆ ಬಳಿಕ ಪೊಲೀಸರು ತನಿಖೆ ನಡೆಸಿದಾಗ ಇದು ಫೇಕ್ ಬುಕಿಂಗ್ ಅನ್ನೋದು ಗೊತ್ತಾಗಿದೆ.

ರೋಹಿತ್ ತ್ಯಾಗಿ ಎಂಬಾತ ಈ ಕ್ಯಾಬ್ ಬುಕ್ ಮಾಡಿದ್ದಾನೆ ಅನ್ನೋದು ಪೊಲೀಸರಿಗೆ ಗೊತ್ತಾಗಿದೆ. ಆ ಬಳಿಕ ಆತನ ಬಂಧಿಸಲಾಗಿದೆ. ಪ್ರ್ಯಾಂಕ್ ಮಾಡಲು ಈ ರೀತಿ ಮಾಡಿದ್ದಾಗಿ ಆತ ಒಪ್ಪಿಕೊಂಡಿದ್ದಾರೆ. ಸದ್ಯ ಗಜಿಯಾಬಾದ್ ನಿಂದ ಪೊಲೀಸರು ಅರೆಸ್ಟ್ ಮಾಡಿದ್ದಾರೆ.

ಸಲ್ಮಾನ್ ಖಾನ್ ಅವರು ಸದ್ಯ ದುಬೈನಲ್ಲಿದ್ದಾರೆ. ಸಲ್ಮಾನ್ ಖಾನ್ ಅವರಿಗೆ ಭಾರತದಲ್ಲಿ ವೈ ಪ್ಲಸ್ ಭದ್ರತೆ ನೀಡಲಾಗಿದೆ. ಬುಲೆಟ್ ಪ್ರೂಫ್ ಕಾರಿನಲ್ಲಿ ಅವರು ವಿಮಾನ ನಿಲ್ದಾಣಕ್ಕೆ ಬಂದಿದ್ದಾರೆ. ವರದಿಗಳ ಪ್ರಕಾರ, ಸಲ್ಮಾನ್ ಖಾನ್ ಅವರು ದುಬೈನಲ್ಲಿ ನಡೆಯುವ ಒಂದು ಕಾರ್ಯಕ್ರಮಕ್ಕೆ ಹಾಜರಿ ಹಾಕಲಿದ್ದಾರೆ.

## ಭಟ್ಕಳದ ಮಾವಿನಕುರ್ವೆ ಬಳಿ ಮೀನುಗಾರಿಕಾ ಬೋಟ್ ಮುಳುಗಡೆ, ನಾಲ್ವರ ರಕ್ಷಣೆ

**ಕಾರವಾರ:** ಅರಬ್ಬೀ ಸಮುದ್ರದಲ್ಲಿ ಗಾಳಿ ಮಳೆಗೆ ಮೀನುಗಾರಿಕಾ ಬೋಟ್ ಶನಿವಾರ ಬೆಳಗ್ಗೆ ಮುಳುಗಡೆಯಾಗಿದೆ. ಉತ್ತರಕನ್ನಡ ಜಿಲ್ಲೆಯ ಭಟ್ಕಳದ ಮಾವಿನಕುರ್ವೆ ಮೀನುಗಾರಿಕಾ ಬಂದರು ವ್ಯಾಪ್ತಿಯಲ್ಲಿ 'ಓಂ ಮಹಾಗಣಪತಿ' ಹೆಸರಿನ ಬೋಟ್ ಮುಳುಗಡೆಯಾಗಿದೆ. ಬೋಟ್ ನಲ್ಲಿದ್ದ 4 ಮಂದಿ ಮೀನುಗಾರರ ರಕ್ಷಣೆ ಮಾಡಲಾಗಿದೆ.



ಮುಳುಗಡೆಯಾಗಿರುವ ಬೋಟ್, ಮಹಾದೇವ ಖಾರ್ವಿ ಎಂಬವರಿಗೆ ಸೇರಿದ್ದಾಗಿದೆ.

ಮುಂಜಾನೆ 5 ಗಂಟೆಯ ವೇಳೆಗೆ 4 ಮಂದಿ ಮೀನುಗಾರರು ಮೀನುಗಾರಿಕೆಗೆ ತೆರಳಿದ್ದರು. ಆದರೆ, ಅರಬ್ಬೀ ಸಮುದ್ರದಲ್ಲಿ ಬೆಳಗ್ಗೆ 7 ಗಂಟೆ ಸುಮಾರಿಗೆ ಕಾಣಿಸಿಕೊಂಡ ಭಾರೀ ಗಾಳಿಮಳೆಗೆ ಬೋಟ್ ಸಂಪೂರ್ಣ ಮುಳುಗಡೆಯಾಗಿದೆ. ಕೂಡಲೇ ಸ್ಥಳದಲ್ಲಿದ್ದ ಇನ್ನೊಂದು ಬೋಟ್‌ನವರು ಮೀನುಗಾರರನ್ನು ರಕ್ಷಣೆ ಮಾಡಿದ್ದಾರೆ. ದುರ್ಘಟನೆಯಿಂದ ಬೋಟ್ ಮಾಲಕರಿಗೆ ಲಕ್ಷಾಂತರ ರೂ. ನಷ್ಟವಾಗಿದೆ. ಉತ್ತರಕನ್ನಡ ಜಿಲ್ಲೆಯ ಕರಾವಳಿಯಾದ್ಯಂತ ಭಾರೀ ಗಾಳಿ ಮಳೆ ಶನಿವಾರ ಬೆಳಗ್ಗೆಯೇ ಪ್ರಾರಂಭಗೊಂಡಿದೆ.

ಶುಕ್ರವಾರ ರಾತ್ರಿ, ಬೆಂಗಳೂರು ಸೇರಿದಂತೆ ರಾಜ್ಯದ ಹಲವು ಕಡೆಗಳಲ್ಲಿ ಭಾರಿ ಮಳೆಯಾಗಿದೆ. ಬೆಂಗಳೂರಿನ ಕೆಂಗೇರಿ, ಕುಂಬಳಗೋಡು, ಯಲಹಂಕ, ನೆಲಮಂಗಲ ಸೇರಿದಂತೆ ಹಲವೆಡೆ ಮಳೆಯಾಗಿದೆ. ದಕ್ಷಿಣ ಕನ್ನಡ ಜಿಲ್ಲೆ, ಉತ್ತರ ಕನ್ನಡ ಜಿಲ್ಲೆ, ಶಿವಮೊಗ್ಗದ ವಿವಿಧ ಕಡೆಗಳಲ್ಲಿಯೂ ಮಳೆಯಾಗಿದೆ.

## ವಿವಿಧ ಇಲಾಖೆಗಳ ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಅರ್ಜಿ

**ಬೆಂಗಳೂರು:** ಕರ್ನಾಟಕ ಲೋಕ ಸೇವಾ ಆಯೋಗವು ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ಮತ್ತು ತಿದ್ದುಪಡಿ ನಿಯಮ 2022ರನ್ವಯ ವಿವಿಧ ಇಲಾಖೆಗಳಗ್ರೂಪ್- ಬಿ ವೃಂದದ 277 ಹಾಗೂ ಹೈದ್ರಾಬಾದ್ ಕರ್ನಾಟಕದಡಿ 50 ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಭರ್ತಿ ಮಾಡಲು ಆನ್‌ಲೈನ್ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಜಿಗಳನ್ನು 2024ನೇ ಏಪ್ರಿಲ್ 15 ರಿಂದ ಸಲ್ಲಿಸಬಹುದಾಗಿದ್ದು, ಮೇ 14 ಅರ್ಜಿ ಸಲ್ಲಿಸಲು ಹಾಗೂ ಶುಲ್ಕ ಪಾವತಿಸಲು ಕೊನೆಯ ದಿನವಾಗಿರುತ್ತದೆ. ಅಭ್ಯರ್ಥಿಗಳು ಅರ್ಜಿಗಳನ್ನು ಭರ್ತಿ ಮಾಡುವ ವಿಧನ, ಶುಲ್ಕ ಪಾವತಿ, ಹುದ್ದೆಗಳ ವರ್ಗೀಕರಣ, ವಿದ್ಯಾರ್ಹತೆ, ವಯೋಮಿತಿ, ಇತ್ಯಾದಿ ಹೆಚ್ಚಿನ ವಿವರಗಳಿಗಾಗಿ 2024ರ ಮಾರ್ಚ್ 13ರ ಆಯೋಗದ ಅಧಿಸೂಚನೆಯಲ್ಲಿ ಲಭ್ಯವಿರುವ ಮಾಹಿತಿಗಳನ್ನು ಜಾಲತಾಣ http://kpsc.kar.nic.in/Notificationನಲ್ಲಿ ನೋಡಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದೆ.

## ಟೆಲಿ ಮಾನಸ್ 1446 ಸಹಾಯವಾಣಿ ಸ್ಥಾಪನೆ

**ಬೆಂಗಳೂರು:** ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಅಂಗವಾಗಿ ದೇಶಾದ್ಯಂತ ಸರ್ವರಿಗೂ ಟೆಲಿ ಮಾನಸಿಕ ಆರೋಗ್ಯ ಸೇವೆಗಳನ್ನು ಒದಗಿಸುವ ಸಲುವಾಗಿ "ಟೆಲಿ ಮಾನಸ್" ಅನ್ನು ಅಕ್ಟೋಬರ್ 10, 2022 ರಂದು ಸ್ಥಾಪಿಸಲಾಗಿದೆ. ಇದು ಸಾರ್ವಜನಿಕರಿಗೆ ಉಚಿತ ಟೆಲಿ ಮಾನಸಿಕ ಆರೋಗ್ಯ ಸೇವೆಗಳನ್ನು 24/7 ನೀಡುತ್ತಿದ್ದು, ಇದಕ್ಕಾಗಿಯೇ ಉಚಿತ ಟೋಲ್ ಫ್ರೀ ಸಹಾಯವಾಣಿ 14416 ಮತ್ತು 1800-891-4416 ಅನ್ನು ಸ್ಥಾಪಿಸಲಾಗಿದೆ. ಅಲ್ಲದೇ ಕರ್ನಾಟಕದಲ್ಲಿ ಎರಡು ಟೆಲಿ ಮಾನಸ್ ಘಟಕಗಳನ್ನು ಸಹ ಸಾರ್ವಜನಿಕರ ಉಪಯೋಗಕ್ಕೆ ತೆರೆಯಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ಟಿ.ಕೆ.ಅನಿಲ್‌ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚೆಕ್ ಪೋಸ್ ಗಳಿಗೆ ತಪಾಸಣೆ ವೇಳೆ 12.33 ಲೀ ಮದ್ಯ ವಶಕ್ಕೆ

**ರಾಮನಗರ:** ಜಿಲ್ಲೆಯಾದ್ಯಂತ ಕಟ್ಟುನಿಟ್ಟಾಗಿ ಮಾದರಿ ನೀತಿ ಸಂಹಿತೆ ಜಾರಿಗೊಳಿಸಿದ್ದು ಏ. 19ರ ಬೆಳಿಗ್ಗೆ 9 ಗಂಟೆಯ ವರೆಗೆ ಒಟ್ಟು 12.33ಲೀ. ಮದ್ಯ ಜಿಲ್ಲೆಯ ವಿವಿಧ ಚೆಕ್‌ಪೋಸ್ಟಗಳಲ್ಲಿ ತಪಾಸಣೆ ವೇಳೆ ವಶಕ್ಕೆ ಪಡೆಯಲಾಗಿದೆ. ಅಬಕಾರಿ ಇಲಾಖೆ ಕಾರ್ಯಾಚರಣೆ ವೇಳೆ 4,608 ರೂ. ಮೌಲ್ಯದ 12.33 ಲೀ ಮದ್ಯ ವಶಕ್ಕೆ ಪಡೆದು ಪ್ರಕರಣಗಳನ್ನು ದಾಖಲಿಸಲಾಗಿದೆ.

## ಮುದ್ರಣ ಮಾಧ್ಯಮದಲ್ಲಿ ಜಾಹೀರಾತು ಪ್ರಕಟಣೆಗೆ ಪೂರ್ವ-ಪ್ರಮಾಣೀಕರಣ ಅನುಮತಿ ಕಡ್ಡಾಯ

**ಚಿಕ್ಕಬಳ್ಳಾಪುರ:** ಲೋಕಸಭಾ ಸಾರ್ವತ್ರಿಕ ಚುನಾವಣೆ 2024ರ ನಿಮಿತ್ತ ಏಪ್ರಿಲ್ 25 ಮತ್ತು ಏಪ್ರಿಲ್ 26 ರಂದು ಮುದ್ರಣ ಮಾಧ್ಯಮದಲ್ಲಿ ಯಾವುದೇ ಜಾಹೀರಾತು ನೀಡಲು ಜಿಲ್ಲಾ ಎಂಸಿಎಂಸಿ ಸಮಿತಿಯಿಂದ ಪೂರ್ವ ಪ್ರಮಾಣೀಕರಣ ಪಡೆಯುವುದು ಕಡ್ಡಾಯವಾಗಿದೆ. ಚುನಾವಣಾ ಆಯೋಗದ ನಿರ್ದೇಶನದಂತೆ ಮುದ್ರಣ ಮಾಧ್ಯಮದಲ್ಲಿ ಯಾವುದೇ ಪ್ರಚೋದಕ, ತಪ್ಪು ದಾರಿಗೆಳೆಯುವ ಅಥವಾ ದ್ವೇಷದ ಜಾಹೀರಾತುಗಳಿಂದ ಯಾವುದೇ ಅಹಿತಕರ ಘಟನೆ ನಡೆಯದಂತೆ ಖಚಿತಪಡಿಸಿಕೊಳ್ಳಲು, ಯಾವುದೇ ರಾಜಕೀಯ ಪಕ್ಷಗಳು, ಅಭ್ಯರ್ಥಿಗಳು, ಯಾವುದೇ ಇತರ ಸಂಸ್ಥೆಗಳು ಅಥವಾ ವ್ಯಕ್ತಿಗಳು ರಾಜಕೀಯ ಜಾಹೀರಾತುಗಳನ್ನು ಮತದಾನದ ದಿನ ಹಾಗೂ ಮತದಾನದ ಮುನ್ನ ದಿನದಂದು ಮುದ್ರಣ ಮಾಧ್ಯಮದಲ್ಲಿ ಪ್ರಕಟಿಸಲು ಜಿಲ್ಲಾ ಮಟ್ಟದ ಎಂಸಿಎಂಸಿ ಸಮಿತಿಯಿಂದ ಪೂರ್ವ-ಪ್ರಮಾಣೀಕರಣ ಅನುಮತಿಯನ್ನು ಕಡ್ಡಾಯವಾಗಿ ಪಡೆಯಬೇಕು. ಜಾಹೀರಾತು ನೀಡಬೇಕಾಗಿದ್ದಲ್ಲಿ ಉದ್ದೇಶಿಸಿರುವ ಜಾಹೀರಾತು ಹಾಗೂ ಪತ್ರಿಕೆಗಳ ಹೆಸರುಗಳ ವಿವರದೊಂದಿಗೆ ಅರ್ಜಿಯನ್ನು ಜಾಹೀರಾತು ಪ್ರಕಟಿಸಲು ಉದ್ದೇಶಿಸಿರುವ ದಿನಾಂಕಕ್ಕಿಂತ ಕನಿಷ್ಠ 2 ದಿನಗಳ ಮೊದಲು ಜಿಲ್ಲಾಡಳಿತ ಭವನದ 2ನೇ ಮಹಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಎಂಸಿಎಂಸಿ ಸಮಿತಿಗೆ ಸಲ್ಲಿಸಬೇಕು. ರಾಜಕೀಯ ಜಾಹೀರಾತುಗಳ ವಿಷಯಗಳನ್ನು ಪೂರ್ವ-ಪ್ರಮಾಣೀಕರಿಸದ ಹೊರತು ಮತದಾನದ ದಿನದಂದು ಮತ್ತು ಮತದಾನದ ದಿನದ ಮುನ್ನ ದಿನದಂದು ಮುದ್ರಣ ಮಾಧ್ಯಮದಲ್ಲಿ ಯಾವುದೇ ಜಾಹೀರಾತುಗಳನ್ನು ಪ್ರಕಟಿಸುವುದನ್ನು ನಿರ್ಬಂಧಿಸಲಾಗಿರುತ್ತದೆ ಎಂದು ಚುನಾವಣಾ ಆಯೋಗ ಪ್ರಕಟಣೆಯಲ್ಲಿ ತಿಳಿಸಿದೆ.

## ಲಕ್ಷ್ಮಣ ಪರ ಕಾಂಗ್ರೆಸ್ ಕಾರ್ಯಕರ್ತರು ಬಿರುಸಿನ ಪ್ರಚಾರ

**ಮೈಸೂರು:** ನಗರದ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಅಂಬೇಡ್ಕರ್ ನಗರದಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರದ ಸಾಧನೆಯುಳ್ಳ ಕರಪತ್ರವನ್ನು ಮನೆ ಮನೆಗೆ ತೆರಳಿ ಮೈಸೂರು ಮತ್ತು ಕೊಡಗು ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಎಂ ಲಕ್ಷ್ಮಣ್ ಪರ ಕರಪತ್ರ ನೀಡಿ ಬಿರುಸಿನ ಪ್ರಚಾರಗೊಳಿಸಿದ ಕೆಪಿಸಿಸಿ ಸದಸ್ಯರಾದ ನಜರ್ಬಾದ್ ನಟರಾಜ್, ಅಲ್ಪಸಂಖ್ಯಾತ ಘಟಕ ಜಿಲ್ಲಾ ಅಧ್ಯಕ್ಷ ಮೋಸಿನ್ ಖಾನ್, ಚಾಮುಂಡೇಶ್ವರಿ ಕ್ಷೇತ್ರದ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷರಾದ ಆರಿಫ್, ಲೋಕೇಶ್, ನೌಷದ್ ಹುಸೇನ್, ವರುಣ ಮಹದೇವ್, ಮಹೇಶ್ ಗಂಗಣ್ಣ ಹಾಜರಿದ್ದರು



# ಸ್ವಾವಲಂಬಿಯಾಗ ಬೇಕೆ ಹೊರತು ಎಂದು ಪರವಾಲಂಭಿಯಾಗಬಾರದು

ಮೈಸೂರು: ನಗರದ ವಿದ್ಯಾವರ್ಧಕ ಪ್ರಥಮದರ್ಜೆಕಾಲೇಜಿನಲ್ಲಿ ಇಂದು ಮೈಸೂರಿನ ಸಿಗ್ಮಾ ಸಹಯೋಗದೊಂದಿಗೆ ಕೆರಿಯರ್ ಗೈಡೆನ್ಸ್ ಸ್ಕಿಲ್ ಡೆವಲಪ್‌ಮೆಂಟ್ ಮತ್ತು ಪ್ಲೇಸ್‌ಮೆಂಟ್ ಸೆಲ್‌ನ ವತಿಯಿಂದಕಾಲೇಜಿನಲ್ಲಿಅಂತಿಮ ಪದವಿ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಉದ್ಯಮಲೋಕಕ್ಕೆ ವಿದ್ಯಾರ್ಥಿಗಳನ್ನು ಸಿದ್ದಗೊಳಿಸುವ ನಿಟ್ಟಿನಲ್ಲಿ ಒಂದು ಒಳನೋಟ ಕುರಿತುಒಂದು ದಿನದತರಬೇತಿಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದ ಈ ಸಂಬಂಧ ಸಂಪನ್ಮೂಲ ವ್ಯಕ್ತಿಯಾಗಿ, ತರಬೇತುದಾರರಾಗಿ, ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ದೇಶದಲ್ಲಿ ಹಲವು ರಾಜ್ಯಗಳ ಮುಖ್ಯಮಂತ್ರಿಗಳಿಗೆ ಪ್ರಧಾನ ಸಲಹೆಗಾರರಾಗಿ ಕಾರ್ಯನಿರ್ವಹಿಸಿರುವ ಡಾ.ಎಂ.ಬಿ.ಗುರುರಾಜ್‌ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ಕ್ರಿಯಾಶೀಲ ಚಟುವಟಿಕೆಗಳಿಂದ ವಿದ್ಯಾರ್ಥಿಗಳು ಸ್ವಾವಲಂಬಿಯಾಗ ಬೇಕೆ ಹೊರತುಎಂದೂ ಪರವಾಲಂಬಿಯಾಗಬಾರದೆಂದು ಕಾರ್ಯಗಾರದಲ್ಲಿ ಕಿವಿಮಾತು ಹೇಳಿದರು.

ಮುಂದುವರೆದುಉದ್ಯೋಗವರೆಸುವ ನಿಟ್ಟಿನಲ್ಲಿ ಹೇಗೆ



ಸಂದರ್ಶನಗಳಲ್ಲಿ ಪಾಲ್ಗೋಂಡುಆತ್ಮವಿಶ್ವಾಸದಿಂದಎದುರಿಸಬೆ ೀಕುಅಗತ್ಯವಾದ ಆಲೋಚನೆಗಳು ಹಾಗೂ ಕೌಶಲ್ಯಗಳೊಂದಿಗೆ ಹೊಸ ಸವಾಲುಗಳನ್ನು ಹೇಗೆ ಸ್ವೀಕರಿಸಿ ಯಶಸ್ಸು ಹೊಂದಬೇಕೆಂದು ಹತ್ತು ಹಲವು ಉದಾಹರಣೆಗಳ ಮುಖೇನಾ ತಿಳಿಸಿಕೊಟ್ಟರು.ಯಾವುದೇ ವಲಯವನ್ನು ಪ್ರವೇಶಿಸಿದರು ನೀವು ನೀವಾಗಿರಿ, ಸ್ವಯಂಕೇಂದ್ರೀತರಾಗಿರಿ ಮತ್ತು ವಿಷಯದಕೇಂದ್ರಿತವಾಗಿರಿಎಂದರಲ್ಲದೇ ವರ್ತಮಾನದ ಕಾರ್ಪೊರೇಟ್‌ಜಗತ್ತಿನಲ್ಲಿದಕ್ಷ ಉದ್ಯೋಗಿಯಾಗಲು ಪ್ರತಿಯೊಬ್ಬಯುವ ಆಕಾಂಕ್ಷಿಗಳು ಅತ್ಯತ್ತಮವಾದ ಭಾಷಾಕೌಶಲ್ಯಜೊತೆಗೆ ಸಾಫ್ಟ್ ಸಿಲ್ಸ್ ಮತ್ತು ಡೋಮೇಸ್ ಗಳ ಬಳಕೆಯ ಬಗ್ಗೆ ಒತ್ತಿ ಹೇಳಿದರು. ಪ್ರಸ್ತುತಇರುವ ಕಂಪನಿಗಳಿಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳಿಗೆ ಅಗತ್ಯ ಮಾಹಿತಿ ನೀಡಲುಕಾಲೇಜಿಗೆಉದ್ಯಮ ಮಾಹಿತಿಕೇಂದ್ರವನ್ನು ಹೊಂದುವಂತೆ ಸಲಹೆ ನೀಡಿದರು. ?ನನ್ನ ಸಾದನೆಯೇ ನನ್ನಗುರುತಿನಚೀಟಿ? ಎಂಬ ಸಂದೇಶವನ್ನು ವಿದ್ಯಾರ್ಥಿಗಳಿಗೆ ನೀಡಿದರು.ಕ್ರಿಯಾಶೀಲ ಯುವಶಕ್ತಿಯೇದೇಶದ ಭವಿಷ್ಯವೆಂದರು. ಕಾರ್ಯಗಾರದ ಅಧ್ಯಕ್ಷತೆಯನ್ನುಕಾಲೇಜಿನ ಪ್ರಾಂಶುಪಾಲರಾದ ಡಾ.ಎಸ್. ಮರೀಗೌಡರು ವಹಿಸಿದ್ದು, ಮುಂಬರುವ ಸವಾಲುಗಳನ್ನು ಎದುರಿಸಲುಉಜ್ವಲ ಆತ್ಮವಿಶ್ವಾಸದಿಂದ ಹೊರಹೊಮ್ಮಲು ವಿದ್ಯಾರ್ಥಿಗಳು ಇಂತಹ ಒಳ್ಳೆಯು ಅವಕಾಶಗಳನ್ನು ಬಳಸಿಕೊಳ್ಳುವಂತೆ ತಿಳಿಹೇಳಿದರು. ಸಂಯೋಜಕರಾದಪ್ರೊ. ಹರ್ಷಿತಾ.ಎಂ ಸ್ವಾಗತಿಸಿದ ಈ ಕಾರ್ಯಗಾರದಲ್ಲಿ ಪ್ರೊ. ಶಶಿಧರ್.ಎಸ್ ಉಪಸ್ಥಿತರಿದ್ದು, ಬೋದಕ ಮತ್ತು ಬೋಧಕೇತರ ವರ್ಗದವರಜೊತೆಗೆ ಹೆಚ್ಚಿನ ಸಂಖ್ಯೆಯಲ್ಲಿಅಂತಿಮ ವರ್ಷದ ಪದವಿ ವಿದ್ಯಾರ್ಥಿಗಳು ಕಾರ್ಯಗಾರದಲ್ಲಿ ಪಾಲ್ಗೋಡಿದ್ದರು.

### ಹಿರಿಯ ಪತ್ರಕರ್ತ ಸಾಮಾಜಿಕ ಚಿಂತಕ ಸುಧೀಂದ್ರ ಕುಲಕರ್ಣಿ ಎಚ್ಚರಿಕೆ

# ಏಕಚಕ್ರಾಧಿಪತ್ಯದ ನಾಯಕತ್ವ, ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕ

**ಬೆಂಗಳೂರು:** ಏಕಚಕ್ರಾಧಿಪತ್ಯದ ನಾಯಕತ್ವದಿಂದ ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕವಾಗುತ್ತದೆಯೇ ಹೊರತು, ಪೂರಕವಾಗುವುದಿಲ್ಲ ಎಂದು ಹಿರಿಯ ಪತ್ರಕರ್ತ ಸಾಮಾಜಿಕ ಚಿಂತಕ ಸುಧೀಂದ್ರ ಕುಲಕರ್ಣಿ ಎಚ್ಚರಿಸಿದರು.

ಬೆಂಗಳೂರು ನಗರ ವಿಶ್ವವಿದ್ಯಾಲಯದ ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ ವಿಭಾಗ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ಜ್ಞಾನಜ್ಯೋತಿ ಸಭಾಂಗಣದಲ್ಲಿ ಆಯೋಜಿಸಿದ್ದ ಜನತಂತ್ರ ವ್ಯವಸ್ಥೆಯಲ್ಲಿ ಮಾಧ್ಯಮ ಮತ್ತು ಪತ್ರಕರ್ತರು ಎಂಬ ವಿಶೇಷ ಉಪನ್ಯಾಸ ಹಾಗೂ ಸಂವಾದದಲ್ಲಿ ಅವರು ಮಾತನಾಡಿದರು.

ಇಂದಿರಾಗಾಂಧಿ ಕಾಲದಲ್ಲಿ ಏಕಚಕ್ರಧಿಪತ್ಯದ ಹಿನ್ನೆಲೆಯಲ್ಲಿ ಜಾರಿಯಾದ ತುರ್ತು ಪರಿಸ್ಥಿಯ ದಿನಗಳನ್ನು ನೆನಪು ಮಾಡಿದ ಅವರು, ಈಗಲೂ ಎಲ್ಲದಕ್ಕೂ ಮೋದಿ, ಮೋದಿ ಎನ್ನುವ ಪರಿಸ್ಥಿತಿ ನಿರ್ಮಾಣವಾಗುತ್ತಿರುವುದು ಒಳ್ಳೆಯ ಲಕ್ಷಣವಲ್ಲ ಎಂದರು.

ರಾಜಕೀಯ ಪಕ್ಷಗಳಲ್ಲಿ ಆಂತರಿಕ ಪ್ರಜಾಪ್ರಭುತ್ವ ಬಹಳ ಮುಖ್ಯವಾದದ್ದು. ಕಾಂಗ್ರೆಸ್‌ನಲ್ಲಿ ಹಿಂದೆ ಕಾಣೆಯಾಗಿದ್ದ ಆಂತರಿಕೆ ಪ್ರಜಾಪ್ರಭತ್ವ ಈಗ ಸ್ವಲ್ಪ ಕಾಣಿಸುತ್ತಿದೆ. ಆದರೆ, ಬಿಜೆಪಿಯಲ್ಲಿ ಆಂತರಿಕ ಪ್ರಜಾಪ್ರಭುತ್ವ ಮಾಯವಾಗಿದ್ದು, ಏಕವ್ಯಕ್ತಿ ನಿರ್ಧಾರಗಳೇ ಪ್ರಾಂಉಖ್ಯತೆ ಪಡೆಯುತ್ತಿವೆ ಎಂದರು.

ಲೋಕಸಭಾ ಚುನಾವಣೆಯಲ್ಲಿ ಭಾರೀ ಬಹುಮತದಿಂದ ಆಳುವ ಪಕ್ಷಕ್ಕೆ ಅಧಿಕಾರ ಸಿಕ್ಕರೆ ಪ್ರಜಾಪ್ರಭುತ್ವ ವ್ಯವಸ್ಥೆ ಉಳಿಯುವುದಿಲ್ಲ ಎಂದು ಎಚ್ಚರಿಸಿದರು.

ತುರ್ತು ಪರಿಸ್ಥಿತಿ ಕಾಲದಲ್ಲಿ ದೊಡ್ಡ ಆದರ್ಶವನ್ನು ಮುಂದಿಟ್ಟುಕೊಂಡು ಜನಸಂಘವು ಸಾಕಷ್ಟು ಕೆಲಸವನ್ನು ಮಾಡಿದೆ. ಬಳಿಕ ಅದು ರಾಜಕೀಯ ಪಕ್ಷವಾಗಿ ರೂಪಾಂತರವಾದ ಮೇಲೆ, ಅಟಲ್ ಬಿಹಾರಿ ವಾಜಪೇಯಿ ಅವರು ಆ ಪಕ್ಷವನ್ನು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಮರ್ಥವಾಗಿ ಮುನ್ನೆಡೆಸಿದ್ದಾರೆ. ಆಗಿನ ಕಾಲ ಘಟ್ಟಕ್ಕೂ ಈಗಿನ ಬಿಜೆಪಿಗೂ ಸಾಕಷ್ಟು ಬದಲಾವಣೆಗಳಾಗಿವೆ ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವಧಿಯಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳಾಗಿವೆ ಎನ್ನುವುದನ್ನು ಯಾರೂ ಅಲ್ಲಗಳೆಯಲಾರರು. ಆದರೆ, ಸಾಕಷ್ಟು ಲೋಪದೋಷಗಳು ಆಗಿರುವುದನ್ನು ಗಮನಿಸಬೇಕು. ಕಳೆದ 10 ವರ್ಷಗಳಲ್ಲಿ ವ್ಯಕ್ತಿ ಕೇಂದ್ರಿತ ರಾಜಕೀಯವು ಪ್ರಜಾಪ್ರಭುತ್ವಕ್ಕೆ ಮಾರಕವಾಗಿದೆ. ಪ್ರಜಾಪ್ರಭುತ್ವ, ಸಂವಿಧಾನದ ಆಶಯಗಳನ್ನು ಗಾಳಿಗೆ ತೂರುತ್ತಿರುವ ಆತಂಕ ಎದುರಾಗಿದೆ ಎಂದು ಹೇಳಿದರು.

ವ್ಯಕ್ತಿ ಕೇಂದ್ರಿತ ಮತ್ತು ಪರಿವಾರ ಕೇಂದ್ರಿತ ರಾಜಕಾರಣ ಮತ್ತು ಭ್ರಷ್ಟಾಚಾರದಿಂದ ಕಾಂಗ್ರೆಸ್ ಜನ ಮಾನ್ನಣೆ ಕಳೆದುಕೊಂಡಿದೆ. ಅಲ್ಲದೆ, ಆತ್ಮವಲೋಕನ ಮಾಡಿಕೊಳ್ಳದಿರುವುದು ಕೂಡ ಕಾಂಗ್ರೆಸ್ ಅವನತಿಗೆ ಕಾರಣವಾಗಿದೆ ಎಂದರು. ಐಟಿ, ಇಡಿ, ಸಿಬಿಐ ಗಳನ್ನು ಈ ಹಿಂದಿನ ಸರ್ಕಾರಗಳು ಕೂಡ ದುರುಪಯೋಗ ಮಾಡಿಕೊಂಡಿವೆ. ಆದರೆ ಈಗ ಆ ದುರುಪಯೋಗ ಪ್ರಮಾಣ ಇಂದು ಹೆಚ್ಚಳವಾಗಿದೆ. ಜನರೇ ಆಯ್ಕೆ ಮಾಡಿದ ಸರ್ಕಾರದ ಮುಖ್ಯಮಂತ್ರಿಗಳನ್ನು ಜೈಲಿಗೆ ಹಾಕುವ ಹಂತಕ್ಕೆ ಇದು ಬಂದು ನಿಂತಿರುವುದು ಆತಂಕ ತಂದಿದೆ ಎಂದರು. ಈ ಹಿಂದೆ ಕಾಂಗ್ರೆಸ್ ಮಾಡಿದ ಕೆಲಸವನ್ನೇ ಇಂದು ಬಿಜೆಪಿ ಮಾಡುತ್ತಿದೆ. ಎಲ್ಲವೂ ಹೀಗೆ ಮುಂದುವರಿಸಿದರೆ ಇಂದಿನ ಕಾಂಗ್ರೆಸ್ ಪರಿಸ್ಥಿತಿಯೇ ಬಿಜೆಪಿಗೂ ಬರುವ ದಿನಗಳು ದೂರವಿಲ್ಲ ಎಂದರು.

ಹಿಂದು ಧರ್ಮವನ್ನು ಘೋಷಿಸಿಕೊಂಡು ತಿರುಗಿದರೆ ಯಾವ ಸುಧಾರಣೆಯನ್ನು ತರಲು ಆಗುವುದಿಲ್ಲ. ಹಿಂಧೂ ಧರ್ಮದಲ್ಲಿ ಒಂದಷ್ಟು ಸುಧಾರಣೆ ಆಗಬೇಕು ಎನ್ನುವುದರ ಬಗ್ಗೆ ಚರ್ಚೆಯಾಗಬೇಕು. ನಿಜವಾದ ಹಿಂದು ಧರ್ಮ ಏನೆಂದು ತಿಳಿಸುವ ಕೆಲಸವಾಗಲಿ. ಇಂದಿನ ಪ್ರಮುಖ ರಾಜಕೀಯ ಪಕ್ಷವೊಂದು ಹಿಂದು ಧರ್ಮದ ರಾಜಕೀಯ ಲಾಭ ಪಡೆದುಕೊಳ್ಳುತ್ತಿದೆ. ಆದ್ದರಿಂದ ಸ್ವಾಮೀಜಿಗಳು, ಧರ್ಮಗುರುಗಳು ನಿಜವಾದ ಹಿಂದು ಧರ್ಮವೇನೆಂದು ತಿಳಿಸುವ ಕೆಲಸವನ್ನು ಮಾಡಬೇಕು ಎಂದು ಕರೆ ನೀಡಿದರು.



### ಒಕ್ಕೂಟ ವ್ಯವಸ್ಥೆ ಶಿಥಿಲ

**ಪ್ರಧಾನಿಯಾಗಿದ್ದ ಸಂಧರ್ಭದಲ್ಲಿ ಅವರೊಟ್ಟಿಗೆ ಕೆಲಸ ಮಾಡಿದ ಅನುಭವ ನನಗಿದೆ. ಆದಷ್ಟು ಪ್ರಜಾಪ್ರಭುತ್ವಾತ್ಮಕವಾಗಿ ನಡೆದುಕೊಳ್ಳುತ್ತಿದ್ದರು. ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳ ಸಭೆ ನಡೆಸಲು ಆಗಿನ ಸಿಎಂ ಎಸ್.ಎಂ.ಕೃಷ್ಣ ಒಪ್ಪಿಕೊಂಡು ಬಂದಿದ್ದರು. ಬಳಿಕ ಹೈಕಮಾಂಡ್ ವಿರೋಧಿಸಿದ್ದರಿಂದ ಕೃಷ್ಣ ಅವರು ಕೈಚೆಲ್ಲಿದರು. ಈ ಅಸಹಾಯಕತೆಯನ್ನು ಕೃಷ್ಣ ಅವರು ವಾಜಪೇಯಿಗೆ ಮನದಟ್ಟು ಮಾಡಿಕೊಟ್ಟದ್ದರು. ವಾಜಪೇಯಿ ಅವರು ಕೊನೇ ಪಕ್ಷ ಎಲ್ಲರನ್ನು ಒಳಗೊಳ್ಳುವಿಕೆಯ ಪ್ರಯತ್ನ ಮಾಡಿದ್ದರು. ಆದರೆ, ಇಂದಿನ ಪ್ರಧಾನಿ ಮೋದಿ ಅವರು ರಾಜ್ಯಗಳ ಮುಖ್ಯಮಂತ್ರಿಗಳಿಗೇ ಸಿಗುತ್ತಿಲ್ಲ. ಇದರಿಂದಾಗಿ ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರದ ಜೊತೆಗಿನ ರಾಜ್ಯಗಳ ಸಂಬಂದ ಶಿಥಿಲವಾಗುತ್ತಿದೆ ಎಂದರು.**

### ಸುನಿಲ್ ಬೋಸ್ ವಿರುದ್ದ ಅಪಪ್ರಚಾರ

**ಚಾಮರಾಜನಗರ: ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್ ವಿರುದ್ದ ಅಪಪ್ರಚಾರ ನಡೆಸಿರುವವರ ವಿರುದ್ದ ಕಾಂಗ್ರೆಸ್ ಜಿಲ್ಲಾ ಚುನಾವಣಾ ಅಧಿಕಾರಿ ಮತ್ತು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರಿಗೆ ದೂರು ನೀಡಿದೆ. ಕಾಂಗ್ರೆಸ್ ಪಕ್ಷದ ಸಾಮಾಜಿಕ ಜಾಲತಾಣದ ಮೈಸೂರು ಗ್ರಾಮಾಂತರ ಹಾಗೂ ಚಾಮರಾಜನಗರದ ಪದಾಧಿಕಾರಿಗಳಾದ ಹೇಮಂತ್ ಕುಮಾರ್ ಹಾಗೂ ಸೈಯದ್ ಅವರು ನಗರದ ಜಿಲ್ಲಾಧಿಕಾರಿ ಕಚೇರಿಗೆ ಭೇಟಿ ನೀಡಿದರು. 'ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್ ಅವರ ವಿರುದ್ಧ ಅಪಪ್ರಚಾರ ಮಾಡುತ್ತಿರುವ ಬಿಜೆಪಿಯ ಮಹದೇವಸ್ವಾಮಿ ಎನ್ ಹೊಂಗನೂರು, ಮಂಜು ಶಿವಪುರ, ಮೂರ್ತಿ ಮುತ್ತಿಗೆ, ಯೋಗೇಶ್ ಸಾಂಗ್ಲಿಯಾನ ಹಾಗೂ ಚರಣ್ ಎಂಬುವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು' ಎಂದು ಒತ್ತಾಯಿಸಿದರು.**

### ಆಯಾಮಗಳಲ್ಲಿ ಚರ್ಚೆಯಾಗಲಿ

**ಅಧ್ಯಕ್ಷತೆ ವಹಿಸಿದ್ದ ಕರ್ನಾಟ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಚುನಾವಣೆಯ ಹೊತ್ತಿನಲ್ಲಿ ಮಾಧ್ಯಮದ ಜವಬ್ದಾರಿ ಮತ್ತು ಪತ್ರಕರ್ತರ ಹೊಣೆಗಾರಿಕೆ ಮಹತ್ವದ್ದಾಗಿದ್ದು, ಈ ಹಿನ್ನೆಲೆಯಲ್ಲಿಯೇ ಎಲ್ಲಾ ಆಯಾಮಗಳಲ್ಲಿ ವಿಚಾರಗಳು ಮಂಥನವಾಗಲಿ ಎಂದು ಈ ಸಂವಾದ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು. ಬೆಂ.ನಗರ ವಿವಿ ಕುಲಪತಿ ಪ್ರೊ.ಲಿಂಗರಾಜ ಗಾಂಧಿ ಮಾತನಾಡಿ, ಚುನಾವಣೆಗಳು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಗೊಳಿಸುತ್ತವೆ. ಈ ವಿಷಯದಲ್ಲಿ ಇನ್ನಷ್ಟು ಸುಧಾರಣೆಗಳನ್ನು ಜನರು ಮತ್ತು ಸಮಾಜ ನಿರೀಕ್ಷಿಸಿದೆ ಎಂದು ಹೇಳಿದರು. ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥ ಪ್ರೊ. ಎನ್.ನರಸಿಂಹಮೂರ್ತಿ, ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ವೇದಿಕೆಯಲ್ಲಿದ್ದರು. ಇದೇ ಸಂದರ್ಭದಲ್ಲಿ ಸುಧೀಂಧ್ರ ಕುಲಕರ್ಣಿ ಮತ್ತು ಪ್ರೊ.ಲಿಂಗರಾಜ ಗಾಂಧಿ ಅವರನ್ನು ಸಂಘದಿಂದ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತರಾದ ಬಿ.ವಿ.ಮಲ್ಲಿಕಾರ್ಜುನಯ್ಯ, ಡಿ.ಉಮಾಪತಿ, ಎಸ್.ಆರ್.ಆರಾಧ್ಯ, ವೆಂಕಟೇಶ್, ಮಾಲತಿ ಭಟ್, ಶಮಂತ, ಬಸವರಾಜು, ಎನ್. ರವಿಕುಮಾರ್, ಧ್ಯಾನ್ ಪೂಣಚ್ಚ, ಶ್ರೀಜಾ, ರೈತ ಸಂಘದ ಕೋಡಿಹಳ್ಳಿ ಚಂದ್ರಶೇಖರ್ ಹಾಜರಿದ್ದರು.**

### ವಸ್ತು ನಿಷ್ಠತೆ ಕಡಿಮೆಯಾಗುತ್ತಿದೆ

**ಹಿರಿಯ ಪತ್ರಕರ್ತ ಅನಂತ ಚಿನಿವಾರ ಮಾತನಾಡಿ, ಮಾಧ್ಯಮ ಮತ್ತು ಪತ್ರಕರ್ತರನ್ನು ಪ್ರತ್ಯೇಕವಾಗಿ ನೋಡಬೇಕಿದೆ. ಹೆಚ್ಚಿನ ಪತ್ರಕರ್ತರು ನಿಜವಾಗಿ ಮಾಡಬೇಕು ಎಂದುಕೊಂಡಿರುವ ಸುದ್ದಿ ಮತ್ತು ಮಾಡಬೇಕಾದ ಸುದ್ದಿಯ ನಡುವೆ ಇಬ್ಬಂದಿತನ ಅನುಭವಿಸುತ್ತಿದ್ದಾರೆ. ಕಳೆದ ಕೆಲವು ವರ್ಷಗಳಲ್ಲಿ ಮಾಧ್ಯಮಗಳು ಸಾಗುತ್ತಿರುವ ದಿಕ್ಕು ಕೂಡ ಆತಂಕ ತಂದಿದೆ ಎಂದರು. ಮಾಧ್ಯಮಗಳು ತಮ್ಮ ಇಷ್ಟದ, ಅನುಕೂಲ ಮತ್ತು ಯಾವುದೋ ಒತ್ತಡಕ್ಕೆ ಸಿಲುಕಿ ಬೇಕಾದ ಧ್ರುವವನ್ನು ಆಯ್ಕೆ ಮಾಡಿಕೊಂಡು ಅತ್ತ ಸಾಗಿದೆ. ಇದರಿಂದ ವಸ್ತುನಿಷ್ಠ ಮಾಧ್ಯಮ ಕಡಿಮೆಯಾಗುತ್ತಿದೆ ಎಂದು ಅನಿಸಿಕೆ ವ್ಯಕ್ತಪಡಿಸಿದರು.**

## ಗಡಿಯಲ್ಲಿ ತಂಪೆರದ ಮಳೆರಾಯ

**ಚಾಮರಾಜನಗರ :** ಬಿಸಿಲಿನ ತಾಪಮಾನಕ್ಕೆ ಬಸವಳಿದ್ದ ಕರ್ನಾಟಕ ತಮಿಳುನಾಡು ಗಡಿಯಲ್ಲಿ ಮಳೆರಾಯ ಬಂದು ತಂಪೆರದಿದೆ. ಕರ್ನಾಟಕ ತಮಿಳುನಾಡು ಗಡಿ ಭಾಗವಾಗಿರುವ ಚಾಮರಾಜನಗರ ಜಿಲ್ಲೆಗೆ ಹೊಂದಿಕೊಂಡಿರುವ ತಾಳವಾಡಿ ತಾಲ್ಲೂಕಿನ ಬಹುತೇಕ ಕಡೆ ಮಳೆಯಾಗಿದ್ದು, ಬಿಸಿಲಿನ ತಾಪಮಾನದಲ್ಲಿ ಬಸವಳಿದಿದ್ದ ಸಾರ್ವಜನಿಕರು ಕೊಂಚ ಮಟ್ಟಿಗೆ ನಿಟ್ಟಿಸಿರು ಬಿಟ್ಟಿದಂತಾಗಿದೆ. ಹಠಾತ್ತಾಗಿ ಬಂದ ಮಳೆಯಿಂದ ಕೆಲವು ಕಡೆ ರೈತರ ಬೆಳೆದ ಬಾಳೆ ಬೆಳೆ ನೆಲಕಚ್ಚಿದ್ದು, ಬಿಟ್ಟರೆ ಮಳೆಯಿಂದ ಗಡಿ ಭಾಗದಲ್ಲಿ ತುಸು ತಂಪಿನ ವಾತಾವರಣ ಸೃಷ್ಟಿಯಾಗಿದೆ. ಮಳೆಯಿಲ್ಲದೆ ಕರ್ನಾಟಕ ತಮಿಳುನಾಡಿ ಗಡಿ ಭಾಗದಲ್ಲಿ ಅತೀವ ಉಷ್ಣಾಂಶದಿಂದ ಕೂಡಿದ್ದ ಪ್ರದೇಶ ಕ್ರಮೇಣ ಉಷ್ಣಾಂಶದ ಪ್ರಮಾಣ ಕಡಿಮೆಯಾಗಿದೆ. ಮುಂದಿನ ದಿನಗಳಲ್ಲಿ ಮಳೆಯಾಗುವ ನಿರೀಕ್ಷೆ ಎನ್ನಲಾಗಿದೆ.



# ರಾಜ್ಯದ ಅಭಿವೃದ್ಧಿ: ರಾಹುಲ್ ಉತ್ತರಿಸಲಿ

**ಮೈಸೂರು:** ಚುನಾವಣಾ ಪ್ರಚಾರಕ್ಕಾಗಿ ರಾಜ್ಯಕ್ಕೆ ಭೇಟಿ ನೀಡಲಿ ರುವ ರಾಹುಲ್ ಗಾಂಧಿ ಅವರು, ಗ್ಯಾರಂಟಿ ಹೊರತಾಗಿ ರಾಜ್ಯದಲ್ಲಿ ನಡೆದಿರುವ ಅಭಿವೃದ್ಧಿ ಕಾರ್ಯಗಳ ಬಗ್ಗೆ ಜನರಿಗೆ ತಿಳಿಸಬೇಕು ಎಂದು ಬಿಜೆಪಿ ಮುಖಂಡರಾದ ಮೈಕ ಪ್ರೇಮ್ ಕುಮಾರ್ ಆಗ್ರಹಿಸಿದರು.

ನಗರದ ದೇವರಾಜ ಮಾರ್ಕೆಟ್ ಹಾಗೂ ಮನ್ನಾರ್ಸ್ ಮಾರ್ಕೆಟ್ ಮತ್ತು ಕೆ ಟಿ ಸ್ಟ್ರೀಟ್ ಅಂಗಡಿ ಮುಂಗಟುಗಳಿಗೆ ತೆರಳಿ ಮೈಸೂರು ಕೊಡಗು ಬಿಜೆಪಿಯ ಲೋಕಸಭಾ ಅಭ್ಯರ್ಥಿ ಶ್ರೀ ಯದುವೀರ್ ಒಡೆಯರ್ ಪರ ಕೇಂದ್ರ ಸರ್ಕಾರದ ಸಾಧನೆಯ ಕರಪತ್ರ ಅಂಚಿ ಬಿರುಸಿನ ಮತಯಾಚನೆ ಮಾಡಿದರು

ನಂತರ ಮಾತನಾಡಿದ ಅವರು ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದು 11 ತಿಂಗಳುಗಳು ಕಳೆದರೂ ಯಾವುದೇ ಅಭಿವೃದ್ಧಿ ಕೆಲಸ ನಡೆದಿಲ್ಲ. ಇದರ ಕಾರಣವನ್ನು ರಾಹುಲ್ ಗಾಂಧಿ ಜನರ ಮುಂದಿಡಲಿ. ಶಾಸಕರ ನಿಧಿಯ ಹಣ ಬಿಡುಗಡೆ ಯಾಗಿಲ್ಲ. ಹಣಕಾಸು



ಹೊಂದಾಣಿಕೆಗೆ ಪರದಾಡುತ್ತಿರುವ ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿ ಹಂತ ತಲುಪಿದೆಯೇ? ಎಂದು ಪ್ರಶ್ನಿಸಿದರು.

ಶ್ರೀರಾಮ ಕಾಲ್ಪನಿಕ ವ್ಯಕ್ತಿ ಎಂದಿದ್ದ ಕಾಂಗ್ರೆಸ್ ಈಗ ಚುನಾವಣೆಯ ವೇಳೆ ರಾಮನಾಪ ಜಪಿಸುತ್ತಿದೆ ಎಂದು ಟೀಕಿಸಿದ ಅವರು, ನಕ್ಸಲ್ ಚಟುವಟಿಕೆ ನಿಯಂತ್ರಣದಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದರು.

23ನೇ ವಾರ್ಡಿನ ಹಿರಿಯ ಬಿಜೆಪಿ ಮುಖಂಡರಾದ ಮೈ. ಕಾ. ಪ್ರೇಮ್ ಕುಮಾರ್, ಆರ್ ಪರಮೇಶ , ಸುರೇಂದ್ರ ಕಿರಣ್, ಪ್ರಮೋದ್, ಶ್ರೀಮತಿ ಲಕ್ಷ್ಮಿ, ಸುನಿಲ್ ಪೈ, ಆನಂತರಾಯ ಪೈ, ಕೃಷ್ಣ ಕುಮಾರ್, ಸಂತೋಷ್, ಇಂದ್ರಕುಮಾರ್ ಮುಂತಾದವರು ಹಾಜರಿದ್ದರು

### ವಿಜಯಪುರ ಟೌನ್ ಹಾಲ್ ವೃತ್ತ, ಗಾಂಧಿ ಚೌಕ, ಚನ್ನರಾಯಪಟ್ಟಣ ವೃತ್ತಗಳಲ್ಲಿ ಮತಯಾಚನೆ

# ಬಿಜೆಪಿ; ಜೆಡಿಎಸ್ ಪಕ್ಷಗಳ ಜೋಡೆತ್ತುಗಳು; ಕೆ.ಸುಧಾಕರ್

**ವಿಜಯಪುರ;** ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ಮೈತ್ರಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು ಮಾಜಿ ಮುಖ್ಯಮಂತ್ರಿಗಳಾದ ಬಿಎಸ್ ಯಡಿಯೂರಪ್ಪ ಹಾಗೂ ಎಚ್ ಡಿ ಕುಮಾರಸ್ವಾಮಿ ಒಂದೆಡೆಯಾದರೆ, ಮತ್ತೊಂದೆಡೆ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ, ಮತ್ತೊಂದೆಡೆ ಜೆಡಿಎಸ್ ಯೂಥ್ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಎರಡು ಜೋಡೆತ್ತುಗಳು ರಾಜ್ಯದಾದ್ಯಂತ ಎನ್‌ಡಿಎ ಅಭ್ಯರ್ಥಿಗಳ ಪರವಾಗಿ ಪ್ರಚಾರ ನಡೆಸುತ್ತಿದ್ದು ಈ ಬಾರಿ ರಾಜ್ಯದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ 28 ಅಭ್ಯರ್ಥಿಗಳ ಗೆಲುವು ಖಚಿತವೆಂದು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಕೆ ಸುಧಾಕರ್ ತಿಳಿಸಿದರು.

ಪಟ್ಟಣದಲ್ಲಿ ಮಾಜಿ ಶಾಸಕರುಗಳಾದ ಜಿ ಚಂದ್ರಣ್ಣ, ಪಿಳ್ಳ ಮುನಿಶಾಮಪ್ಪ, ನಿಸರ್ಗ ನಾರಾಯಣಸ್ವಾಮಿ ಮತ್ತಿತರೆ ಮುಖಂಡರುಗಳೊಂದಿಗೆ ಸೇರಿ ಪಟ್ಟಣದಲ್ಲಿನ ಟೌನ್ ಹಾಲ್ ವೃತ್ತ, ಗಾಂಧಿ ಚೌಕ, ಚನ್ನರಾಯಪಟ್ಟಣ ವೃತ್ತ ಮಂತಾಗಿ ಮುಖ್ಯಬೀದಿಗಳಲ್ಲಿ ಮತದಾರರನ್ನು ಮತಯಾಚನೆ ಮಾಡಿ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. ಹಿಂದುಗಳ ಬಗ್ಗೆ ಮಾತನಾಡುವ ಕಾಂಗ್ರೆಸ್ ನ ಯಾವುದೇ ಒಬ್ಬ ಮುಖಂಡರುಗಳು ಅಯೋಧ್ಯೆಯ ರಾಮಮಂದಿರ ದೇವಾಲಯದಲ್ಲಿ ರಾಮ ದರ್ಶನಕ್ಕೆ ಹೋಗಲಿಲ್ಲವೆಂದು ಒಂದೆಡೆ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಒಬ್ಬ ರಾಮಯ್ಯ ಆದರೆ ಆತನಿಗೆ ಟಿಕೆಟ್ ಕೊಡಿಸಿದ ಮತ್ತೊಬ್ಬ ರಾಮಯ್ಯ ಸೇರಿ ಯಾರೊಬ್ಬರೂ ಹಿಂದುಗಳ



ರಕ್ಷಣೆ ಮಾಡುವುದಿಲ್ಲವೆಂದು ತಿಳಿಸಿ, ಈಗಾಗಲೇ ಪ್ರಧಾನಿ ನರೇಂದ್ರ ಮೋದಿ ರವರು ಇನ್ನು ಐದು ವರ್ಷಗಳ ಕಾಲ ಬಡವರಿಗೆ ಅನ್ನ ಭಾಗ್ಯ ಯೋಜನೆಯನ್ನು ಮುಂದುವರಿಸುವುದಾಗಿ, ಮಹಿಳೆಯರಿಗೆ ಎಲ್ಲಾ ವಿಭಾಗಗಳಲ್ಲಿ ಶೇಕಡ 33% ರಷ್ಟು ಮೀಸಲಾತಿ ನೀಡುವುದರೊಂದಿಗೆ, ಎಲ್ಲರೂ ಸ್ವಾವಲಂಬಿಗಳಾಗಬೇಕೆಂಬ ಉದ್ದೇಶದಿಂದ ಬ್ಯಾಂಕುಗಳಲ್ಲಿ ಯಾವುದೇ ಅಡಮಾನ ಇಡಿಸಿಕೊಳ್ಳದೆ ಮುದ್ರಾ ಯೋಜನೆಯಲ್ಲಿ 20 ಲಕ್ಷ ರೂಗಳ ವರೆಗೆ ಸಾಲ ದೊರೆಯುವಂತೆ ಮಾಡಲಾಗುತ್ತಿದೆ ಎಂದು ತಿಳಿಸಿದ್ದು, ತಮ್ಮ ಮೇಲಿನ ಆರೋಪಕ್ಕೆ ಮಾತನಾಡಿ ನನ್ನ ಜೀವನ ತೆರೆದ ಪುಸ್ತಕದಂತಿದ್ದು ಮುಂದಿನ ದಿನಗಳಲ್ಲಿ ಎರಡು ಪಕ್ಷಗಳ ಕಾರ್ಯಕರ್ತರುಗಳನ್ನು ಸಮಾನವಾಗಿ ನೋಡುವುದರೊಂದಿಗೆ ನಿಮ್ಮ ಕ್ಷೇತ್ರಗಳ ಎಂಎಲ್‌ಎ ಹಾಗೂ ಎಂಪಿ ಎರಡು ಆಗಿ ಕಾರ್ಯ ನಿರ್ವಹಿಸುವುದಾಗಿ ತಿಳಿಸಿದರು. ವಿಜಯಪುರ ಪಟ್ಟಣ ಮೈಸೂರ್ ಪಾಕ್ ಗೆ ಹೆಸರುವಾಸಿಯಾಗಿದ್ದು ಬರುವ 20ರಂದು ಪ್ರಧಾನಮಂತ್ರಿ ನರೇಂದ್ರ ಮೋದಿ ರವರು ಚಿಕ್ಕಬಳ್ಳಾಪುರಕ್ಕೆ ಭೇಟಿ ನೀಡಲಿದ್ದು ಆ ಸಂದರ್ಭದಲ್ಲಿ ವಿಜಯಪುರದ ಜನತೆ ಎಲ್ಲರೂ ಕಾರ್ಯಕ್ರಮಕ್ಕೆ ಆಗಮಿಸುವುದರೊಂದಿಗೆ ಪ್ರಧಾನಿ ರವರಿಗೆ ಮೈಸೂರ್ ಪಾಕ್ ಸಹ ಕಾಣಿಕೆಯಾಗಿ ನೀಡಿ ಎಂದು ತಿಳಿಸಿದರು.

ಮಾಜಿ ಶಾಸಕರಾದ ಪಿಳ್ಳಮುನಿಶಾಮಪ್ಪ ಮಾತನಾಡಿ ನಾವು ನಿಸರ್ಗ ನಾರಾಯಣ ಸ್ವಾಮಿ ಹಾಗೂ ಜಿ ಚಂದ್ರಣ್ಣ ಮೂವರು ಸೇರಿ ಕಾಯ, ವಾಚ, ಮನಸ ಶಾಸಕರುಗಳಾಗಿ ಕ್ಷೇತ್ರದ ಸೇವೆ ಸಲ್ಲಿಸಿದ್ದು ಈ ಬಾರಿ ಒಂದು ಕಾಲು ಲಕ್ಷಕ್ಕೂ ಹೆಚ್ಚಿನ ಲೀಡಿಂಗ್ ಅನ್ನು ನಮ್ಮ ಎನ್ ಡಿ ಎ ಅಭ್ಯರ್ಥಿಯಾದ ಸುಧಾಕರ್ ರವರಿಗೆ ನೀಡಬೇಕಾಗಿದೆ ಎಂದು ಮನವಿ ಮಾಡಿದರು.

ಮಾಜಿ ಶಾಸಕರಾದ ನಿಸರ್ಗ ನಾರಾಯಣಸ್ವಾಮಿ ರವರು ಮಾತನಾಡಿ ಒಂದೆಡೆ ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ, ಮತ್ತೊಂದೆಡೆ ಹಾಲಿ ಪ್ರಧಾನಿಗಳಾದ ನರೇಂದ್ರ ಮೋದಿ ರವರುಗಳ ತೀರ್ಮಾನದಿಂದ ಎರಡು ಪಕ್ಷಗಳ ಎನ್‌ಡಿಎ ಅಭ್ಯರ್ಥಿಯಾಗಿ ಕೆ ಸುಧಾಕರ್ ರವರು ಕಣದಲ್ಲಿದ್ದು ಎರಡು ಪಕ್ಷಗಳ ಮತದಾರರು ಅವರಿಗೆ ಮತ ನೀಡುವುದರೊಂದಿಗೆ ಗೆಲುವು ಶತಸಿದ್ಧವೆಂದು ತಿಳಿಸಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷವಾಗುತ್ತಿದ್ದರೂ, ದೇವನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಇದುವರೆಗೂ ಯಾವುದೇ ನಯಾ ಪೈಸೆ ಕಾಮಗಾರಿ ಆರಂಭಗೊಂಡಿಲ್ಲ ನನ್ನ ಅವಧಿಯಲ್ಲಿನ ಕಾಮಗಾರಿಗಳಿಗೆ ಮಾತ್ರ ಈಗಿನ ಸಚಿವರು ಗುದ್ದಲಿ ಪೂಜೆ ನೆರವೇರಿಸುತ್ತಿರುವರೆಂದು ತಿಳಿಸಿದರು. ರೋಡ್ ಶೋನಲ್ಲಿ ಮಾಜಿ ಶಾಸಕ ಜಿ ಚಂದ್ರಣ್ಣ,ಜಿಲ್ಲಾ ಜೆಡಿಎಸ್ ಅಧ್ಯಕ್ಷರಾದ ಮುನೇಗೌಡ, ತಾಲೂಕು ಅಧ್ಯಕ್ಷರಾದ ಕಾರಹಳ್ಳಿ ಮುನೇಗೌಡ, ಕಾರ್ಯದರ್ಶಿ ರವೀಂದ್ರ, ಟೌನ್ ಜೆಡಿಎಸ್ ಅಧ್ಯಕ್ಷರಾದ ಸಿ ನಾರಾಯಣಸ್ವಾಮಿ, ಕಾರ್ಯದರ್ಶಿ ಮಹೇಶ್, ಪುರಸಭಾ ಉಪಾಧ್ಯಕ್ಷರಾದ ಕೇಶವಪ್ಪ, ಮಾಜಿ ಉಪಾಧ್ಯಕ್ಷರಾದ ನಾರಾಯಣಸ್ವಾಮಿ, ಸದಸ್ಯರುಗಳಾದ ಬೈರೇಗೌಡ, ಮಾಜಿ ಸದಸ್ಯ ಬಲಮುರಿ ಶ್ರೀನಿವಾಸ್ ಮೂರ್ತಿ, ಬಯಪ ಮಾಜಿ ಅಧ್ಯಕ್ಷ ಎಸ್‌ಎಲ್‌ಎನ್ ಅಶ್ವತ್ಥನಾರಾಯಣ್, ತಾಲೂಕು ಬಿಜೆಪಿ ಅಧ್ಯಕ್ಷ ಸುನಿಲ್ ಇದ್ದರು.

# ಆಯುಷ್ ಇಲಾಖೆ ವತಿಯಿಂದ ಚಿಂಚಾಪಾನಕ ವಿತರಣೆ

**ಮಂಡ್ಯ:** ಸಾರ್ವತ್ರಿಕ ಲೋಕಸಭಾ ಚುನಾವಣೆಯ ಕೆಲಸಗಳಲ್ಲಿ ನಿರತರಾಗಿರುವ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ಬೇಸಿಗೆ ಸಮಯದಲ್ಲಿ ಅನುಕೂಲವಾಗುವಂತೆ ಆಯುಷ್ ಇಲಾಖೆ ವತಿಯಿಂದ ನೀಡಲಾದ ಚಿಂಚಾ ಪಾನಕ ವಿತರಣಾ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಡಾ. ಕುಮಾರ ಅವರು ಇಂದು ಚಾಲನೆ ನೀಡಿದರು.

ಚಾಲನೆ ನೀಡಿದ ನಂತರ ಮಾತನಾಡಿ ರಾಜ್ಯಾದ್ಯಂತ ಇತ್ತೀಚಿನ ದಿನಗಳಲ್ಲಿ ತಾಪಮಾನವು ದಾಖಲೆ ಮಟ್ಟದಲ್ಲಿ ಏರಿಕೆಯಾಗುತ್ತಿದ್ದು, ಈ ಬೇಸಿಗೆಯ ಸುಡು ಬಿಸಿಲಿನ ದಿನಗಳಲ್ಲಿ ಸಾರ್ವಜನಿಕರಿಗೆ ಹಾಗೂ ಸಿಬ್ಬಂದಿಗಳಿಗೆ ಆರೋಗ್ಯಕರವಾದ ಚಿಂಚಾ ಪಾನಕದ ಬಗ್ಗೆ ಜಾಗೃತಿ ಮೂಡಿಸಲು ಆಯುಷ್ ಇಲಾಖೆಯ ವತಿಯಿಂದ ಆಯುಷ್ ಪಾನೀಯ ಪರಿಚಯ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.



ಹುಣಸೆಹಣ್ಣು, ಬೆಲ್ಲದ ಪುಡಿ, ಜೀರಿಗೆ ಪುಡಿ, ಕಾಳು ಮೆಣಸಿನ ಪುಡಿ, ಸೈಂದವ ಲವಣಗಳಿಂದ ತಯಾರಿಸಿದ ಚಿಂಚಾ ಪಾನಕವು ಜೀರ್ಣಕ್ರಿಯೆಯನ್ನು ಉತ್ತಮಗೊಳಿಸುತ್ತದೆ. ಮಲಬದ್ಧತೆ ನಿವಾರಿಸುವುದು. ಶರೀರದ ದಾಹ ಹಾಗೂ ಬಾಯಾರಿಕೆಯನ್ನು ನೀಗಿಸುತ್ತದೆ ಎಂದರು.

ಅಪರ ಜಿಲ್ಲಾಧಿಕಾರಿ ಡಾ. ಹೆಚ್. ಎಲ್. ನಾಗರಾಜು ಅವರು ಮಾತನಾಡಿ ಚಿಂಚಾ ಪಾನಕ, ಸೊಗಡೆ ಬೇರಿನ ಪಾನಕ ಸೇರಿದಂತೆ ಆಯುಷ್ ಇಲಾಖೆಯಿಂದ ವಿವಿಧ ರೀತಿಯ ಆರೋಗ್ಯಕರವಾದ ಪಾನೀಯವನ್ನು ತಯಾರಿಸಲಾಗುತ್ತದೆ. ಏಪ್ರಿಲ್ 20 ರಂದು ತಾಲ್ಲೂಕುವಾರು ನಡೆಯುವ ಎ.ಪಿ.ಆರ್.ಓ. ತರಬೇತಿಯಲ್ಲಿ ಭಾಗವಹಿಸುವ ಸಿಬ್ಬಂದಿಗಳಿಗೆ ಚಿಂಚಾ ಪಾನಕವನ್ನು ವಿತರಣೆ ಮಾಡುವಂತೆ ತಿಳಿಸಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ. ಸೀತಾಲಕ್ಷ್ಮಿ ಬಿ.ಎಸ್ ಅವರು ಮಾತನಾಡಿ ಹುಣಸೆ ಹಣ್ಣನ್ನು ಅಗತ್ಯ ಪ್ರಮಾಣದ ನೀರಿನಲ್ಲಿ ಇಡೀ ರಾತ್ರಿ ನೆನೆಸಿಟ್ಟು ಮರುದಿನ ಬೆಳಿಗ್ಗೆ ಅದನ್ನು ಶುದ್ಧವಾದ ಕೈಗಳಿಂದ ಚೆನ್ನಾಗಿ ಹಿಸುಕಿ ಸೋಸಿಕೊಳ್ಳಬೇಕು (ಗಾಢವಾದ ಹುಣಸೆ ಮಿಶ್ರಣ ಬಾಟಲಿಗಳಲ್ಲಿ ತುಂಬಿಸಿಕೊಂಡು ಪಾನಕ ತಯಾರಿಸುವಾಗ ಬೇಕಾದಷ್ಟನ್ನು ಬಳಸಿ). ಅಗತ್ಯ ಪ್ರಮಾಣದಷ್ಟು ನೀರನ್ನು ಪಾತ್ರೆಗೆ ಹಾಕಿಕೊಳ್ಳಿ. ಅಗತ್ಯ ಪ್ರಮಾಣದಷ್ಟು ಹುಣಸೆ ಹಣ್ಣಿನ ಮಿಶ್ರಣವನ್ನು ನೀರಿನ ಪಾತ್ರೆಗೆ ಹಾಕಿದ ನಂತರ ಬೆಲ್ಲದ ಪುಡಿಯನ್ನು ನೀರಿನಲ್ಲಿ ಹಾಕಿ ಚೆನ್ನಾಗಿ ಕರಗಿಸಿ ಜೀರಿಗೆ ಪುಡಿ, ಕಾಳು ಮೆಣಸಿನ ಪುಡಿ, ಸೈಂದವ ಲವಣವನ್ನು ಸೇರಿಸಬೇಕು ಎಂದರು.

ಚಿಂಚಾ ಪಾನಕವನ್ನು ತಯಾರಿಸುವಾಗ ಹುಣಸೆಹಣ್ಣು 100 ಗ್ರಾಂ, ಬೆಲ್ಲದ ಪುಡಿ 400 ಮಿಲಿ, ಜೀರಿಗೆ ಪುಡಿ ? 10 ಗ್ರಾಂ, ಕಾಳು ಮೆಣಸಿನಪುಡಿ 5 ಗ್ರಾಂ, ಸೈಂದವ ಲವಣ 5 ಗ್ರಾಂ ಹಾಕಬೇಕು. 50 ರಿಂದ 100 ಮಿಲಿ ಸೇವನೆ ಮಾಡುವುದು ಉತ್ತಮ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಶೇಕ್ ತನ್ವೀರ್ ಆಸಿಫ್, ಜಿಲ್ಲಾ ಆಯುಷ್ ಇಲಾಖೆಯ ಡಾ.ಮಧುಮಾಲತಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ನೀರು ಸರಬರಾಜು ವ್ಯತ್ಯಯ

**ಮಂಡ್ಯ:** ಮಂಡ್ಯ ನಗರ ನೀರು ಸರಬರಾಜು ವ್ಯವಸ್ಥೆ ನಿರ್ವಹಣೆ ಅಡಿ ಬಾಬುರಾಯನ ಕೊಪ್ಪಲು ಸಮೀಪ 1016 ಮಿ.ಮೀ. ವ್ಯಾಸದ ಎಂ.ಎಸ್. ನೀರು ಸರಬರಾಜು ಕೊಳವೆ ಮಾರ್ಗದಲ್ಲಿ ಗಣನೀಯ ಪ್ರಮಾಣದಲ್ಲಿ ನೀರು ಸೋರುವಿಕೆ ಕಂಡು ಬಂದಿದ್ದು, ಸದರಿ ಕೊಳವೆ ಮಾರ್ಗದ ದುರಸ್ಥಿ ಕಾಮಗಾರಿಯನ್ನು ಏಪ್ರಿಲ್ 19 ಹಾಗೂ 20 ರಂದು ಕೈಗೊಳ್ಳಬೇಕಾಗಿರುವುದರಿಂದ ಸದರಿ ದಿನದಂದು ನೀರನ್ನು ಪಂಪು ಮಾಡಲು ಸಾಧ್ಯವಾಗುವುದಿಲ್ಲ. ಮಂಡ್ಯ ನಗರದ ಸಾರ್ವಜನಿಕರಿಗೆ ಏಪ್ರಿಲ್ 19 ಹಾಗೂ 20 ರಂದು ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ನೀರು ಬಂದ ವೇಳೆ ಶೇಖರಿಸಿಟ್ಟುಕೊಂಡು ಜಲಮಂಡಳಿಯೊಂದಿಗೆ ಸಹಕರಿಸಬೇಕೇಂದು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮಂಡ್ಯ ನಿರ್ವಹಣಾ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೃತೀಯ ವಾರ್ಷಿಕ ಘಟಿಕೋತ್ಸವದಲ್ಲಿ ಪದವಿ ಪ್ರದಾನಕ್ಕಾಗಿ ಅರ್ಜಿ ಆಹ್ವಾನ

**ಬೆಂಗಳೂರು:** ಬೆಂಗಳೂರು ನಗರ ವಿಶ್ವವಿದ್ಯಾನಿಲಯದಲ್ಲಿ ಮತ್ತು ಸಂಯೋಜಿತ ಮಹಾವಿದ್ಯಾಲಯಗಳಲ್ಲಿ 2020ನೇ ಶೈಕ್ಷಣಿಕ ಸಾಲಿನಲ್ಲಿ ಸ್ನಾತಕ (ಯು.ಜಿ) ಮತ್ತು 2021ನೇ ಸಾಲಿನ ಶೈಕ್ಷಣಿಕ ಸಾಲಿನಲ್ಲಿ ಸ್ನಾತಕೋತ್ತರ (ಪಿ.ಜಿ.) ವ್ಯಾಸಂಗದ ಪ್ರವೇಶ ಪಡೆದು ಎಲ್ಲಾ ಸೆಮಿಸ್ಟರ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯದ ತೃತೀಯ ವಾರ್ಷಿಕ ಘಟಿಕೋತ್ಸವದಲ್ಲಿ ಪದವಿ ಪ್ರಧಾನ ಮಾಡಲು ಅರ್ಜಿ ಆಹ್ವಾನಿಸಿದೆ.
ವಿದ್ಯಾರ್ಥಿಗಳಿಗೆ ಏಪ್ರಿಲ್ 10 ರಿಂದ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಲು ಏಪ್ರಿಲ್ 24 ಕೊನೆಯ ದಿನಾಂಕವಾಗಿದೆ.ಹೆಚ್ಚಿನ ವಿವರಗಳನ್ನು ವಿಶ್ವವಿದ್ಯಾನಿಲಯದಲ್ಲಿ ಪಡೆಯಬಹುದಾಗಿದೆ ಎಂದು ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 21 ರವರೆಗೆ ಆರ್.ಟಿ.ಐ. ಆನ್ ಲೈನ್ ತಂತ್ರಾಂಶ ಕಾರ್ಯ ಸ್ಥಗಿತ

**ಬೆಂಗಳೂರು;** ಆರ್.ಟಿ.ಐ ಆನ್‌ಲೈನ್ ತಂತ್ರಾಂಶವನ್ನು ರಾಷ್ಟ್ರೀಯ ಮಾಹಿತಿ ಕೇಂದ್ರ (ಎನ್‌ಐಸಿ) ಸಂಸ್ಥೆಯವರು ಅಭಿವೃದ್ಧಿಪಡಿಸಿ ನಿರ್ವಹಿಸುತಿದ್ದು, ಸದರಿ ತಂತ್ರಾಂಶವು ಕರ್ನಾಟಕ ಸರ್ಕಾರಕ್ಕೆ ಸಂಬಂಧಿಸಿರುವುದರಿಂದ, ಎನ್ ಐಸಿ ದತ್ತಾಂಶ ಕೇಂದ್ರದಿಂದ (ಎನ್‌ಐಸಿ ಡಿಸಿ) ಕರ್ನಾಟಕ ರಾಜ್ಯ ದತ್ತಾಂಶ ಕೇಂದ್ರಕ್ಕೆ ವರ್ಗಾಯಿಸಲು ಎನ್‌ಐಸಿ ಯು ಪ್ರಸ್ತಾಪಿಸಿದ್ದು, ತಂತ್ರಾಂಶವನ್ನು ವರ್ಗಾಯಿಸಲು 3 ದಿನಗಳ ಕಾಲಾವಕಾಶ ಬೇಕಾಗಿದೆ ಎಂದು ತಿಳಿಸಿರುತ್ತಾರೆ. ಈ ಹಿನ್ನಲೆಯಲ್ಲಿ ಏಪ್ರಿಲ್ 19 ರಿಂದ ಏಪ್ರಿಲ್ 21, 2024 ರವರೆಗೆ ತಂತ್ರಾಂಶವನ್ನು ವರ್ಗಾಯಿಸುವ ಪ್ರಕ್ರಿಯೆಯನ್ನು ಕೈಗೊಳ್ಳಲಾಗುತ್ತಿದ್ದು, ಈ ನಿಗದಿತ ಸಮಯದಲ್ಲಿ ಆರ್.ಟಿ.ಐ. ಆನ್‌ಲೈನ್ ತಂತ್ರಾಂಶವು ಕಾರ್ಯನಿರ್ವಹಿಸಲು ಲಭ್ಯವಿರುವುದಿಲ್ಲ. ಆದ್ದರಿಂದ, ಯಾವುದೇ ಬಾಕಿ ಇರುವ ಆರ್.ಟಿ.ಐ. ಆನ್‌ಲೈನ್ ಅರ್ಜಿಗಳು ಮತ್ತು ಪ್ರಥಮ ಮೇಲ್ಮನವಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡುವಂತೆ ಅಧಿಕೃತ ಪ್ರಕಟಣೆ ತಿಳಿಸಿದೆ.

## ಅಂಚೆ ಮತದಾನ ಕೇಂದ್ರ ಸ್ಥಾಪನೆ

**ಮೈಸೂರು:** ಲೋಕಸಭಾ ಚುನಾವಣೆ ಸಂಬಂಧ ಗೈರು ಹಾಜರಿ ಮತದಾರರಿಗೆ ಅಂಚೆ ಮತದಾನ ಕೇಂದ್ರವನ್ನು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ತೆರೆಯಲಾಗಿದೆ. ಕರ್ತವ್ಯ ನಿರ್ವಹಿಸುತ್ತಿರುವ ಮತದಾರರಿಗೆ ಅಂಚೆ ಮತಪತ್ರ ಮೂಲಕ ಮತ ಚಲಾಯಿಸಲು ಜಿಲ್ಲಾ ಚುನಾವಣಾಧಿಕಾರಿಗಳ ಕಾರ್ಯಾಲಯದ ನೆಲಮಹಡಿ ಕೊಠಡಿ ಸಂಖ್ಯೆ 10 ರಲ್ಲಿ ಅಂಚೆ ಮತದಾನ ಕೇಂದ್ರವನ್ನು ಸ್ಥಾಪಿಸಲಾಗಿದ್ದು, ಅಂಚೆ ಮತದಾನ ಕೇಂದ್ರವು ಏ. 19 ರಿಂದ 21 ರವರೆಗೆ ಬೆಳಿಗ್ಗೆ 9 ಯಿಂದ ಸಂಜೆ 5.ಗಂಟೆ ವರೆಗೆ ತೆರೆಯಲಾಗಿರುತ್ತದೆ ಹಾಗೂ ಮೈಸೂರು ಲೋಕಸಭಾ ಕ್ಷೇತ್ರ ಹೊರತು ಪಡಿಸಿ ಇತರೆ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಟ್ಟಿದ್ದರೆ (2ನೇ ಹಂತದಲ್ಲಿ ಚುನಾವಣೆ ನಡೆಯುವ ಲೋಕಸಭಾ ಕ್ಷೇತ್ರದ ಮಾತ್ರ) ಆಯಾ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ತೆರೆದಿರುವ ಅಂಚೆ ಮತದಾನ ಕೇಂದ್ರದಲ್ಲಿ ಮತ ಚಲಾಯಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾ ಅಧಿಕಾರಿಗಳಾದ ಡಾ.ಕೆ. ವಿ ರಾಜೇಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಹನಗಳ ಸಂಚಾರಕ್ಕೆ ಮಾರ್ಗ ಬದಲಾವಣೆ

**ಚಿಕ್ಕಬಳ್ಳಾಪುರ:** ಪ್ರಧಾನ ಮಂತ್ರಿಗಳು ಏಪ್ರಿಲ್ 20 ರಂದು ಚಿಕ್ಕಬಳ್ಳಾಪುರ ಜಿಲ್ಲೆಗೆ ಆಗಮಿಸಿ ಚಿಕ್ಕಬಳ್ಳಾಪುರ ತಾಲ್ಲೂಕಿನ ಚೊಕ್ಕಹಳ್ಳಿ ಗ್ರಾಮದ ಸ.ನಂ: 29ರಲ್ಲಿ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ಸದರಿ ಕಾರ್ಯಕ್ರಮಕ್ಕೆ ಪ್ರಮುಖ ಮುಖಂಡರು, ರಾಜಕೀಯ ವ್ಯಕ್ತಿಗಳು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸುವುದರಿಂದ ವಾಹನ ದಟ್ಟಣೆ ಹೆಚ್ಚಾಗಿ ಸಂಚಾರಕ್ಕೆ ಅಡಚಣೆಯಾಗುವ ಸಂಭವವಿದ್ದು, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಸಾರ್ವಜನಿಕರ ಅನುಕೂಲಕ್ಕಾಗಿ ವಾಹನಗಳನ್ನು ಬೆಂಗಳೂರು ಕಡೆಯಿಂದ ರಾಷ್ಟ್ರೀಯ ಹೆದ್ದಾರಿ-44ರ ಮೇಲೆ ಬರುವ ವಾಹನಗಳನ್ನು ಚದಲಪುರ ಕ್ರಾಸ್ ನಿಂದ, ಚಿಕ್ಕಬಳ್ಳಾಪುರ ನಗರದ ಬಿ.ಬಿ. ರಸ್ತೆ ಮೂಲಕ ವಾಪಸಂದ್ರ ಬ್ರಿಡ್ಜ್ ವರೆಗೆ ಹಾಗೂ ಬಾಗೇಪಲ್ಲಿ ಕಡೆಯಿಂದ ರಾಷ್ಟ್ರೀಯ ಹೆದ್ದಾರಿ 44 ರಲ್ಲಿ ಬರುವ ವಾಹನಗಳನ್ನು ವಾಪಸಂದ್ರ ಬ್ರಿಡ್ಜ್ ನಿಂದ, ಚಿಕ್ಕಬಳ್ಳಾಪುರ ನಗರ ಮಾರ್ಗವಾಗಿ ಚದಲಪುರ ಕ್ರಾಸ್ ಕಡೆಗೆ ಸಂಚರಿಸುವಂತೆ ಮಾರ್ಗ ಬದಲಾವಣೆ ಮಾಡುವ ರಸ್ತೆ ತಿರುವಿಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಪಿ.ಎನ್. ರವೀಂದ್ರ ಅವರು ಆದೇಶಿಸಿ ಅನುಮತಿ ನೀಡಿದ್ದಾರೆ.

# ವೀರಶೈವ ಲಿಂಗಾಯತ

## ಸಮುದಾಯದ ಏಳ್ಗೆಗೆ ಕಾಂಗ್ರೆಸ್ ಬದ್ಧ

**ಮಂಡ್ಯ :** ಜಿಲ್ಲೆಯ ಒಕ್ಕಲಿಗರು ಸೇರಿದಂತೆ ಎಲ್ಲಾ ಸಮುದಾಯದ ಜನತೆಯೊಂದಿಗೆ ಸೌಹಾರ್ಧಯುತವಾಗಿ ಕಾಯಕ, ದಾಸೋಹದ ತತ್ವದಡಿಯಲ್ಲಿ ಸಾಗಿರುವ ವೀರಶೈವ ಲಿಂಗಾಯತ ಸಮುದಾಯದ ಏಳ್ಗೆಗೆ ಕಾಂಗ್ರೆಸ್ ಸರ್ಕಾರ ಬದ್ಧವಾಗಿದೆ ಎಂದು ಕೃಷಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು.

ನಗರದ ಕನಕ ಭವನದಲ್ಲಿ ನಡೆದ ಕಾಂಗ್ರೆಸ್ ಬೆಂಬಲಿತ ವೀರಶೈವ ಲಿಂಗಾಯತ ಜನಜಾಗೃತಿ ಸಭೆಯಲ್ಲಿ ಪಾಲ್ಗೊಂಡು ವಿವಿಧ ವೀರಶೈವ ಲಿಂಗಾಯತ ಸಂಘಟನೆಗಳು ನೀಡಿದ ಮನವಿಯನ್ನು ಈಡೇರಿಸುವುದಾಗಿ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಸದಸ್ಯನಾಗಿದ್ದಾಗ ಪ್ರಥಮ ಬಾರಿಗೆ ಜಗದಾಂಬ ಅವರನ್ನು ಉಪಾಧ್ಯಕ್ಷರನ್ನಾಗಿ ಹಾಗೂ ಮಳವಳ್ಳಿಯ ಸುಧಾಚಂದ್ರಶೇಖರ್ ಅವರನ್ನು ಅಧ್ಯಕ್ಷರನ್ನಾಗಿ ಮಾಡುವ ಮೂಲಕ ಸಮುದಾಯದ ಮಹಿಳೆಯರ ರಾಜಕೀಯ ಮುನ್ನಡೆಗೆ ಸಹಕಾರ ಮಾಡಿದ್ದ ನಾನು ಮುಂಬರುವ ದಿನಗಳಲ್ಲಿ ವೀರಶೈವ ಲಿಂಗಾಯತರಿಗೆ ರಾಜಕೀಯ ಪ್ರಾತಿನಿಧ್ಯತೆ ನೀಡುವುದಾಗಿ ತಿಳಿಸಿದರು.

ಮಂಡ್ಯದಲ್ಲಿ ಬಸವ ಭವನ ನಿರ್ಮಾಣ ಮಾಡಬೇಕು ಹಾಗೂ ಅಶ್ವಾರೂಢ ಬಸವೇಶ್ವರರ ಪುತ್ಥಳಿಯನ್ನು ಸ್ಥಾಪಿಸಬೇಕೆಂಬ ವೀರಶೈವ-ಲಿಂಗಾಯಿತರ ಹಲವು ದಿನಗಳ ಬೇಡಿಕೆಯನ್ನು ಈಡೇರಿಸಲು ನಮ್ಮ ಸರ್ಕಾರ ಸಿದ್ಧವಿದೆ ಎಂದರು.

ಅಲ್ಲದೆ, ಲಿಂಗಾಯಿತರಿಗೆ ರಾಜಕೀಯ ಪ್ರಾತಿನಿಧ್ಯ ನೀಡಲು ಕಾಂಗ್ರೆಸ್ ಬದ್ಧವಾಗಿದೆ. ಈ ಬಾರಿ ಜಿಲ್ಲೆಯ ಎಲ್ಲಾ ಲಿಂಗಾಯಿತ ಸಮುದಾಯ ಸ್ಟಾರ್ ಚಂದ್ರು ಅವರನ್ನು ಗೆಲ್ಲಿಸುವುದರ ಮೂಲಕ ಕೋಮುವಾದಿ ಬಿಜೆಪಿ ಪಕ್ಷಕ್ಕೆ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ಅಧಿಕಾರ ನೀಡದೆ ವಚನ ಭ್ರಷ್ಟರಾದ ಕುಮಾರಸ್ವಾಮಿಗೆ ತಕ್ಕ ಪಾಠ ಕಲಿಸಬೇಕೆಂದು ಸಚಿವ ಎನ್.ಚಲುವರಾಯಸ್ವಾಮಿ ಕರೆ ನೀಡಿದರು.

ಮಂಡ್ಯ ಜಿಲ್ಲೆಗೆ ನೂರಾರು ವರ್ಷ ಮರೆಯದಿರುವ ಯಾವುದಾದರೂ ಕೊಡುಗೆಯನ್ನು ಎಚ್.ಡಿ.ಕುಮಾರಸ್ವಾಮಿ ನೀಡಿದ್ದಾರಾ? ನಿಜವಾಗಲೂ ಅವರ ಕೊಡುಗೆ ದೊಡ್ಡ ಶೂನ್ಯ. ಚುನಾವಣೆಯಲ್ಲಿ ನಾನು ಸ್ಪರ್ಧೆ ಮಾಡಿದ್ದೇನೆ ಅವಕಾಶ ಕೊಡಿ ಎಂದು ಮನವಿ ಮಾಡಬೇಕು, ಆದರೆ ಇಲ್ಲಸಲ್ಲದ ಸುಳ್ಳು ಭರವಸೆಗಳನ್ನು ಹೇಳಿದರೆ ಜನರು ನಂಬಲು ಸಾಧ್ಯವಿಲ್ಲ ಎಂದು ಛೇಡಿಸಿದರು.



## ಉಚಿತ ಬಸ್ ವ್ಯವಸ್ಥೆಗೆ ಆಗ್ರಹಿಸಿ ಡಿಸಿಗೆ ಮನವಿ

**ಚಾಮರಾಜನಗರ :** ಚುನಾವಣಾ ತರಬೇತಿಗೆ ಉಚಿತವಾಗಿ ಬಸ್ ವ್ಯವಸ್ಥೆ ಕಲ್ಪಿಸಿಕೊಡುವಂತೆ ಆಗ್ರಹಿಸಿ ಜಿಲ್ಲಾ ಸರ್ಕಾರಿ ನೌಕರರ ಸಂಘದ ವತಿಯಿಂದ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು. ನಗರದ ಜಿಲ್ಲಾಡಳಿತ ಭವನದಲ್ಲಿರುವ ಹೆಚ್ಚುವರಿ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಎಡಿಸಿ ಗೀತಾ ಹುಡೇದ ಅವರಿಗೆ ಮನವಿ ಸಲ್ಲಿಸಿದರು. ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಸಂಬಂಧ ಮತಗಟ್ಟೆ ಅಧಿಕಾರಿಗಳಿಗೆ ನಾಳೆ(ಏ.20) ರಂದು ಬೆಳಗ್ಗೆ 10 ಗಂಟೆಗೆ ತರಬೇತಿಯನ್ನು ಆಯಾ ತಾಲ್ಲೂಕು ಕೇಂದ್ರಗಳಲ್ಲಿ ಆಯೋಜಿಸಿದ್ದು, ಸದರಿ ತರಬೇತಿಗೆ ಹಾಜರಾಗುವ ಎಲ್ಲ ನೌಕರರು ಹಾಗೂ ಮತಗಟ್ಟೆ ಅಧಿಕಾರಿಗಳಿಗೆ ಎಲ್ಲ ತಾಲ್ಲೂಕುಗಳಲ್ಲಿನ ತರಬೇತಿ ಕೇಂದ್ರಗಳಿಗೆ ಆಯಾಯ ತಾಲ್ಲೂಕು ಕೇಂದ್ರ ಸ್ಥಾನದಿಂದ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ. ಆದರೆ, ನೌಕರರು ಹಾಗೂ ಸಿಬ್ಬಂದಿ ಬಸ್‌ನಲ್ಲಿ ಉಚಿತವಾಗಿ ತೆರಳಲು ಅವಕಾಶ ಕಲ್ಪಿಸಿಕೊಡಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ. ಸಂಘದ ಜಿಲ್ಲಾಧ್ಯಕ್ಷ ಚಂದ್ರಶೇಖರ್, ಕಾರ್ಯದರ್ಶಿಗಳಾದ ಮಹದೇವಸ್ವಾಮಿ, ಕಿರಣ್‌ರಾಜ್, ತಾಲೂಕು ಅಧ್ಯಕ್ಷರಾದ ರಾಮಸ್ವಾಮಿ, ಸಂಘದ ವಾಸು, ಮಲ್ಲಿಕಾರ್ಜುನ್, ನಟರಾಜು ಸೇರಿದಂತೆ ಇತರರಿದ್ದರು.

# ನೈತಿಕ ಮತದಾನ ಬೆಂಬಲಿಸಿ

## ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ಸಲಹೆ

**ಚಾಮರಾಜನಗರ:** ಈ ಬಾರಿಯ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಯುವಜನರು ಕಡ್ಡಾಯವಾಗಿ ಮತದಾನ ಮಾಡುವುದಲ್ಲದೇ ನೈತಿಕ ಮತದಾನವನ್ನು ಬೆಂಬಲಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ಅವರು ಸಲಹೆ ನೀಡಿದರು.

ನಗರದ ಶ್ರೀ ಚಾಮರಾಜೇಶ್ವರ ದೇವಾಲಯದ ಆವರಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ, ತಾಲೂಕು ಸ್ವೀಪ್ ಸಮಿತಿ ಹಾಗೂ ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಬೃಹತ್ ಕಾಲ್ನಡಿಗೆ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು.



ಚುನಾವಣೆಯ ಅಂಗವಾಗಿ ಜಿಲ್ಲಾ ಸ್ವೀಪ್ ಸಮಿತಿಯು ಜಿಲ್ಲೆಯಲ್ಲಿ ಮತದಾನ ಪ್ರಮಾಣವನ್ನು ಹೆಚ್ಚಿಸಲು ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ಅದರಲ್ಲೂ 18 ವರ್ಷ ತುಂಬಿದ ನೂತನ ಮತದಾರರನ್ನು ನೈತಿಕ ಮತದಾನಕ್ಕಾಗಿ ಪ್ರೇರೇಪಿಸಲಾಗುತ್ತಿದೆ. ಯುವ ಮತದಾರರು ನೈತಿಕ ಮತದಾನದ ಮಹತ್ವವನ್ನು ಮನಗಂಡು ಈ ಬಗ್ಗೆ ಇತರರಿಗೂ ಅರಿವು ಮೂಡಿಸಲು ಮುಂದಾಗಬೇಕು ಎಂದರು.

ಬಿ.ಆರ್.ಟಿ ಹುಲಿ ಸಂರಕ್ಷಿತ ಪ್ರದೇಶದ ಉಪ ಅರಣ್ಯ ಸಂರಕ್ಷಣಾಧಿಕಾರಿ ದೀಪಾ ಜೆ. ಕಂಟ್ರಾಕ್ಟರ್ ಅವರು ಮಾತನಾಡಿ ಲೋಕಸಭಾ ಚುನಾವಣೆಯಲ್ಲಿ ಮೊದಲ ಬಾರಿಗೆ ಮತ ಚಲಾಯಿಸುವ ಯುವ ಮತದಾರರು ನಿಷ್ಪಕ್ಷಪಾತ ಹಾಗೂ ನಿರ್ಭೀತಿಯಿಂದ ಮತ ಚಲಾಯಿಸಬೇಕು. ಸಾಕಷ್ಟು ಯುವಕ, ಯುವತಿಯರು ಸಾಮಾಜಿಕ ಜಾಲತಾಣದಲ್ಲಿ ಸಕ್ರಿಯರಾಗಿದ್ದು, ಮತದಾನದ ಮಹತ್ವದ ಅರಿವಿದೆ. ಎಲ್ಲರೂ ತಪ್ಪದೇ ಮತದಾನ ಮಾಡಬೇಕು ಎಂದು ತಿಳಿಸಿದರು.

ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ ಅವರು ಮಾತನಾಡಿ ಮತದಾನದ ಪ್ರಮಾಣ ಹೆಚ್ಚಿಸಲು ಜಿಲ್ಲೆಯಾದ್ಯಂತ ಹಲವಾರು ಬಗೆಯ ಜಾಗೃತಿ ಕಾರ್ಯಕ್ರಮಗಳ ಮೂಲಕ ಯುವಜನರನ್ನು ಮತದಾನಕ್ಕೆ ಉತ್ತೇಜಿಸಲಾಗುತ್ತದೆ. ಜಾಗೃತಿ ಕಾರ್ಯಕ್ರಮದ ಭಾಗವಾಗಿ ಇಂದು ಕಾಲ್ನಡಿಗೆ ಜಾಥಾವನ್ನು ಆಯೋಜಿಸಲಾಗಿದೆ. ಪ್ರತಿಯೊಬ್ಬರು ಯಾವುದೇ ಆಮಿಷಗಳಿಗೆ ಒಳಗಾಗದೇ ನೈತಿಕ ಮತದಾನ ಮಾಡಬೇಕು ಎಂದರು.

ಮತದಾನದ ಪ್ರತಿಜ್ಞಾ ವಿಧಿ ಬೋಧಿಸಿದ ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ ಅವರು ಮಾತನಾಡಿ 18 ವರ್ಷ ತುಂಬಿದ ಬಹಳಷ್ಟು ಯುವಜನರು ಚುನಾವಣೆಯ ಮುಖ್ಯ ಭೂಮಿಕೆಯಲ್ಲಿ ಮತದಾನ ಮಾಡಲು ಮೊದಲ ಹೆಜ್ಜೆ ಇಡುತ್ತಿದ್ದಾರೆ. ಅವರಿಗೆ ಇನ್ನೂ ಹೆಚ್ಚಿನ ಬಲ ತುಂಬುವುದು ಜಾಥಾದ ಪ್ರಮುಖ ಉದ್ದೇಶವಾಗಿದೆ. ಬಲಿಷ್ಠ ಪ್ರಜಾಪ್ರಭುತ್ವದ ದೇಶದ ಕಟ್ಟಲು ಇದು ಸಹಕಾರಿಯಾಗಲಿದೆ. ಯುವ ಮತದಾರರು ನೈತಿಕ ಮತದಾನ ಮಾಡಿ ಸುಭದ್ರ ಚಾಮರಾಜನಗರ ಕಟ್ಟಲು ನೆರವಾಗಬೇಕು ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಸ್ವೀಪ್ ಯುವ ರಾಯಭಾರಿ ದೀಪಾ ಬುದ್ದೆ ಅವರು ಮಾತನಾಡಿ ಚಾಮರಾಜನಗರ ಲೋಕಸಭಾ ಕ್ಷೇತ್ರವ್ಯಾಪ್ತಿಯಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು ಜಿಲ್ಲಾ ಸ್ವೀಪ್ ಸಮಿತಿ ಅವಿರತವಾಗಿ ಶ್ರಮಿಸುತ್ತಿದೆ. ಸಂವಿಧಾನದ ಮೂಲಕ ಡಾ. ಬಿ.ಆರ್. ಅಂಬೇಡ್ಕರ್ ನಮ್ಮೆಲ್ಲರಿಗೂ ಮತದಾನದ ಅಮೂಲ್ಯ ಹಕ್ಕು ನೀಡಿದ್ದಾರೆ. ಅವರ ಆಶಯಗಳನ್ನು ಈಡೇರಿಸುವ ನಿಟ್ಟಿನಲ್ಲಿ ಎಲ್ಲ ಯುವಕ, ಯುವತಿಯರು ಮತದಾನದ ಮೌಲ್ಯವನ್ನು ಅರಿಯಬೇಕು. ಪ್ರತಿಯೊಬ್ಬರು ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು.

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ, ಜಿಲ್ಲಾಸ್ಪತ್ರೆಯ ಸ್ಥಾನಿಕ ವೈದ್ಯಾಧಿಕಾರಿ ಡಾ. ಕೃಷ್ಣಪ್ರಸಾದ್, ನಗರಸಭೆ ಪೌರಾಯುಕ್ತರಾದ ಎಸ್.ವಿ. ರಾಮದಾಸ್, ಹಿರಿಯ ಆರೋಗ್ಯ ನಿರೀಕ್ಷಕರಾದ ಮಂಜುನಾಥ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಚಿಕ್ಕ ಬಸವಯ್ಯ, ವಿವಿಧ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಅಂಗನವಾಡಿ, ಆಶಾ ಕಾರ್ಯಕರ್ತೆಯರು, ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ವಿದ್ಯಾರ್ಥಿಗಳು, ಸಾರ್ವಜನಿಕರು ಕಾಲ್ನಡಿಗೆ ಜಾಥಾದಲ್ಲಿ ಪಾಲ್ಗೊಂಡಿದ್ದರು.

ಜಾಥಾವು ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿ ಬಳಿಕ ಚಾಮರಾಜೇಶ್ವರ ದೇವಾಲಯದಲ್ಲಿಯೇ ಮುಕ್ತಾಯಗೊಂಡಿತು. ಜಾಥಾದಲ್ಲಿ ಭಾಗವಹಿಸಿದ್ದ ಎಲ್ಲರು ನನ್ನ ನಡೆ, ಮತಗಟ್ಟೆ ಕಡೆ, ನನ್ನ ಮತ ನನ್ನ ಹಕ್ಕು, ನೈತಿಕ ಮತದಾನ ಬೆಂಬಲಿಸಿ, ಇನ್ನಿತರೆ ಘೋಷಣೆಗಳನ್ನು ಮೊಳಗಿಸಿ ಮತದಾನದ ಜಾಗೃತಿ ಮೂಡಿಸಿದರು.

## ಅರ್ಹ ಮತದಾರರು ತಪ್ಪದೇ ಮತದಾನ ಮಾಡಬೇಕು

**ಬೆಂಗಳೂರು:** ಮತದಾನ ಅತ್ಯಂತ ಪವಿತ್ರ ಕಾರ್ಯವಾಗಿದ್ದು, ಸದೃಢ ಪ್ರಜಾಪ್ರಭುತ್ವದ ನಿರ್ಮಾಣಕ್ಕೆ ಮತದಾರರ ಸಹಭಾಗಿತ್ವ ಅತ್ಯಗತ್ಯವಾಗಿದ್ದು ಅರ್ಹ ಮತದಾರರು ತಪ್ಪದೇ ಮತದಾನ ಮಾಡಬೇಕು ಎಂದು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಡಾ. ಎಸ್.ವಿ. ಸುರೇಶ ತಿಳಿಸಿದರು.

ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದ ಜಿ.ಕೆ.ವಿ.ಕೆ. ಆವರಣದಲ್ಲಿ ಹಮ್ಮಿಕೊಂಡಿದ್ದ ''ಮತದಾನ ಕುರಿತ ಜಾಗೃತಿ'' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಉತ್ತಮ ಅಭ್ಯರ್ಥಿಗಳನ್ನು ಆಯ್ಕೆಮಾಡುವುದರಿಂದ ದೇಶದ ದಿಕ್ಕನ್ನು ಪ್ರಗತಿಪರ ಹಾದಿಯಲ್ಲಿ ಅಭಿವೃದ್ಧಿಯತ್ತ ಸಾಗಿಸಬಹುದು. ಮತದಾರರು ಜಾತಿ, ಹಣ ಮುಂತಾದ ಆಮಿಷಗಳಿಗೆ ಒಳಗಾಗದೆ ಸೂಕ್ತ ಅಭ್ಯರ್ಥಿಗೆ ಮತ ನೀಡಬೇಕು. ಯುವಕರು ದೇಶದ ಬೆನ್ನೆಲುಬಾಗಿರುವುದರಿಂದ ತಪ್ಪದೆ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದರು. ವಿದ್ಯಾರ್ಥಿಗಳಿಂದ ಬೀದಿನಾಟಕ, ಡೊಳ್ಳು ಕುಣಿತ, ನೃತ್ಯ ಮತ್ತು ಹಾಡುಗಳ ಮೂಲಕ ಮತದಾನ ಕುರಿತು ಜಾಗೃತಿ ಮೂಡಿಸಲಾಯಿತು. ಯಲಹಂಕ ಬಿ.ಬಿ.ಎಂ.ಪಿ ಉಪ ಆಯುಕ್ತರಾದ ಶ್ರೀಮತಿ ಬಿ.ಕೆ. ಮಮತ, ಕೃಷಿ ವಿಶ್ವವಿದ್ಯಾನಿಲಯದ ಅಧಿಕಾರಿಗಳು, ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

# ಸಂಘಟನೆಯಿಂದಲ್ಲಿ ಅಧಿಕಾರ, ಆಡಳಿತ

**ವಿಜಯಪುರ:** ಯಾವುದೇ ಪಕ್ಷದಲ್ಲಿಯೂ ಮೊದಲಿಗೆ ಸಂಘಟನೆ ಬಲವಾಗಿದ್ದಲ್ಲಿ ಮಾತ್ರ ಗೆಲುವು ಸಾಧ್ಯವಾಗುವುದರೊಂದಿಗೆ ಅಧಿಕಾರಕ್ಕೂ ಬರಬಹುದೆಂದು ಪುರಸಭಾ ಮಾಜಿ ಸದಸ್ಯ ಬಲಿಜ ಜನಾಂಗದ ಬಿಜೆಪಿ ಮುಖಂಡ ಬಲಮುರಿ ಶ್ರೀನಿವಾಸ್ ಮೂರ್ತಿ ತಿಳಿಸಿದರು.

ಚನ್ನರಾಯಪ್ಪ ಲೇಔಟ್ ನಲ್ಲಿರುವ ಬಲಮುರಿ ಶ್ರೀನಿವಾಸರವರ ನಿವಾಸದಲ್ಲಿ ಬಲಿಜ ಜನಾಂಗದ ಮುಖಂಡರುಗಳ ಸಭೆಯಲ್ಲಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಕೆ ಸುಧಾಕರ್ ರವರು ಭೇಟಿ ಮಾಡಿದ ಸಂದರ್ಭದಲ್ಲಿ ಮಾತನಾಡುತ್ತಿದ್ದರು. ಪ್ರಧಾನಿ ನರೇಂದ್ರ ಮೋದಿ ರವರನ್ನು ಮತ್ತೊಮ್ಮೆ ಪ್ರಧಾನಿ ಮಾಡಲು ಹಾಗೂ ಭಾರತ ದೇಶ ಸಂಪೂರ್ಣ ಸ್ವಾವಲಂಬಿಯನ್ನಾಗಿ ಮಾಡಲು ಹೊರಟಿರುವ ನರೇಂದ್ರ ಮೋದಿ ಅವರ ಕೈ ಬಲಪಡಿಸಲು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಸುಧಾಕರ್ ಅವರಿಗೆ ನಮ್ಮ ಎಲ್ಲಾ ಬಲಿಜ ಜನಾಂಗದ ಮತಗಳನ್ನು ನೀಡಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಪಿಳ್ಳ ಮನುಷ್ಯ ಚಂದ್ರಣ್ಣ ನಿಸರ್ಗ ನಾರಾಯಣಸ್ವಾಮಿ ಶಿಲ್ಪ, ಬಯಪ್ಪ ಮಾಜಿ ಅಧ್ಯಕ್ಷ ಎಸ್.ಎಲ್.ಎನ್.ಅಶ್ವಥ್ ನಾರಾಯಣ್, ಬಿಜೆಪಿ ತಾಲ್ಲೂಕು ಅಧ್ಯಕ್ಷ ಸುಂದರೇಶ್ ಪ್ರಧಾನ ಕಾರ್ಯದರ್ಶಿ ರವಿಕುಮಾರ್, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಮುನೇಗೌಡ, ಹಾಪ್ ಕಾಮ್ಸ್ ನಿರ್ದೇಶಕ ಶ್ರೀನಿವಾಸ್, ಬಿಜೆಪಿ ಟೌನ್ ಅಧ್ಯಕ್ಷ ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಮುನೀಂದ್ರ ಬಲಿಜ ಸಮುದಾಯದ ಮುಖಂಡರಾದ ಶ್ಯಾಮಣ್ಣ, ಪುರಸಭಾ ಮಾಜಿಸದಸ್ಯ ವರದರಾಜು, ಸಿ.ಎನ್.ಶಿವಕುಮಾರ್, ಎಂ.ನಾಗರಾಜು, ಮುನಿಕೃಷ್ಣ ಇನ್ನು ಹಲವು ಜೆಡಿಎಸ್ ಹಾಗೂ ಬಿಜೆಪಿ ಮುಖಂಡರು ಹಾಜರಿದ್ದರು.



ವಿಜಯಪುರ ಪಟ್ಟಣದಲ್ಲಿ ಚನ್ನರಾಯಪ್ಪ ಲೇಔಟ್ ನಲ್ಲಿರುವ ಬಲಮುರಿ ಶ್ರೀನಿವಾಸರವರ ನಿವಾಸದಲ್ಲಿ ಬಲಿಜ ಜನಾಂಗದ ಮುಖಂಡರುಗಳ ಸಭೆಯಲ್ಲಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಕೆ ಸುಧಾಕರ್ ರವರು ಮತ್ತಿತರೆ ಬಿಜೆಪಿ ಮುಖಂಡರು.

# ಸುಳ್ಳು ಸುದ್ದಿ ಶೇರ್ ಮಾಡಿರುವವರ ಮೇಲೆ ಕ್ರಮ ಜರುಗಿಸಿ

**ಚಾಮರಾಜನಗರ:** ಎನ್ ಡಿಎ ಅಭ್ಯರ್ಥಿ ಎಸ್ .ಬಾಲರಾಜು ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಸುಳ್ಳು ಸುದ್ದಿ ಶೇರ್ ಮಾಡಿರುವ ವ್ಯಕ್ತಿಗಳ ವಿರುದ್ಧ ಕಾನೂನು ಕ್ರಮಕೈಗೊಳ್ಳುವಂತೆ ಜಿಲ್ಲಾ ಬಿಜೆಪಿ ಸಮಿತಿ ವತಿಯಿಂದ ನಗರದ ಜಿಲ್ಲಾಡಳಿತ ಭವನದಲ್ಲಿ ಮುಖ್ಯ ಚುನಾವಣಾಧಿಕಾರಿಯಾದ ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರಿಗೆ ದೂರು ಸಲ್ಲಿಸಲಾಯಿತು.

ಎನ್.ಡಿ.ಎ.ಅಭ್ಯರ್ಥಿಯಾದ ಬಾಲರಾಜ್ ರವರ ವಿರುದ್ಧ ಅವಹೇಳನಕಾರಿಯಾಗಿ ಪೇಸ್ ಬುಕ್ ಹಾಗೂ ವಾಟ್ಸಪ್ ಗ್ರೂಪ್ ಮಾಡಿ ಶೇರ್ ಮಾಡಿರುವ ವ್ಯಕ್ತಿಗಳಾದ ಅಂಬೇಡ್ಕರ್ ದಲಿತ ಸೇನೆ ರಾಜ್ಯಾಧ್ಯಕ್ಷ ಕೇಶವಮೂರ್ತಿ ಮಹದೇವ ಬುದ್ಧ ಹಾಗೂ ರಾಜೇಂದ್ರ ಸಿದ್ದಾರ್ಥ ಅವರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕು.



ಇನ್ನು ಹಲವು ವ್ಯಕ್ತಿಗಳ ಜೊತೆ ಸಾಮಾಜಿಕ ಜಾಲತಾಣವಾದ ಪೇಸ್ ಬುಕ್ ನ್ನು ತೆರೆದು ಅದಕ್ಕೆ ದಲತ ಹಿತರಕ್ಷಣಾ ಸಮಿತಿ ಎಂದು ಹೆಸರಿಟ್ಟು ಅದಕ್ಕೆ 'ಹಲವಾರು ಸದಸ್ಯರನ್ನು ಸೇರಿಸಿಕೊಂಡಿರುವುದು ಸರಿಯಷ್ಟೆ, ಚಾಮರಾಜನಗರ ಎನ್.ಡಿ.ಎ.ಅಭ್ಯರ್ಥಿಯಾದ ಬಾಲರಾಜ್‌ರವರ ಹೊಸದಿಂಗತ ಎಂಬ ಪತ್ರಿಕೆಯಲ್ಲಿ ಬಂದಿರುವ ಪೋಟೋ ಇರುವ ಚಿತ್ರವನ್ನು ಸದರಿ ಪೇಸ್ ಬುಕ್‌ನ ದಲಿತ ಹಿತರಕ್ಷಣಾ ಸಮಿತಿ ಎಂಬ ಗ್ರೂಪಿನಲ್ಲಿ ಸುಳ್ಳು ಸುದ್ದಿಹಬ್ಬಿಸಿದ್ದಾರೆ.ಎಂದು ತಮ್ಮ ಗ್ರೂಪಿನಲ್ಲಿ ಶೇರ್ ಮಾಡಿದ್ದು ಈ ರೀತಿಯ ಸಂವಿಧಾನಿಕ. ಅಪ್ರಬುದ್ಧ, ಅವಮಾನಿಸುವ ಮತ್ತು ಬೇಜಾವಾಬ್ದಾರಿಯುತ ಹೇಳಿಕೆಗಳನ್ನು ತಮ್ಮ ಗ್ರೂಪಿನಲ್ಲಿ ಹಾಕಿ ಮತದಾರರನ್ನು ನಮ್ಮ ಪಕ್ಷದ ವಿರುದ್ಧ ಎತ್ತಿ ಕಟ್ಟಿ ಮತದಾರರಲ್ಲಿ ಚಾಮರಾಜನಗರ ಎನ್.ಡಿ.ಎ.ಅಭ್ಯರ್ಥಿಯಾದ ಬಾಲರಾಜ್‌ರವರ ವಿರುದ್ಧ ದ್ವೇಷ ಬಾವನೆ ಮೂಡಿಸಿ ಚುನಾವಣೆಯಲ್ಲಿ ಅಕ್ರಮ ಲಾಭ ಪಡೆಯುವ ದುರುದ್ದೇಶವನ್ನು ಹೊಂದಿರುತ್ತಾರೆ. ಈ ರೀತಿಯ ಅಸಂಬದ್ಧ ಹೇಳಿಕೆಗಳು ಮಾದರಿ ನೀತಿ ಸಂಹಿತೆಯ ಸ್ಪಷ್ಟ ಉಲ್ಲಂಘನೆಯಾಗಿರುತ್ತದೆ. ಅಂಬೇಡ್ಕರ್ ದಲಿತ ಸೇನೆ, ಎಂದು ಜವಾಬ್ದಾರಿ ಇರುವ ಗ್ರೂಪ್ ಮಾಡಿಕೊಂಡು ಸದರಿ ಗ್ರೂಪ್‌ನಲ್ಲಿ ಒಂದು ಪಕ್ಷದ ಅಭ್ಯರ್ಥಿ ವಿರುದ್ಧ ಸಂವಿಧಾನಿಕ, ಅಪ್ರಬುದ್ಧ, ಅವಮಾನಿಸುವ ಮತ್ತು ಬೇಜಾವಾಬ್ದಾರಿಯುತ ಹೇಳಿಕೆಗಳನ್ನು ಹಾಕಿರುವುದು ಖಂಡನೀಯ. ಸದರಿ ಹೇಳಿಕೆಗಳು ವಿರುದ್ಧ ತಾವು ಕ್ರಮ ಕೈಗೊಳ್ಳದೆ ಇದ್ದರೆ ಮತ್ತೆ ಇಂತಹ ಹೇಳಿಕೆ ಮತ್ತಷ್ಟು ಶೇರ್ ಆಗಿ ನಮ್ಮ ಅಭ್ಯರ್ಥಿಯ ಘನತೆಗೆ ದಕ್ಕೆ ಹಾಗೂ ಅದ ಮತದಾರರಲ್ಲಿ ನಮ್ಮ ಅಭ್ಯರ್ಥಿಯ ಮೇಲೆ ಕೆಟ್ಟ ಭಾವನೆ ಮೂಡುವಂತೆ ಮಾಡುತ್ತದೆ. ಅದುದರಿಂದ ಅಂಬೇಡ್ಕರ್ ದಲಿತ ಸೇನೆ ತಮ್ಮ ಗ್ರೂಪಿನಲ್ಲಿ ಹಾಕಿರುವ ಹೇಳಿಕೆಗಳನ್ನು ಅಳಿಸುವಂತೆ, ಅಂಬೇಡ್ಕರ್ ದಲಿತ ಸೇನೆ ರಾಜ್ಯಾಧ್ಯಕ್ಷ ಕೇಶವಮೂರ್ತಿ, ಮಹದೇವ ಬುದ್ಧ ಹಾಗೂ ರಾಜೇಂದ್ರ ಸಿದ್ದಾರ್ಥ ಅವರ ವಿರುದ್ಧ ಕಾನೂನು ಕ್ರಮ ಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ. ಹರವೆ ಮಂಜು, ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್, ಕಾರ್ಯದರ್ಶಿ ನಟರಾಜು, ನಗರ ಮಂಡಲ ಅಧ್ಯಕ್ಷ ಶಿವರಾಜ್, ಎಸ್ ಸಿ ಮೋರ್ಚಾದ ಗ್ರಾಮಾಂತರ ಮಂಡಲ ಅಧ್ಯಕ್ಷ ಮುಕುಂದ ಮೂರ್ತಿ, ಮಾಧ್ಯಮ ಸಹ ಪ್ರಮುಖ ಅಶ್ವಿನ್ ಹಾಜರಿದ್ದರು.

## 'ಸಂಸ್ಕೃತಿಯು ಭಾರತೀಯರ ಅಸ್ಮಿತೆ, ಅದು ಹೊರಗಿನಿಂದ ಬರುವಕಲಿಕೆಯಲ್ಲ'

ಸಂಸ್ಕೃತಿಯು ಭಾರತೀಯರ ಅಸ್ಮಿತೆ, ಅದು ಹೊರಗಿನಿಂದ ಬರುವಕಲಿಕೆಯಲ್ಲಅಂತರಂಗದ ಸಂಸ್ಕಾರಎಂಬುದಾಗಿಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪಿಠಾಧ್ಯಕ್ಷರಾದ ಪರಮ ಪೂಜ್ಯಜಗದ್ಗುರುಶ್ರೀ ಶ್ರೀಶ್ರೀ ನಿರ್ಮಲಾನಂದನಾಥ ಮಹಾಸ್ವಾಮಿಗಳವರು ದಿವ್ಯಸಾನಿಧ್ಯವಹಿಸಿ ಆಶೀರ್ವಚನ ನೀಡಿದರು

ಶೇಷಾದ್ರಿಪುರಂ ಶಿಕ್ಷಣ ದತ್ತಿಯ ವತಿಯಿಂದಶೇಷಾದ್ರಿಪುರಂ ಸಂಜೆಕಾಲೇಜು2023-24 ನೇ ಶೈಕ್ಷಣಿಕ ವರ್ಷದಲ್ಲಿಓಂಂಅ (ರಾಷ್ಟ್ರೀಯ ಮೌಲ್ಯಮಾಪನ ಮತ್ತು ಮಾನ್ಯತಾ ಮಂಡಳಿ) ಯಿಂದಂ ಶ್ರೇಣಿ ಮಾನ್ಯತೆಪಡೆದಿದ್ದು, ನ್ಯಾಕ್‌ನವೆಬ್‌ಸೈಟ್ ನ ಪ್ರಕಾರ ಭಾರತದಲ್ಲಿಂ ಶ್ರೇಣಿ ಪಡೆದಎರಡನೇ ಸಂಯೋಜಿತ ಸಂಜೆಕಾಲೇಜು ಹಾಗೂ ದಕ್ಷಿಣ ಭಾರತದಲ್ಲಿಂ ಶ್ರೇಣಿ ಪಡೆದ ಮೊದಲ ಸಂಯೋಜಿತ ಸಂಜೆಕಾಲೇಜು ಎಂಬ ಪ್ರಶಂಸೆಗೆ ಪಾತ್ರವಾಗಿದೆ. ಈ ಶುಭ ಸಂದರ್ಭದಲ್ಲಿಶೇಷಾದ್ರಿಪುರಂ ಸಂಜೆಕಾಲೇಜಿನ ಪ್ರಾಂಶುಪಾಲರು ಹಾಗೂ ಸಿಬ್ಬಂದಿ ವರ್ಗಕ್ಕೆಅಭಿನಂದನಾ ಸಮಾರಂಭವನ್ನುಶೇಷಾದ್ರಿಪುರಂ ಶಿಕ್ಷಣದತ್ತಿ ಸಭಾಂಗಣದಲ್ಲಿಶೇಷಾದ್ರಿಪುರಂ ಶಿಕ್ಷಣ ದತ್ತಿಯ ವತಿಯಿಂದಆಯೋಜಿಸಲಾಗಿತ್ತು. ಕಾರ್ಯಕ್ರಮದಅಧ್ಯಕ್ಷತೆ ವಹಿಸಿದ್ದಶೇಷಾದ್ರಿಪುರಂ ಶಿಕ್ಷಣ ದತ್ತಿಯಅಧ್ಯಕ್ಷರಾದಶ್ರೀ ಎನ್. ಆರ್.ಪಂಡಿತಾರಾಧ್ಯ ಮಾತನಾಡಿ ಭಾರತೀಯರಾದ ನಮಗೆ ಸಂಸ್ಕೃತಿ ವಿದ್ಯಾರ್ಥಿಗಳ ವ್ಯಕ್ತಿತ್ವ ಮತ್ತು ಹೆಗ್ಗುರುತುಎಂದು ಹೇಳಿದರು

ಶೇಷಾದ್ರಿಪುರಂ ಶಿಕ್ಷಣ ದತ್ತಿಯಗೌರವ ಪ್ರಧಾನ ಕಾರ್ಯದರ್ಶಿಗಳಾದ ಶಿಕ್ಷಣ ತಜ್ಞ ನಾಡೋಜಡಾ.ವೂಡೇ ಪಿ. ಕೃಷ್ಣಮಾತನಾಡಿಶಿಕ್ಷಣ ಮತ್ತು ಸಂಸ್ಕಾರ ಶೇಷಾದ್ರಿಪುರಂ ಶಿಕ್ಷಣ ಸಂಸ್ಥೆಗಳ ತಳಹದಿ ಪ್ರಪಂಚದಾದ್ಯಂತಇರುವ ಸಾವಿರಾರು ವಿದ್ಯಾರ್ಥಿಗಳು ವಿವೇಕಯುತಜೀವನ ಕಟ್ಟಿಕೊಳ್ಳಲು ನಮ್ಮ ಶೇಷಾದ್ರಿಪುರಂ ಶಿಕ್ಷಣ ಸಂಸ್ಥೆ ಅವಿರತವಾಗಿ ಶ್ರಮಿಸಿದೆ, ನಮ್ಮ ಸಂಜೆಕಾಲೇಜಿನ ಸಾಧನೆರಾಷ್ಟ್ರಮಟ್ಟದಲ್ಲಿಗುರುತಿಸುವಂತಾಗಿದೆ ಈ ಸಾಧನೆಗೆಶೇಷಾದ್ರಿಪುರಂ ಸಂಜೆಕಾಲೇಜಿನ ಪ್ರಾಂಶುಪಾಲರಿಗೆ ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರಿಗೆಅಭಿನಂದನೆಗಳನ್ನು ತಿಳಿಸಿದರು.



ಶೇಷಾದ್ರಿಪುರಂ ಸಂಜೆಕಾಲೇಜುಂ ಶ್ರೇಣಿ ಮಾನ್ಯತೆಪಡೆಯಲು ಶ್ರಮಿಸಿದ ಕಾಲೇಜಿನ ಆಡಳಿತ ಮಂಡಳಿಯ ಪ್ರತಿನಿಧಿಗಳು ಹಾಗೂ ಶೇಷಾದ್ರಿಪುರಂ ಶಿಕ್ಷಣ ದತ್ತಿಯ ಧರ್ಮದರ್ಶಿಗಳೂ ಆದ ಶ್ರೀ ಡಬ್ಲ್ಯು ಡಿ ಅಶೋಕ್‌ಅವರಿಗೆ ಹಾಗೂ ಕ್ರಿಯಾಶೀಲ ಪ್ರಾಂಶುಪಾಲರಾದಡಾ. ಎನ್.ಎಸ್. ಸತೀಶ್‌ಅವರಿಗೆಮತ್ತುಆಂತರಿಕಗುಣಮಟ್ಟ ಭರವಸೆ ಕೋಶ(ಖಕಿಂಅ) ಸಂಯೋಜಕರಾದ ಶ್ರೀಮತಿ ನಾಗಸುಧಾಆರ್ ಇವರುಗಳಿಗೆ ಸನ್ಮಾನ ನೆರವೇರಿಸಲಾಯಿತು ಹಾಗೂ ಸಮಸ್ತ ಸಿಬ್ಬಂದಿವರ್ಗಕ್ಕೆ ಅಭಿನಂದನೆಗಳನ್ನು ಸಲ್ಲಿಸಲಾಯಿತು. ಈ ಸಂದರ್ಭದಲ್ಲಿಶೇಷಾದ್ರಿಪುರಂ ಶಿಕ್ಷಣ ದತ್ತಿಯಉಪಾಧ್ಯಕ್ಷರಾದ ಟಿ.ಎಸ್. ಹೆಂಜಾರಪ್ಪ, ಉಪಾಧ್ಯಕ್ಷರಾದಡಬ್ಲ್ಯು.ಹೆಚ್.ಅನಿಲ್ ಕುಮಾರ್, ಗೌರವ ಖಜಾಂಚಿಗಳಾದ ಬಿ.ಎಂ. ಪಾರ್ಥಸಾರಥಿ, ಗೌರವಜಂಟಿ ಕಾರ್ಯದರ್ಶಿಗಳಾದ ಎಸ್.ಶೇಷನಾರಾಯಣ, ಗೌರವ ಸಹಾಯಕ ಕಾರ್ಯದರ್ಶಿಗಳಾದ ಎಂ.ಎಸ್. ನಟರಾಜ್, ಪಿ.ಸಿ.ನಾರಾಯಣ ಅಧ್ಯಕ್ಷರು, ಆಡಳಿತ ಸಲಹಾ ಮಂಡಳಿ ಶೇಷಾದ್ರಿಪುರಂ ಸಂಜೆಕಾಲೇಜು ಸೇರಿದಂತೆಎಲ್ಲರೂ ಭಾಗವಹಿಸಿದ್ದರು.

# ಸಂಜೆ ಟಿಪ್ಸ್



## ರಾಯ್ ಸನ್ ಏಬೆಲ್ ಅವರ ಸಂಗೀತ ಕಾರ್ಯಕ್ರಮ

ಈ ವಿಶಿಷ್ಟ ಸಂಗೀತ ಕಾರ್ಯಕ್ರಮ ಮೇ 4, 2024 ರಂದು ಎರಡು ಪ್ರದರ್ಶನಗಳು ಚೌಡಯ್ಯ ಸ್ಮಾರಕ ಭವನದಲ್ಲಿ ನಡೆಯಲಿದೆ. ಈ ಪ್ರದರ್ಶನಗಳು ಭೂಮಿಜ ಮತ್ತು ಜಾಗ ಸಂಸ್ಥೆಗಳ ಸಂಯೋಜನೆಯಲ್ಲಿ ನಡೆಯಲಿದೆ.

ಮೊಟ್ಟಮೊದಲ ಬಾರಿಗೆ ರಂಗದ ಮೇಲೆ ನೂರು ಹಾವಾಡಿಗರು, ಬಹು ಮಂದಿ ಏಕವ್ಯಕ್ತಿ ಕಲಾವಿದರು, ದೊಡ್ಡ ಬೀನ್ ವಾದ್ಯ ಘೋಷ್ಠಿ ಜೊತೆ ಒಂದು ತಾಸಿನ ಕಾಲ ನಿಮ್ಮನ್ನು ರಂಜಿಸಲಿದ್ದಾರೆ. ಈ ಪ್ರದರ್ಶನದಲ್ಲಿ ವಿವಿಧ ಸಂಗೀತ ಪ್ರಕಾರಗಳ, ಸಮುದಾಯಗಳು ಮರುಸ್ಥಾಪಿಸಿದ ಸಾಂಪ್ರದಾಯಿಕ ತುಣುಕುಗಳಿಂದ, ಸ್ಕಾಟ್ ಲ್ಯಾಂಡ್ ನ ಪ್ರಸಿದ್ಧ ಬ್ಯಾಗ್ ಪೈಪ್ ನ ಮಧುರ ರಾಗಗಳ ಜೊತೆಗೆ ಬಾಲಿವುಡ್ ಜಗತ್ತಿನ ಹೆಸರಾಂತ ಹಾಡುಗಳು ನಿಮಗಾಗಿ! ವಿಖ್ಯಾತ ರಂಗತಜ್ಞ ರಾಯ್ ಸ್ಟನ್ ಏಬೆಲ್ ರವರ ಪರಿಕಲ್ಪನೆ ಮತ್ತು ನಿರ್ದೇಶನದಲ್ಲಿ ಮೂಡಿಬಂದ ಈ ಪ್ರಯೋಗವು ನಶಿಸಿ ಹೋಗುತ್ತಿರುವ ಹಾವಾಡಿಗರ ಸಮುದಾಯ, ಸಂಸ್ಕೃತಿಯ ಬಗ್ಗೆ ಅರಿವು ಮೂಡಿಸುವ ಪ್ರಯತ್ನ ವಾಗಿದೆ. ಅದರಲ್ಲೂ ಸರ್ಕಾರ ವಿಧಿಸಿರುವ ನಿಷೇಧದ ಹಿನ್ನೆಲೆಯಲ್ಲಿ ಹಾವಾಡಿಗ ಸಮುದಾಯಕ್ಕೆ ಅವರ ಕೌಶಲ್ಯಕ್ಕೆ ಅನುಗುಣವಾಗಿ ಒಂದು ಸುಸ್ಥಿರ ಪರ್ಯಾಯ ಉದ್ಯೋಗ ವ್ಯವಸ್ಥೆ ಅನಿವಾರ್ಯವಾಗಿದೆ.

ಒಂದು ನೂರು ಹಾವಾಡಿಗರು 2014 ರಲ್ಲಿ ಮೊದಲ ಕಂಡು ಅದ್ಭುತ ವಿಮರ್ಶೆಗಳನ್ನು ಕಂಡಿದೆ. ಬೆಂಗಳೂರಿನಲ್ಲಿ ಇದು ಮೊದಲ ಪ್ರಯೋಗ. ಟಿಕೆಟ್ ಗಳು bookmyshow.com ನಲ್ಲಿ ಲಭ್ಯ ಹೆಚ್ಚಿನ ಮಾಹಿತಿಗೆ contact@bhoomija.org

## ವೆಜ್ ಮಿಕ್ಸ್ ಪರೋಟ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಗೋಧಿ ಹಿಟ್ಟು- ಒಂದೂವರೆ ಕಪ್, ಕಡ್ಲೆಬೇಳೆ ಹಿಟ್ಟು- ಕಾಲು ಕಪ್, ಆಲೂಗೆಡ್ಡೆ- ಮುಕ್ಕಾಲು ಕಪ್, ಪಾಲಕ್ ಸೊಪ್ಪು- ಒಂದು ಕಪ್, ಹಸಿಮೆಣಸಿಕ ಕಾಯಿ- ಐದರಿಂದ ಆರು, ಕ್ಯಾರೆಟ್ ತುರಿ- ಕಾಲು ಕಪ್,ಮೊಸರು- ನಾಲ್ಕೈದು ಚಮಚ, ಉಪ್ಪು- ರುಚಿಗೆ ತಕ್ಕಷ್ಟು, ಎಣ್ಣೆ- ಬೇಯಿಸಲು ಅಗತ್ಯವಿರುವಷ್ಟು.

### ಮಾಡುವ ವಿಧಾನ

ಮೊದಲಿಗೆ ಆಲೂಗೆಡ್ಡೆಯನ್ನು ಬೇಯಿಸಿಟ್ಟು ಕೊಳ್ಳಬೇಕು, ಆ ನಂತರ ಪಾಲಕ್ ಸೊಪ್ಪು, ಹಸಿಮೆಣಸು, ಕ್ಯಾರೆಟ್ ಸೇರಿಸಿ ಮಿಕ್ಸಿ ಮಾಡಿಟ್ಟುಕೊಳ್ಳಬೇಕು. ಬಳಿಕ ಗೋಧಿ ಮತ್ತು ಕಡ್ಲೆ ಹಿಟ್ಟಿಗೆ ಎಲ್ಲ ಪದಾರ್ಥಗಳನ್ನು ಸೇರಿಸಿ ಚೆನ್ನಾಗಿ ಕಲೆಸಬೇಕು. ಹದಕ್ಕೆ ಬಂದ ಬಳಿಕ ಚಿಕ್ಕದಾಗಿ ಪರೋಟ ತಯಾರಿಸಿ ಬಳಿಕ ತಾವಾದಲ್ಲಿ ಸ್ವಲ್ಪ ಎಣ್ಣೆ ಹಾಕಿಕೊಂಡು ಎರಡು ಬದಿಯೂ ಚೆನ್ನಾಗಿ ಕಾಯಿಸಿ ತೆಗೆದರೆ ವೆಜ್ ಮಿಕ್ಸ್ ಪರೋಟ ಸೇವಿಸಲು ಸಿದ್ಧ

## Savsol ಲೂಬ್ರಿಕೆಂಟ್ಸ್‌ಗೆ ಬ್ರ್ಯಾಂಡ್ ಅಂಬಾಸಿಡರ್ ಆದ ಬಾಲಿವುಡ್ ಯೂತ್ ಐಕಾನ್ ಸಿದ್ಧಾರ್ಥ್ ಮಲ್ಹೋತ್ರಾ






ಆಟೋಮೋಟಿವ್ ಮತ್ತು ಇಂಡಸ್ಟ್ರಿಯಲ್ ಲೂಬ್ರಿಕೆಂಟ್ ಕ್ಷೇತ್ರದ ಪ್ರಮುಖ ಕಂಪನಿ ಆಗಿರುವ Savsol ಲೂಬ್ರಿಕೆಂಟ್ಸ್, ಇಂದು ಅತ್ಯಾಧುನಿಕ ತಂತ್ರಜ್ಞಾನದ ಮೂಲಕ ತಯಾರಾದ ಹೊಚ್ಚ ಹೊಸ ಲೂಬ್ರಿಕಂಟ್ ಶ್ರೇಣಿ Savsol ಎಸ್ಟರ್ 5 ಅನ್ನು ಬಿಡುಗಡೆ ಮಾಡುತ್ತಿರುವುದಾಗಿ ಘೋಷಿಸಿದೆ. ಈ ಉತ್ಪನ್ನವು ಕಂಪನಿಯ ಉತ್ಪನ್ನ ಶ್ರೇಣಿಗಳನ್ನು ಮತ್ತು ಲೂಬ್ರಿಕೆಂಟ್ ಮಾರುಕಟ್ಟೆಯನ್ನು ಪರಿವರ್ತನೆಯ ಹಾದಿಯಲ್ಲಿ ಕರೆದೊಯ್ಯುವ ನಂಬಿಕೆಯನ್ನು ಕಂಪನಿಯು ಹೊಂದಿದೆ.

ಈ ಮಹತ್ವದ ಸಂದರ್ಭದಲ್ಲಿ Savsol ಲೂಬ್ರಿಕೆಂಟ್ಸ್ ಕಂಪನಿಯು ತನ್ನ ಬ್ರ್ಯಾಂಡ್ ಅಂಬಾಸಿಡರ್ ಆಗಿ ಬಾಲಿವುಡ್ ನಾಯಕ ನಟ ಸಿದ್ದಾರ್ಥ್ ಮಲ್ಹೋತ್ರಾ ಅವರನ್ನು ನೇಮಿಸಿರುವುದಾಗಿ ಘೋಷಿಸಿದೆ. ಈ ಸಹಯೋಗದ ಮೂಲಕ ಕಂಪನಿಯು ತನ್ನ ಬ್ರ್ಯಾಂಡ್ ಗೋಚರತೆಯನ್ನು ಮತ್ತಷ್ಟು ಹೆಚ್ಚಿಸುವ, ಹೆಚ್ಚು ಗ್ರಾಹಕರನ್ನು ತಲುಪುವ ಹಾಗೂ ಗ್ರಾಹಕರೊಂದಿಗೆ ಬಲವಾದ ಬಂಧವನ್ನು ರೂಪಿಸುವ ಗುರಿಯನ್ನು ಹೊಂದಿದೆ. ಸಿದ್ಧಾರ್ಥ್ ಮಲ್ಹೋತ್ರಾ ಜೊತೆಗಿನ ಪಾಲುದಾರಿಕೆಯ ಮೂಲಕ Savsol ಎಸ್ಟರ್ 5 ಬ್ರ್ಯಾಂಡ್ ಹೆಸರಿನಲ್ಲಿ ತನ್ನ ಅತ್ಯಾಧುನಿಕ ಶ್ರೇಣಿಯ ಉತ್ಪನ್ನಗಳನ್ನು ಪರಿಚಯಿಸುವ ಉದ್ದೇಶವನ್ನು ಕಂಪನಿಯು ಹೊಂದಿದ್ದು, ಈ ಪಾಲುದಾರಿಕೆಯು Savsolನ ಪ್ರಯಾಣದಲ್ಲಿ ಪ್ರಮುಖ ಮೈಲುಗಲ್ಲಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಸವಿತಾ ಆಯಿಲ್ ಟೆಕ್ನಾಲಜೀಸ್ ಲಿಮಿಟೆಡ್ ನ ಅಧ್ಯಕ್ಷ ಮತ್ತು ಎಂಡಿ ಗೌತಮ್ ಎನ್. ಮೆಹ್ರಾ, "ಎಸ್ಟರ್ ಉತ್ಪನ್ನಗಳ ಶ್ರೇಣಿಯ ಬಿಡುಗಡೆಯ ಮೂಲಕ ಲೂಬ್ರಿಕಂಟ್ ಉದ್ಯಮದಲ್ಲಿ ಹೊಸ ಮಾನದಂಡಗಳನ್ನು ಸ್ಥಾಪಿಸುವ ಎಸ್ಟರ್ ಲಿಕ್ವಿಡ್ ತಂತ್ರಜ್ಞಾನವನ್ನು ಅನಾವರಣಗೊಳಿಸಲು ನಾವು ಹೆಮ್ಮೆ ಪಡುತ್ತೇವೆ. ಸಿದ್ಧಾರ್ಥ್ ಮಲ್ಹೋತ್ರಾ ಅವರನ್ನು ರಾಯಭಾರಿಯನ್ನಾಗಿ ನೇಮಿಸುವ ಮೂಲಕ ನಾವು ಉತ್ಕೃಷ್ಟತೆ ವಿಚಾರದಲ್ಲಿ ಹೊಸ ಎತ್ತರ ಏರಲು ತಯಾರಾಗಿದ್ದೇವೆ ಮತ್ತು ನಮ್ಮ ಗ್ರಾಹಕರಿಗೆ ಅಸಾಧಾರಣ ಉತ್ಪನ್ನಗಳು ಮತ್ತು ಅಪೂರ್ವ ಅನುಭವ ಒದಗಿಸುವುದನ್ನು ಮುಂದುವರಿಸುತ್ತೇವೆ'' ಎಂದು ಹೇಳಿದರು.

ಬ್ರ್ಯಾಂಡ್ ಅಂಬಾಸಿಡರ್ ಆಗಿ ನೇಮಕಗೊಂಡ ಬಳಿಕ ಮಾತನಾಡಿದ ಬಾಲಿವುಡ್ ನಾಯಕ ನಟ ಸಿದ್ಧಾರ್ಥ್ ಮಲ್ಹೋತ್ರಾ ಅವರು, ಖಚಿತಅಟ ಲೂಬ್ರಿಕೆಂಟ್ಸ್ ಜೊತೆ ಪಾಲುದಾರಿಕೆ ಹೊಂದಲು ನಾನು ಸಂತೋಷಪಡುತ್ತೇನೆ. ಗ್ರಾಹಕರಿಗೆ ವಿಶಿಷ್ಟವಾದ ವಾಹನ ಚಾಲನಾ ಅನುಭವವನ್ನು ನೀಡುವ ಕಂಪನಿಯ ಬದ್ಧತೆಯನ್ನು ಈ ಮೂಲಕ ನಾನು ಮುಂದುವರಿಸಲಿದ್ದೇನೆ. ಖಚಿತಅಟ ನಂತಹ ನವೀನ ಬ್ರ್ಯಾಂಡ್ ಜೊತೆಗಿನ ಸಹಯೋಗವು ಶ್ರೇಷ್ಠತೆಯ ಹುಡುಕಾಟದ ನನ್ನ ವ್ಯಕ್ತಿತ್ವದ ಜೊತೆ ಹೊಂದಿಕೆಯಾಗುತ್ತದೆ ಮತ್ತು ನಾನು ಈ ಪ್ರಯಾಣವನ್ನು ಪ್ರಾರಂಭಿಸಲು ಎದುರು ನೋಡುತ್ತಿದ್ದೇನೆ ಎಂದು ಹೇಳಿದರು.

## ಬ್ಲಡ್ ಶುಗರ್ ನಾರ್ಮಲ್ ಆಗಬೇಕೆ

### ಹೆಲ್ತ್ ಟಿಪ್ಸ್




ಬೇಸಿಗೆಯಲ್ಲಿ ಬ್ಲಡ್ ಶುಗರ್ ಹೆಚ್ಚಾಗುವುದು ಸಾಮಾನ್ಯ ಆದರೆ ಅದನ್ನು ಹಾಗೇ ಬಿಡುವುದು ಅಪಾಯಕಾರಿ. ಆಯಿಲ್ ಪುಲ್ಲಿಂಗ್ ಒಂದು ಪುರಾತನ ಆಯುರ್ವೇದ ವಿಧಾನವಾಗಿದ್ದು, ಸುಮಾರು 20 ನಿಮಿಷಗಳ ಕಾಲ ಬಾಯಿಯಲ್ಲಿ ತೆಂಗಿನೆಣ್ಣೆ ಹಾಕಿ ಬಿಡಿ. ಇದು ಬಾಯಿಯ ಬ್ಯಾಕ್ಟೀರಿಯಾವನ್ನು ತೆಗೆದು ಹಾಕುವುದು ಮಾತ್ರವಲ್ಲದೆ ವಿವಿಧ ರೋಗಗಳನ್ನು ತಡೆಯಲು ಸಹಾಯ ಮಾಡುತ್ತದೆ.

ತೆಂಗಿನ ಎಣ್ಣೆಯನ್ನು ಡೆಡ್ ಜೀವಕೋಶಗಳಿಗೆ ಚಿಕಿತ್ಸೆ ನೀಡಲು ಮತ್ತು ಚರ್ಮಕ್ಕೆ ಹೊಳಪನ್ನು ತರಲು ಬಳಸಲಾಗುತ್ತದೆ. ಇದು ಯಾವುದೇ ಅಡ್ಡ ಪರಿಣಾಮಗಳನ್ನು ಹೊಂದಿರದ ಕಾರಣ, ಚರ್ಮಕ್ಕೆ ಸಂಬಂಧಿಸಿದ ಸಮಸ್ಯೆಗಳಾದ ಸೋರಿಯಾಸಿಸ್, ಡರ್ಮಟೈಟಿಸ್, ಎಸ್ಜಿಮಾ ಮತ್ತು ಚರ್ಮದ ಕಿರಿಕಿರಿಗಳಿಗೆ ಚಿಕಿತ್ಸೆ ನೀಡಲು ಇದನ್ನು ಬಳಸಬಹುದು.

ತೆಂಗಿನ ಎಣ್ಣೆಯು ಕೂದಲಿನ ಬೆಳವಣಿಗೆಗೆ ತುಂಬಾ ಪ್ರಯೋಜನಕಾರಿಯಾಗಿದೆ. ಕೂದಲಿಗೆ ಹೊಳಪನ್ನು ತರಲು ಸಹಾಯ ಮಾಡುತ್ತದೆ. ತೆಂಗಿನೆಣ್ಣೆಯಿಂದ ತಲೆಗೆ ಐದು ನಿಮಿಷಗಳ ಕಾಲ ಮಸಾಜ್ ಮಾಡುವುದರಿಂದ ರಕ್ತ ಪರಿಚಲನೆ ಹೆಚ್ಚಾಗುವುದಲ್ಲದೆ, ಕಳೆದುಹೋದ ಪೋಷಕಾಂಶಗಳನ್ನು ಪುನಃ ತುಂಬಿಸಲು ಸಹಾಯ ಮಾಡುತ್ತದೆ. ತೆಂಗಿನ ಎಣ್ಣೆಯು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ ಮತ್ತು ಇನ್ಸುಲಿನ್ ಅನ್ನು ಸುಧಾರಿಸುತ್ತದೆ. ಇದು ರಕ್ತದಲ್ಲಿನ ಗ್ಲೂಕೋಸ್'ನ ಪರಿಣಾಮಕಾರಿ ಬಳಕೆಯನ್ನು ಉತ್ತೇಜಿಸುತ್ತದೆ.

## ಬ್ಲಾಕ್ ಹೆಡ್ಸ್ ನಿವಾರಣೆಗೆ ಸಲಹೆ

### ಬ್ಯೂಟಿ ಟಿಪ್ಸ್



ಕಪ್ಪು ಕಲೆಗಳು ಅಂದ್ರೆ, ಬ್ಲಾಕ್ ಹೆಡ್ಸ್ ಮುಖದ ಸೌಂದರ್ಯವನ್ನು ಹಾಳು ಮಾಡುತ್ತವೆ. ಕೆಲ ಮಹಿಳೆಯರ ಮೂಗಿನ ಮೇಲೆ ಈ ಕಪ್ಪು ಕಲೆಗಳು ಹೆಚ್ಚಾಗಿ ಕಾಣಿಸಿಕೊಳ್ಳುತ್ತವೆ.

ಆಯ್ಲಿ ಚರ್ಮದಿಂದಾಗಿ ಮುಖದ ರೋಮ ರಂಧ್ರ ತೆರೆದುಕೊಳ್ಳುತ್ತದೆ. ಇದ್ರಲ್ಲಿ ಧೂಳು, ಕೊಳಕು ಸೇರಿ ಬ್ಲಾಕ್ ಹೆಡ್ಸ್ ಕಾಡಲು ಶುರುವಾಗುತ್ತದೆ.

ಈ ಬ್ಲಾಕ್ ಹೆಡ್ಸ್ ಸಮಸ್ಯೆಯನ್ನು ನೀವು ಮನೆಯಲ್ಲಿಯೇ ಪರಿಹರಿಸಿಕೊಳ್ಳಬಹುದು. ಕಾಫಿ ಪುಡಿ ನಿಮ್ಮ ಸಮಸ್ಯೆಗೆ ಮದ್ದಾಗಬಲ್ಲದು.

ಈ ಪೇಸ್ಟ್ ಗೆ ಬೇಕಾಗುವ ಸಾಮಗ್ರಿ : ಎರಡು ಚಮಚ ಮೊಸರು, ಒಂದು ದೊಡ್ಡ ಚಮಚ ಕಾಫಿ ಪುಡಿ, ಒಂದು ಚಮಚ ಕಡಲೆ ಹಿಟ್ಟು.

ಮೊದಲು ಮೊಸರು, ಕಾಫಿ ಪುಡಿ, ಕಡಲೆ ಹಿಟ್ಟನ್ನು ಒಂದು ಪಾತ್ರೆಗೆ ಹಾಕಿ ಮಿಕ್ಸ್ ಮಾಡಿ. ದಪ್ಪದಾದ ಪೇಸ್ಟ್ ತಯಾರಿಸಿಕೊಂಡು ಅದನ್ನು ಬ್ಲಾಕ್ ಹೆಡ್ಸ್ ಇರುವ ಜಾಗಕ್ಕೆ ಹಚ್ಚಿಕೊಳ್ಳಿ. ನಂತ್ರ ಕೈನಿಂದ ನಿಧಾನವಾಗಿ ಮಸಾಜ್ ಮಾಡಿ. ನಂತ್ರ 2 ನಿಮಿಷ ಬಿಟ್ಟು ಮುಖವನ್ನು ನೀರಿನಲ್ಲಿ ತೊಳೆದುಕೊಳ್ಳಿ. ಇದಾದ ನಂತ್ರ ಮುಖಕ್ಕೆ ಕ್ರೀಂ ಹಚ್ಚಿ. ವಾರದಲ್ಲಿ ಒಂದರಿಂದ ಎರಡು ಬಾರಿ ಹೀಗೆ ಮಾಡಿದ್ರೆ, ನಿಮ್ಮ ಬ್ಲಾಕ್ ಹೆಡ್ಸ್ ದೂರವಾಗುತ್ತೆ.

## ಆದಿತ್ಯ ಬಿರ್ಲಾ ಕ್ಯಾಪಿಟಲ್ ಓಮ್ನಿಚಾನೆಲ್ ಡಿ2ಸಿ ಪ್ಲಾಟ್ಫಾರ್ಮ್ ಎಬಿಸಿಡಿ ಪ್ರಾರಂಭ

ಆದಿತ್ಯ ಬಿರ್ಲಾ ಗ್ರೂಪ್ನ ಪ್ರಮುಖ ವೈವಿಧ್ಯಮಯ ಹಣಕಾಸು ಸೇವೆಗಳ ಸಮೂಹ, ಆದಿತ್ಯ ಬಿರ್ಲಾ ಕ್ಯಾಪಿಟಲ್ (ಎಬಿಸಿ) ಕಳೆದ 2 ವರ್ಷಗಳಲ್ಲಿ ಬಲವಾದ ಬೆಳವಣಿಗೆಯನ್ನು ದಾಖಲಿಸುವ ಮೂಲಕ ಪರಿವರ್ತನೆಯ ಪ್ರಯಾಣವನ್ನು ಪ್ರಾರಂಭಿಸಿದೆ. ಈ ಆವೇಗವನ್ನು ನಿರ್ಮಿಸುವ ಮೂಲಕ, ಆದಿತ್ಯ ಬಿರ್ಲಾ ಕ್ಯಾಪಿಟಲ್ ತನ್ನ ಓಮ್ನಿಚಾನೆಲ್ ಡಿ2ಸಿ ಪ್ಲಾಟ್ಫಾರ್ಮ್ ಎಬಿಸಿಡಿ ಅನ್ನು ಎವೆರಿಥಿಂಗ್ ಫೈನಾನ್ಸ್ ಆಸ್ ಸಿಂಪಲ್ ಆಸ್ ಎಬಿಸಿಡಿ ಎಂಬ ಘೋಷ ವಾಕ್ಯದ ಮೂಲಕ ಪ್ರಾರಂಭಿಸುವುದಾಗಿ ಘೋಷಿಸಿತು, ಈ ಪ್ಲಾಟ್ಫಾರ್ಮ್ ಮೂಲಕ, ಎಬಿಸಿ ಮುಂದಿನ 3 ವರ್ಷಗಳಲ್ಲಿ 30 ಮಿಲಿಯನ್ ಹೊಸ ಬಳಕೆದಾರರನ್ನು ತಲುಪುವ ಗುರಿ ಹೊಂದಿದೆ. ಬೆಳವಣಿಗೆ ಮತ್ತು ನಾಯಕತ್ವವನ್ನು ಹೆಚ್ಚಿಸಲು ಮತ್ತು ಪೂರ್ಣ-ಸ್ಟಾಕ್ ಹಣಕಾಸು ಸೇವೆಗಳ ಪೂರೈಕೆದಾರರಾಗಲು ಅದರ ಮಹತ್ವಾಕಾಂಕ್ಷೆಯ ಪ್ರಯಾಣದಲ್ಲಿ ಉಡಾವಣೆಯು ಒಂದು ಪ್ರಮುಖ ಕ್ಷಣವಾಗಿದೆ.

ವೇದಿಕೆಯ ಪ್ರಾರಂಭವನ್ನು ಪ್ರಕಟಿಸಿದ ಶ್ರೀ. ಕುಮಾರ್ ಮಂಗಲಂ ಬಿರ್ಲಾ, ಅಧ್ಯಕ್ಷರು ಆದಿತ್ಯ ಬಿರ್ಲಾ ಗ್ರೂಪ್ ಅವರು ಮಾತನಾಡಿ "ನಮ್ಮ ಹಣಕಾಸು ಸೇವೆಗಳ ವ್ಯವಹಾರ, ಆದಿತ್ಯ ಬಿರ್ಲಾ ಕ್ಯಾಪಿಟಲ್, ಈಗ ಗುಂಪಿನೊಳಗೆ ವೇಗವಾಗಿ ಬೆಳೆಯುತ್ತಿರುವ ವ್ಯವಹಾರಗಳಲ್ಲಿ ಒಂದಾಗಿದೆ ಮತ್ತು ಪ್ರಮುಖ ಬೆಳವಣಿಗೆಯ ಎಂಜಿನ್ ಆಗಿ ಹೊರಹೊಮ್ಮಿದೆ. ನಾನು ಇದನ್ನು ಆದಿತ್ಯ ಬಿರ್ಲಾ ಕ್ಯಾಪಿಟಲ್ಗೆ 'ವಯಸ್ಸಿಗೆ ಬರುವ' ಕ್ಷಣವೆಂದು ನೋಡುತ್ತೇನೆ. ಆದಿತ್ಯ ಬಿರ್ಲಾ ಕ್ಯಾಪಿಟಲ್ನ ಬಲವಾದ ಮತ್ತು ಸ್ಥಿರವಾದ ಪ್ರಗತಿಯ ಪಥದಲ್ಲಿ ಎಬಿಸಿಡಿ ಡಿ2ಸಿ ಪ್ಲಾಟ್ಫಾರ್ಮ್ ವೇಗವರ್ಧಿತ ಬೆಳವಣಿಗೆಯ ಕಡೆಗೆ ಧನಾತ್ಮಕ ದಾಪುಗಾಲು ಮತ್ತು ಹಣಕಾಸು ಸೇವೆಗಳ ವಲಯದಲ್ಲಿ ನಾಯಕತ್ವದ ಸ್ಥಾನವನ್ನು ಪಡೆದುಕೊಳ್ಳುತ್ತದೆ. ಈ ಪ್ಲಾಟ್ಫಾರ್ಮ್ ಎಬಿಸಿ ಮತ್ತು ಎಬಿಜಿ ಪರಿಸರ ವ್ಯವಸ್ಥೆಯಾದ್ಯಂತ ಬೆಳವಣಿಗೆಯ ವೇಗವರ್ಧಕವಾಗಿ ಕಾರ್ಯನಿರ್ವಹಿಸುತ್ತದೆ ಎಂದು ನನಗೆ ವಿಶ್ವಾಸವಿದೆ, ಮತ್ತು ಹಣಕಾಸು ಸೇವೆಗಳ ಸ್ಟ್ಯಾಕ್ ಮತ್ತು ಗ್ರೂಪ್ನ ವೈವಿಧ್ಯಮಯ ವ್ಯವಹಾರಗಳ ನಡುವಿನ ಪರಸ್ಪರ ಕ್ರಿಯೆಯು ಉನ್ನತ ಉತ್ಪನ್ನ ನಾವೀನ್ಯತೆ ಮತ್ತು ಎಲ್ಲಾ ಪಾಲುದಾರರಿಗೆ ಅನನ್ಯ ಮೌಲ್ಯ ರಚನೆಗೆ ಯಶಸ್ವಿನ ಸಾಧ್ಯತೆಯನ್ನು ಉತ್ತೇಜಿಸುತ್ತದೆ ಎಂದು ಹೇಳಿದರು.

ಆದಿತ್ಯ ಬಿರ್ಲಾ ಕ್ಯಾಪಿಟಲ್ ಲಿಮಿಟೆಡ್ನ ಸಿಇಒ ಶ್ರೀಮತಿ ವಿಶಾಖಾ ಮೂಲ್ಯೆ ಮಾತನಾಡಿ, ಆದಿತ್ಯ ಬಿರ್ಲಾ ಕ್ಯಾಪಿಟಲ್ನಲ್ಲಿ, 'ಒಬ್ಬ ಗ್ರಾಹಕ,' 'ಒಂದು ಅನುಭವ,' ಮತ್ತು ಒಂದು ತತ್ವದ ಮೇಲೆ ಆಧಾರವಾಗಿರುವ 'ಒನ್ ಎಬಿಸಿ ಒನ್ ಪಿ ಮತ್ತು ಎಲ್,' ವಿಧಾನದಿಂದ ನಾವು ಮಾರ್ಗದರ್ಶನ ಪಡೆದಿದ್ದೇವೆ. ಇದು ನಮ್ಮ ವ್ಯವಹಾರಗಳಾದ್ಯಂತ ಗುಣಮಟ್ಟ ಮತ್ತು ಲಾಭದಾಯಕ ಬೆಳವಣಿಗೆಯನ್ನು ಚಾಲನೆ ಮಾಡುವಲ್ಲಿ ಪ್ರಮುಖ ಪಾತ್ರವನ್ನು ವಹಿಸಿದೆ ಮತ್ತು ಎಲ್ಲಾ ಮಧ್ಯಸ್ಥಗಾರರಿಗೆ ದೀರ್ಘಾವಧಿಯ ಮೌಲ್ಯವನ್ನು ಸೃಷ್ಟಿಸುತ್ತದೆ. ಡಿಜಿಟಲ್ ಮರುಶೋಧನೆ ಮತ್ತು ಗ್ರಾಹಕರ ಅನುಭವಗಳನ್ನು ಮರುರೂಪಿಸುವ ನಮ್ಮ ಸ್ಥಿರವಾದ ಬದ್ಧತೆಯು ನಮ್ಮ ಓಮ್ನಿಚಾನಲ್ ಆರ್ಕಿಟೆಕ್ಚರ್ನಲ್ಲಿ ಪ್ರತಿಫಲಿಸುತ್ತದೆ, ಇದು ಗ್ರಾಹಕರಿಗೆ ಅವರ ಆಯ್ಕೆಯ ಚಾನಲ್ಗಳ ಮೂಲಕ ನಮ್ಮೊಂದಿಗೆ ಸಂವಹನ ನಡೆಸಲು ಸಂಪೂರ್ಣ ನಮ್ಯತೆಯನ್ನು ನೀಡುತ್ತದೆ ಎಂದು ಹೇಳಿದರು.




## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:**ಅಧಿಕ ನಷ್ಟ, ಅಧಿಕಾರಿಗಳಿಂದ ಅನುಕೂಲ, ಶತ್ರು ದಮನ, ಕೋರ್ಟ್ ಕೇಸುಗಳಲ್ಲಿ ಜಯ.

**ವೃಷಭ:** ಆಸ್ತಿ ಸಮಸ್ಯೆಗಳು ಬಗೆಹರಿಯುವುದು, ಸಹೋದರಿಯಿಂದ ಅನುಕೂಲ,

**ಮಿಥುನ:** ಉದ್ಯೋಗ ಬದಲಾವಣೆ ಆಲೋಚನೆ, ಮಾತಿನಿಂದ ಕುಟುಂಬಸ್ಥರಿಗೆ ನೋವು, ಗುಪ್ತ ಧನಾಗಮನ.

**ಕಟಕ:** ವ್ಯವಹಾರದಲ್ಲಿ ಧನಾಗಮನ, ಅನಗತ್ಯ ತಿರುಗಾಟ, ಅಧಿಕ ಧೈರ್ಯ, ಶೌರ್ಯ. ತೊಂದರೆ.

**ಸಿಂಹ:** ಆದಾಯ ಮತ್ತು ನಷ್ಟ ಸಮ, ಉತ್ತಮ ಹೆಸರು ಗೌರವ ಕೀರ್ತಿ, ಅಭಿವೃದ್ಧಿಯ ಹಂಬಲ, ನಿದ್ರಾಭಂಗ.

**ಕನ್ಯಾ:** ಒತ್ತಡಕ್ಕೆ ಸಿಲುಕುವಿರಿ, ಉದ್ಯೋಗ ಒತ್ತಡದಿಂದ ನಿದ್ರಾಭಂಗ, ನಷ್ಟದ ಪ್ರಮಾಣ ಅಧಿಕ, ರಾಜಕೀಯ ವ್ಯಕ್ತಿ ಸಂಕಷ್ಟ.

**ತುಲಾ:** ಉದ್ಯೋಗ ಲಾಭ, ಲಾಭದ ಪ್ರಮಾಣ ಕುಂಠಿತ, ಅದೃಷ್ಟ ವಂಚಿತರಾದ ಭಾವನೆ.

**ವೃಶ್ಚಿಕ:** ಕುಟುಂಬ ಸೌಖ್ಯ, ಬಂಧು ಮಿತ್ರರ ಸಮಾಗಮ, ಮನಸ್ತಾಪ, ಆಂತರಿಕ ಕಲಹ, ಪರರಿಂದ ಮೋಸ.

**ಧನಸ್ಸು:** ವ್ಯಾಪಾರದಲ್ಲಿ ಅಭಿವೃದ್ಧಿ, ಸಾರ್ವಜನಿಕ ಕ್ಷೇತ್ರದಲ್ಲಿ ಮನ್ನಣೆ, ಸ್ಥಿರಾಸ್ತಿ ಮಾರಾಟ, ಸ್ತ್ರೀ ಸೌಖ್ಯ, ನಾನಾ ರೀತಿಯ ಚಿಂತೆ.

**ಮಕರ:** ದೇವತಾ ಕಾರ್ಯಗಳಲ್ಲಿ ಭಾಗಿ, ವಿರೋಧಿಗಳಿಂದ ತೊಂದರೆ, ರೋಗಭಾದೆ, ಮನೋವ್ಯಥೆ, ಶ್ರಮಕ್ಕೆ ತಕ್ಕ ಫಲ,

**ಕುಂಭ:** ದಾಂಪತ್ಯದಲ್ಲಿ ಪ್ರೀತಿ, ಸಾಲದಿಂದ ಮುಕ್ತಿ, ಚಂಚಲ ಮನಸ್ಸು, ಕೃಷಿಯಲ್ಲಿ ಅಲ್ಪ ಲಾಭ

**ಮೀನ:** ಪ್ರೀತಿ-ಪ್ರೇಮದ ವಿಷಯಗಳಲ್ಲಿ ಸಮಸ್ಯೆ, ಮಕ್ಕಳೊಂದಿಗೆ ವಾಗ್ವಾದ ಮತ್ತು ಬೇಸರ, ಸಾಲದ ಸಮಸ್ಯೆ, ಶತ್ರು ಬಾಧೆ, ನಷ್ಟದ ಪ್ರಮಾಣ ಅಧಿಕ.

## ಅಂತರರಾಷ್ಟ್ರೀಯ ಕ್ಲೈ–ಫೈ ದಿನ




ಪ್ರತಿ ವರ್ಷ ಏಪ್ರಿಲ್ 20 ರಂದು ಅಂತರರಾಷ್ಟ್ರೀಯ ಕ್ಲೈ-ಫೈ ದಿನವನ್ನು ಆಚರಿಸಲಾಗುತ್ತದೆ. ಕ್ಲೈ-ಫೈ ಎಂದರೆ ಹವಾಮಾನ ಬದಲಾವಣೆಯ ಕಾಲ್ಪನಿಕ. ಇದು ವೈಜ್ಞಾನಿಕ ಕಾಲ್ಪನಿಕ ಅಥವಾ ಊಹಾತ್ಮಕ-ಕಾಲ್ಪನಿಕ ಪ್ರಕಾರದಿಂದ ಪ್ರತ್ಯೇಕವಾದ ಪ್ರಕಾರವಾಗಿದೆ. ಇಂಗಾಲದ ಹೊರಸೂಸುವಿಕೆಯಿಂದ ಜಾಗತಿಕ ತಾಪಮಾನ ಏರಿಕೆಯ ಪರಿಣಾಮಗಳನ್ನು ನಮ್ಮ ಗ್ರಹವು ಅನುಭವಿಸುತ್ತಿದೆ ಎಂದು ನಮಗೆಲ್ಲರಿಗೂ ತಿಳಿದಿದೆ. ಕೆಲವು ಲೇಖಕರು ತಮ್ಮ ಕಾದಂಬರಿಗಳಲ್ಲಿ ಜಾಗತಿಕ ಹವಾಮಾನ ಬದಲಾವಣೆಯನ್ನು ಅನ್ವೇಷಿಸುತ್ತಾರೆ. ಈ ವಿಷಯದೊಂದಿಗೆ ವ್ಯವಹರಿಸುವ ಬಹಳಷ್ಟು ಚಲನಚಿತ್ರಗಳಿವೆ ಮತ್ತು ನಮ್ಮ ಗ್ರಹದಲ್ಲಿ ಹವಾಮಾನ ಬದಲಾವಣೆಯ ಅಪಾಯಕಾರಿ ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ಪ್ರಯತ್ನಿಸುತ್ತದೆ. ನಮ್ಮ ಜಾತಿಯ ನಾಶವನ್ನು ತಪ್ಪಿಸಲು ನಮ್ಮ ಪ್ರಸ್ತುತ ಅಭ್ಯಾಸಗಳನ್ನು ಸುಸ್ಥಿರ ಅಭ್ಯಾಸಗಳಿಗೆ ಬದಲಾಯಿಸುವುದು ಅತ್ಯಂತ ಮಹತ್ವದ್ದಾಗಿದೆ.

ನಾವು ವಾಸಿಸುವ ಪ್ರಪಂಚದ ಬಗ್ಗೆ ಫಿಕ್ಷನ್ ನಮಗೆ ಕಲಿಸುತ್ತದೆ. ಮಾನವರು ಭೂಮಿಯ ನಿವಾಸಿಗಳು ಮಾತ್ರವಲ್ಲ. ಸಸ್ಯಗಳು, ಪ್ರಾಣಿಗಳು, ಶಿಲೀಂಧ್ರಗಳು, ಪ್ರೊಟಿಸ್ಟ್ಗಳು, ಆರ್ಕಿಯಾ ಮತ್ತು ಬ್ಯಾಕ್ಟೀರಿಯಾ: ನಾವು ವಿವಿಧ ರೀತಿಯ ಜೀವನದಿಂದ ತುಂಬಿರುವ ಪರಿಸರ ವ್ಯವಸ್ಥೆಗಳಿಂದ ಸುತ್ತುವರೆದಿದ್ದೇವೆ. ಜೀವನದ ಈ ವಿಭಿನ್ನ ರೂಪಗಳು ಪರಿಪೂರ್ಣ ಸಿಂಕ್ರೊನೈಸೇಶನ್ನಲ್ಲಿ ಪರಸ್ಪರ ಸಂವಹನ ನಡೆಸುತ್ತವೆ. ಮಾನವ ಚಟುವಟಿಕೆಗಳು ಈ ಪರಿಪೂರ್ಣ ಪರಸ್ಪರ ಕ್ರಿಯೆಯನ್ನು ಅಡ್ಡಿಪಡಿಸುತ್ತವೆ, ಇದು ನಮ್ಮ ಗ್ರಹದ ಮೇಲೆ ಪರಿಣಾಮ ಬೀರುತ್ತದೆ. ಇತ್ತೀಚಿನ ದಿನಗಳಲ್ಲಿ, ಹವಾಮಾನ ಕಾಲ್ಪನಿಕ ಅಥವಾ ಕ್ಲೈ-ಫೈ ಪ್ರಕಾರವು ಹೊರಹೊಮ್ಮುತ್ತಿದೆ ಮತ್ತು ನಾವು ಭೂಮಿಯಲ್ಲಿ ವಾಸಿಸುವವರೆಗೂ ನಮ್ಮ ಜೀವನದ ಮೇಲೆ ಪರಿಣಾಮ ಬೀರುವ ಹವಾಮಾನ ಬದಲಾವಣೆಯ ಬಿಕ್ಕಟ್ಟಿನ ಬಗ್ಗೆ ನಮಗೆ ಕಲಿಸುತ್ತದೆ.

ಸರಳವಾಗಿ ಹೇಳುವುದಾದರೆ, ಹವಾಮಾನ ಕಾಲ್ಪನಿಕ ಕಥೆಗಳು ಅಥವಾ ಚಲನಚಿತ್ರಗಳು ಹವಾಮಾನ ಬದಲಾವಣೆ ಅಥವಾ ಜಾಗತಿಕ ತಾಪಮಾನದ ಬಗ್ಗೆ ಕಥೆಗಳು. ಇದು ಸಾಮಾನ್ಯವಾಗಿ ಊಹಾತ್ಮಕವಾಗಿದೆ ಮತ್ತು ನಮ್ಮದೇ ಅಥವಾ ಭವಿಷ್ಯದಂತೆಯೇ ಇರುವ ಜಗತ್ತಿನಲ್ಲಿ ಹವಾಮಾನ ವಿಪತ್ತನ್ನು ಮಾನವೀಯತೆಯು ಹೇಗೆ ಎದುರಿಸುತ್ತದೆ ಎಂಬುದನ್ನು ತೋರಿಸಲು ಪ್ರಯತ್ನಿಸುತ್ತದೆ. ಹವಾಮಾನ ಬದಲಾವಣೆಯನ್ನು ಎದುರಿಸಲು ನಿರ್ಮಿಸಲಾದ ತಂತ್ರಜ್ಞಾನವನ್ನು ಹೆಚ್ಚಾಗಿ ಸೇರಿಸಲಾಗುತ್ತದೆ. ಹವಾಮಾನ ಕಾಲ್ಪನಿಕ ಪದವು ತುಲನಾತ್ಮಕವಾಗಿ ಹೊಸದು. ಹವಾಮಾನ ಬದಲಾವಣೆಯ ಗಂಭೀರತೆಯ ಬಗ್ಗೆ ನಮ್ಮ ಇತ್ತೀಚಿನ ಜ್ಞಾನದ ಬೆಳಕಿನಲ್ಲಿ ಇದು 2010 ರ ಸುಮಾರಿಗೆ ಪ್ರಾಮುಖ್ಯತೆಯನ್ನು ಪಡೆಯಲಾರಂಭಿಸಿತು. ಇತ್ತೀಚಿನ ದಿನಗಳಲ್ಲಿ, ವಿಷಯದ ಬಗ್ಗೆ ಹೆಚ್ಚು ಹೆಚ್ಚು ಪುಸ್ತಕಗಳು ಹೊರಹೊಮ್ಮುತ್ತಿವೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಮತ್ತೆ ಶಿವರಾಜ್‌ಕುಮಾರ್‌ಗೆ ಭಾವನಾ ಮೆನನ್ ನಾಯಕಿ



ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ ಮತ್ತು ಭಾವನಾ ಮೆನನ್ ಜೋಡಿಯಾಗಿ ನಟಿಸಿರುವ ಟಗರು, ಭಜರಂಗಿ-2 ಸಿನಿಮಾಗಳಿಗೆ ಅಪಾರ ಅಭಿಮಾನಿಗಳಿದ್ದಾರೆ. ಇವರಿಬ್ಬರ ಕಾಂಬಿನೇಷನ್‌ನಲ್ಲಿ ಅದ್ಯಾವಾಗ ಸಿನಿಮಾ ಬರಲಿದೆ ಎಂದು ಕಾಯುತ್ತಿದ್ದ ಅಭಿಮಾನಿಗಳಿಗೆ ಈಗ ಸಿಹಿಸುದ್ದಿ ಸಿಕ್ಕಿದೆ. ಹೊಸ ಚಿತ್ರಕ್ಕಾಗಿ ಶಿವಣ್ಣ ಮತ್ತು ಭಾವನಾ ಮತ್ತೆ ಜೋಡಿಯಾಗಿ ನಟಿಸಲಿದ್ದಾರೆ.

ಸದ್ಯ 'ಜಾಕಿ' ಭಾವನಾ ಕನ್ನಡದ ಜೊತೆಗೆ ಮಲಯಾಳಂ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಕನ್ನಡದ ಹೊಸ ಸಿನಿಮಾದಲ್ಲಿ ನಟಿಸುವ ಬಗ್ಗೆ ಸ್ವತಃ ಸಂದರ್ಶನವೊಂದರಲ್ಲಿ ಭಾವನಾ ಮಾಹಿತಿ ನೀಡಿದ್ದಾರೆ. ಬಹುನಿರೀಕ್ಷಿತ 'ಉತ್ತರಕಾಂಡ' ಚಿತ್ರದಲ್ಲಿ ಶಿವಣ್ಣ ಜೊತೆ ತೆರೆಹಂಚಿಕೊಳ್ಳುವ ಬಗ್ಗೆ ಸಿಹಿಸುದ್ದಿ ನೀಡಿದ್ದಾರೆ.

ಜನವರಿಯಲ್ಲಿ 'ಉತ್ತರಕಾಂಡ' ಚಿತ್ರದಲ್ಲಿ ಪಾತ್ರಕ್ಕಾಗಿ ತಮ್ಮ ಸಂಪರ್ಕಿಸಿರೋದಾಗಿ ತಿಳಿಸಿದ್ದಾರೆ. ಏಪ್ರಿಲ್‌ನಲ್ಲಿ ಶೂಟಿಂಗ್ ಅಂದಿದ್ದರು. ನನ್ನ ಭಾಗದ ಚಿತ್ರೀಕರಣ ಮೇನಲ್ಲಿ ಶುರುವಾಗಲಿದೆ ಎಂದು ನಟಿ ಮಾಹಿತಿ ನೀಡಿದ್ದಾರೆ.

'ಉತ್ತರಕಾಂಡ' ಚಿತ್ರದಲ್ಲಿ ಶಿವರಾಜ್‌ಕುಮಾರ್ ಅವರ ಪತ್ನಿಯ ಪಾತ್ರದಲ್ಲಿ ಭಾವನಾ ನಟಿಸಲಿದ್ದಾರೆ ಎನ್ನಲಾಗುತ್ತಿದೆ. 20 ದಿನಗಳ ಶೂಟಿಂಗ್ ಇರಲಿದೆ ಭಾವನಾ ನಟಿಸಲಿರುವ ಪಾತ್ರದ ಶೂಟಿಂಗ್ ಇರಲಿದೆ ಎನ್ನಲಾಗಿದೆ. ಅಧಿಕೃತ ಮಾಹಿತಿ ಚಿತ್ರತಂಡದ ಕಡೆಯಿಂದ ಸಿಗುವವರೆಗೂ ಕಾಯಬೇಕಿದೆ.

ಶಿವಣ್ಣ ಮತ್ತು ಡಾಲಿ ನಟನೆಯ ಈ ಸಿನಿಮಾದ ಚಿತ್ರೀಕರಣ ಸದ್ಯ ಬಿಜಾಪುರದಲ್ಲಿ ಭರದಿಂದ ನಡೆಯುತ್ತಿದೆ. ಚೈತ್ರ ಆಚಾರ್, ದಿಗಂತ್, ಯೋಗರಾಜ್ ಭಟ್, ಮಲಯಾಳಂ ನಟ ವಿಜಯ್ ಬಾಬು ಸೇರಿದಂತೆ ಹಲವು ನಟಿಸುತ್ತಿದ್ದಾರೆ. ಸಿನಿಮಾಗೆ ಕೆಆರ್‌ಜಿ ಸಂಸ್ಥೆ ನಿರ್ಮಾಣ ಮಾಡುತ್ತಿದೆ.

ನಾಡಿಕಾರ್, ಡೋರ್ ಸೇರಿದಂತೆ ಹಲವು ಸಿನಿಮಾಗಳು ಭಾವನಾ ಮೆನನ್ ಕೈಯಲ್ಲಿವೆ. ಕನ್ನಡದ ಕೆಲವು ಸಿನಿಮಾಗಳಿಗೂ ನಟಿ ಗ್ರೀನ್ ಸಿಗ್ನಲ್ ನೀಡಿದ್ದಾರೆ.

# ಸಂಜಯ್ ಲೀಲಾ ಬನ್ಸಾಲಿ ಸಿನಿಮಾದಲ್ಲಿ ಮೃಣಾಲ್ ಠಾಕೂರ್ ನಾಯಕಿ



ಬಾಲಿವುಡ್ ಬೆಡಗಿ ಮೃಣಾಲ್ ಠಾಕೂರ್‌ಗೆ ಇದೀಗ ಭಾರೀ ಬೇಡಿಕೆಯಿದೆ. ಬ್ಯಾಕ್ ಟು ಬ್ಯಾಕ್ 3 ಹಿಟ್ ಸಿನಿಮಾ ಕೊಟ್ಮೇಲೆ 'ಸೀತಾರಾಮಂ' ನಟಿಯ ಅದೃಷ್ಟ ಖುಲಾಯಿಸಿದೆ. ಬಿಟೌನ್ ಖ್ಯಾತ ನಿರ್ದೇಶಕ ಕಮ್ ನಿರ್ಮಾಪಕ ಸಂಜಯ್ ಲೀಲಾ ಬನ್ಸಾಲಿ ಸಿನಿಮಾದಲ್ಲಿ ಹೀರೋಯಿನ್ ಆಗಿ ಮೃಣಾಲ್ ಸೆಲೆಕ್ಟ್ ಆಗಿದ್ದಾರೆ.

ಬಾಲಿವುಡ್‌ನ ಹಾಟ್ ಹೀರೋ ಸಿದ್ಧಾಂತ್ ಚತುರ್ವೇದಿಗೆ ಮೃಣಾಲ್ ನಾಯಕಿಯಾಗಿದ್ದಾರೆ. ಮುಂದಿನ ವಾರದಿಂದ ಸಿನಿಮಾದ ಚಿತ್ರೀಕರಣ ಶುರುವಾಗಲಿದೆ. ಸದ್ಯ ಸಿನಿಮಾ ವರ್ಕ್‌ಶಾಪ್‌ನಲ್ಲಿ ನಟಿ ಭಾಗಿಯಾಗುತ್ತಿದ್ದಾರೆ. ಪಾತ್ರದ ತಯಾರಿಯಲ್ಲಿ ಬ್ಯುಸಿಯಾಗಿದ್ದಾರೆ ಮೃಣಾಲ್.

ಇತ್ತೀಚೆಗೆ ಮೃಣಾಲ್‌ರನ್ನು ಆಫೀಸ್‌ಗೆ ಕರೆಸಿ ಕಥೆ ಬಗ್ಗೆ ಚರ್ಚಿಸಿದ್ದರು ಬನ್ಸಾಲಿ ಟೀಮ್. ಅಷ್ಟು ಸುಲಭವಾಗಿ ಯಾರಿಗೂ ಮಣೆ ಹಾಕದ ನಿರ್ದೇಶಕ ಸಂಜಯ್ ಈಗ ಮೃಣಾಲ್ ನಟನೆಯನ್ನು ಮೆಚ್ಚಿ ಮುಂದಿನ ಚಿತ್ರಕ್ಕೆ ಆಯ್ಕೆ ಮಾಡಿಕೊಂಡಿದ್ದಾರೆ. ಸಿನಿಮಾದಲ್ಲಿ ಉತ್ತಮ ಪಾತ್ರವನ್ನೇ ಮೃಣಾಲ್‌ಗೆ ನೀಡಿದ್ದಾರೆ.

ಸಂಜಯ್ ಲೀಲಾ ಬನ್ಸಾಲಿ ಗರಡಿಯಲ್ಲಿ ಮೃಣಾಲ್ ಪಳಗುತ್ತಾರೆ ಎಂದರೆ ಸಕ್ಸಸ್ ಕಟ್ಟಿಟ್ಟ ಬುತ್ತಿ ಎಂದರ್ಥ. ಸೀತಾರಾಮಂ, ಹಾಯ್ ನಾನಾ, ಫ್ಯಾಮಿಲಿ ಸ್ಟಾರ್ ಚಿತ್ರದ ಸಕ್ಸಸ್ ನಂತರ ಮೃಣಾಲ್ ಮತ್ತೆ ಹೇಗೆ ಹವಾ ಕ್ರಿಯೇಟ್ ಮಾಡುತ್ತಾರೆ ಎಂದು ಕಾದುನೋಡಬೇಕಿದೆ.

# ಜಪಾನ್‌ನ ವಿಶೇಷ ವಿಡಿಯೋ ಹಂಚಿಕೊಂಡ ರಶ್ಮಿಕಾ ಮಂದಣ್ಣ

ಕೊಡಗಿನ ಕುವರಿ ರಶ್ಮಿಕಾ ಮಂದಣ್ಣ ಇತ್ತೀಚೆಗೆ ಜಪಾನ್‌ಗೆ ಹೋಗಿ ಬಂದಿದ್ದಾರೆ. ಅನಿಮಿ ಅವಾರ್ಡ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದನ್ನು ಹೇಳಿಕೊಂಡಿದ್ದರು. ಇದೀಗ ಜಪಾನ್ ಸುತ್ತಾಟ ಮತ್ತು ತುಂಟಾಟದ ವಿಡಿಯೋ ತುಣುಕನ್ನು ಹರಿಬಿಟ್ಟಿದ್ದಾರೆ.

ರಶ್ಮಿಕಾ ಈಗ ಬರೀ ಇಂಡಿಯಾದ ಹುಡುಗಿಯಾಗಿ ಉಳಿದಿಲ್ಲ. ಪುಷ್ಪ ಹಾಗೂ 'ಅನಿಮಲ್' ಸಿನಿಮಾ ಬಂದ ಮೇಲಂತೂ ಆ ಹುಡುಗಿ ಎಲ್ಲಿಗೋ ಹೋಗಿ ಮುಟ್ಟಿದ್ದಾರೆ. ಬಾಲಿವುಡ್‌ನಲ್ಲಿ ಬೆಳಗುತ್ತಿರುವ ರಶ್ಮಿಕಾ ಈಗ ಜಪಾನ್‌ಗೆ ಹೋಗಿದ್ದ ವಿಡಿಯೋ ತುಣುಕನ್ನು ಕೊಂಚ ಹೆಚ್ಚಾಗಿಯೇ ಹಂಚಿಕೊಂಡಿದ್ದಾರೆ. ಈ ಹಿಂದೆ ಜಪಾನ್‌ಗೆ ಹೋಗೋದು ನನ್ನ ಬಾಲ್ಯದ ಕನಸು ಎಂದು ನಟಿ ಹೇಳಿದ್ದರು. ಹಾಗಾಗಿ ಜಪಾನ್ ಸ್ಥಳದ ವಿಶೇಷ ವಿಡಿಯೋ ಮಾಡಿ ಶೇರ್ ಮಾಡಿದ್ದಾರೆ.

ಒಬ್ಬ ನಟಿ ಎಂಥ ಹೋಟೆಲ್‌ನಲ್ಲಿ ಇರುತ್ತಾರೆ. ಏನೇನು ತಿನ್ನುತ್ತಾರೆ. ಜನರ ಜೊತೆ ಹೇಗೆ ಬೆರೆಯುತ್ತಾರೆ. ಇತ್ಯಾದಿ ವಿಷಯ ಅಷ್ಟು ಸುಲಭವಾಗಿ ಯಾರಿಗೂ ಕಾಣಿಸಲ್ಲ. ಅದನ್ನು ಎಳೆ ಎಳೆಯಾಗಿ ಬಿಡಿಸಿಟ್ಟಿದ್ದಾರೆ ಸಾನ್ವಿ. ಸ್ನೇಹಿತೆಯರ ಹೋಗಿದ್ದು. ಸೆಲ್ಫಿ ತೆಗೆಸಿಕೊಂಡಿದ್ದು, ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದು ಎಲ್ಲವೂ ಅಭಿಮಾನಿಗಳಿಗೆ ತೆರೆಹಿಂದಿನ ಝಲಕ್ ತೋರಿಸಿದ್ದಾರೆ. ಪುಷ್ಪ 2, ಅನಿಮಲ್ ಪಾರ್ಕ್, ಚಾವಾ, ರೈನ್‌ಬೋ ಸೇರಿದಂತೆ ಹಲವು ಸಿನಿಮಾಗಳು ರಶ್ಮಿಕಾ ಮಂದಣ್ಣ ಕೈಯಲ್ಲಿವೆ.





# ಧೋನಿ ದಾಖಲೆ ಮುರಿದ ಕೆಎಲ್ ರಾಹುಲ್



ಇಂಡಿಯನ್ ಪ್ರೀಮಿಯರ್ ಲೀಗ್‌ನ 34ನೇ ಪಂದ್ಯದಲ್ಲಿ ಆಕರ್ಷಕ ಅರ್ಧಶತಕ ಬಾರಿಸಿ ಕೆಎಲ್ ರಾಹುಲ್ ವಿಶೇಷ ದಾಖಲೆ ಬರೆದಿದ್ದಾರೆ. ಅದು ಕೂಡ ಮಹೇಂದ್ರ ಸಿಂಗ್ ಧೋನಿ ಹೆಸರಿನಲ್ಲಿದ್ದ ರೆಕಾರ್ಡ್ ಅನ್ನು ಮುರಿಯುವ ಮೂಲಕ ಎಂಬುದು ವಿಶೇಷ.

ಲಕ್ನೋನ ಏಕಾನ ಸ್ಟೇಡಿಯಂನಲ್ಲಿ ನಡೆದ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧದ ಈ ಪಂದ್ಯದಲ್ಲಿ ಟಾಸ್ ಗೆದ್ದ ಎಲ್ ಎಸ್ ಜಿ ತಂಡವು ಬೌಲಿಂಗ್ ಆಯ್ದುಕೊಂಡಿತು. ಅದರಂತೆ ಮೊದಲು ಬ್ಯಾಟ್ ಮಾಡಿದ ಸಿಎಸ್ ಕೆ ತಂಡವು ನಿಗದಿತ 20 ಓವರ್ ಗಳಲ್ಲಿ 6 ವಿಕೆಟ್ ಕಳೆದುಕೊಂಡು 176 ರನ್ ಕಲೆಹಾಕಿತು.

ಈ ಸ್ಪರ್ಧಾತ್ಮಕ ಗುರಿಯನ್ನು ಬೆನ್ನತ್ತಿದ ಲಕ್ನೋ ಸೂಪರ್ ಜೈಂಟ್ಸ್ ತಂಡಕ್ಕೆ ಕೆಎಲ್ ರಾಹುಲ್ ಹಾಗೂ ಕ್ವಿಂಟನ್ ಡಿಕಾಕ್ ಉತ್ತಮ ಆರಂಭ ಒದಗಿಸಿದರು. ಮೊದಲ ವಿಕೆಟ್ ಗೆ 134 ರನ್ ಪೇರಿಸಿ ಡಿಕಾಕ್ (54) ಔಟಾದರು. ಮತ್ತೊಂದೆಡೆ ಕೆಎಲ್ ರಾಹುಲ್ ಭರ್ಜರಿ ಬ್ಯಾಟಿಂಗ್ ಮುಂದುವರೆಸಿದರು.

ಆಕರ್ಷಕ ಹೊಡೆತಗಳೊಂದಿಗೆ ಗಮನ ಸೆಳೆದ ಕೆಎಲ್ ರಾಹುಲ್ 53 ಎಸೆತಗಳಲ್ಲಿ 3 ಭರ್ಜರಿ ಸಿಕ್ಸ್ ಹಾಗೂ 9 ಫೋರ್ ಗಳೊಂದಿಗೆ 82 ರನ್ ಬಾರಿಸಿದರು. ಈ ಅರ್ಧಶತಕದೊಂದಿಗೆ ಐಪಿಎಲ್ ನಲ್ಲಿ ಅತೀ ಹೆಚ್ಚು ಹಾಫ್ ಸೆಂಚುರಿ ಸಿಡಿಸಿದ ವಿಕೆಟ್ ಕೀಪರ್ ಎನಿಸಿಕೊಂಡರು.

ಇದಕ್ಕೂ ಮುನ್ನ ಈ ದಾಖಲೆ ಮಹೇಂದ್ರ ಸಿಂಗ್ ಧೋನಿ ಹೆಸರಿನಲ್ಲಿತ್ತು. 223 ಐಪಿಎಲ್ ಇನಿಂಗ್ಸ್ ಗಳ ಮೂಲಕ 24 ಅರ್ಧಶತಕ ಬಾರಿಸಿ ಧೋನಿ ಈ ದಾಖಲೆ ಬರೆದಿದ್ದರು. ಇದೀಗ ಈ ದಾಖಲೆಯನ್ನು ಮುರಿಯುವಲ್ಲಿ ಕೆಎಲ್ ಆರ್ ಯಶಸ್ವಿಯಾಗಿದ್ದಾರೆ.

116 ಐಪಿಎಲ್ ಇನಿಂಗ್ಸ್ ಗಳಲ್ಲಿ ಕೆಎಲ್ ರಾಹುಲ್ ಇದುವರೆಗೆ 35 ಅರ್ಧಶತಕಗಳನ್ನು ಬಾರಿಸಿದ್ದಾರೆ. ಈ ವೇಳೆ ವಿಕೆಟ್ ಕೀಪರ್ ಆಗಿ ಕಣಕ್ಕಿಳಿದಾಗ 25 ಹಾಫ್ ಸೆಂಚುರಿ ಸಿಡಿಸಿದ್ದಾರೆ. ಈ ಮೂಲಕ ಧೋನಿ ಹೆಸರಿನಲ್ಲಿದ್ದ 24 ಅರ್ಧಶತಕಗಳ ದಾಖಲೆಯನ್ನು ಕೆಎಲ್ ರಾಹುಲ್ ಮುರಿದಿದ್ದಾರೆ.

ಇನ್ನು ಕೆಎಲ್ ರಾಹುಲ್ (82) ಅವರ ಅರ್ಧಶತಕದ ನೆರವಿನಿಂದ ಈ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ತಂಡವು 19 ಓವರ್ ಗಳಲ್ಲಿ 2 ವಿಕೆಟ್ ಕಳೆದುಕೊಂಡು ಗುರಿ ಮುಟ್ಟಿತು. ಈ ಮೂಲಕ 8 ವಿಕೆಟ್ ಗಳ ಭರ್ಜರಿ ಜಯ ಸಾಧಿಸಿದೆ.

# ಕೆಎಲ್ ರಾಹುಲ್-ರುತುರಾಜ್‌ಗೆ ದಂಡದ ಬರೆ..!




ಇಂಡಿಯನ್ ಪ್ರೀಮಿಯರ್ ಲೀಗ್‌ನ 34ನೇ ಪಂದ್ಯದಲ್ಲಿ ಸ್ಲೋ ಓವರ್ ರೇಟ್ ತಪ್ಪು ಮಾಡಿದ್ದಕ್ಕಾಗಿ ಲಕ್ನೋ ಸೂಪರ್ ಜೈಂಟ್ಸ್ ತಂಡದ ನಾಯಕ ಕೆಎಲ್ ರಾಹುಲ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ಕ್ಯಾಪ್ಟನ್ ರುತುರಾಜ್ ಗಾಯಕ್ವಾಡ್ ಗೆ ದಂಡ ವಿಧಿಸಲಾಗಿದೆ. ಈ ಇಬ್ಬರು ನಾಯಕರುಗಳು ನಿಗದಿತ ಸಮಯದೊಳಗೆ 20 ಓವರ್ ಗಳನ್ನು ಪೂರ್ಣಗೊಳಿಸಿರಲಿಲ್ಲ.

ಹೀಗಾಗಿ ಕೆಎಲ್ ರಾಹುಲ್ ಹಾಗೂ ರುತುರಾಜ್ ಗಾಯಕ್ವಾಡ್ ಗೆ ತಲಾ 12 ಲಕ್ಷ ರೂ. ದಂಡ ವಿಧಿಸಲಾಗಿದೆ. ಇಬ್ಬರು ನಾಯಕರುಗಳು ಇದೇ ಮೊದಲ ಬಾರಿಗೆ ಐಪಿಎಲ್ ನೀತಿ ಸಂಹಿತೆಯನ್ನು ಉಲ್ಲಂಘಿಸಿದ್ದು, ಹೀಗಾಗಿ ಹನ್ನೆರಡು ಲಕ್ಷ ರೂ. ಮಾತ್ರ ದಂಡ ವಿಧಿಸಿದ್ದಾರೆ. ಇನ್ನೆರಡು ಬಾರಿ ಇದೇ ತಪ್ಪನ್ನು ಮುಂದುವರೆಸಿದರೆ ಒಂದು ಪಂದ್ಯದ ನಿಷೇಧಕ್ಕೊಳಗಾಗಲಿದ್ದಾರೆ.

ಐಪಿಎಲ್ ನಿಯಮದ ಪ್ರಕಾರ, ಪ್ರತಿ ತಂಡಗಳು 20 ಓವರ್ ಗಳನ್ನು 1 ಗಂಟೆ 30 ನಿಮಿಷಗಳಲ್ಲಿ ಪೂರ್ಣಗೊಳಿಸಬೇಕು. ಒಂದು ವೇಳೆ ಇದಕ್ಕಿಂತ ಹೆಚ್ಚಿನ ಸಮಯ ತೆಗೆದುಕೊಂಡರೆ ಬೌಂಡರಿ ಲೈನ್ ನಿಂದ ಒಬ್ಬ ಫೀಲ್ಡರ್ ನನ್ನು ಕಡಿತ ಮಾಡಲಾಗುತ್ತದೆ. ಹಾಗೆಯೇ ಈ ತಪ್ಪನ್ನು ಮಾಡಿದ ತಂಡದ ನಾಯಕನಿಗೆ 12 ಲಕ್ಷ ರೂ. ದಂಡ ವಿಧಿಸಲಾಗುತ್ತದೆ.

ಇನ್ನು ಇದೇ ತಪ್ಪನ್ನು 2ನೇ ಬಾರಿ ಪುನರಾವರ್ತಿಸಿದರೆ ನಾಯಕನಿಗೆ 24 ಲಕ್ಷ ರೂ. ದಂಡ ವಿಧಿಸಲಾಗುತ್ತದೆ. ಇದರ ಜೊತೆಗೆ ಪ್ಲೇಯಿಂಗ್ ಇಲೆವೆನ್ ನ 10 ಆಟಗಾರರಿಗೆ 6 ಲಕ್ಷ ಅಥವಾ ಪಂದ್ಯದ ಶುಲ್ಕದ 25% ದಂಡವನ್ನು ವಿಧಿಸಲಾಗುತ್ತದೆ.

ಈ ತಪ್ಪನ್ನು ಮೂರನೇ ಬಾರಿ ಆವರ್ತಿಸಿದರೆ, ತಂಡದ ನಾಯಕನಿಗೆ 30 ಲಕ್ಷ ದಂಡ ವಿಧಿಸಲಾಗುತ್ತದೆ. ಇದರ ಜೊತೆಗೆ ಮೂರು ಬಾರಿ ತಪ್ಪು ಮಾಡಿದ ನಾಯಕ ಒಂದು ಪಂದ್ಯದಿಂದ ನಿಷೇಧಕ್ಕೊಳಗಾಗಲಿದ್ದಾರೆ. ಹಾಗೆಯೇ ಪ್ಲೇಯಿಂಗ್ ಇಲೆವೆನ್ ನ 10 ಆಟಗಾರರು ತಲಾ 12 ಲಕ್ಷ ರೂ. ಅಥವಾ ಪಂದ್ಯದ ಶುಲ್ಕದ ಶೇ. 50 ರಷ್ಟು ದಂಡವನ್ನು ಪಾವತಿಸಬೇಕಾಗುತ್ತದೆ.

# ಕುಮಾರಸ್ವಾಮಿಗೆ ಹೈಕೋರ್ಟ್ ರಿಲೀಫ್ ಮಹಿಳಾ ಆಯೋಗದ ನೋಟಿಸ್‌ಗೆ ತಡೆ

**ಬೆಂಗಳೂರು:** ಗ್ಯಾರಂಟಿಗಳಿಂದ ಮಹಿಳೆಯರು ದಾರಿ ತಪ್ಪಿದ್ದಾರೆ ಎನ್ನುವ ಮಾಜಿ ಮುಖ್ಯಮಂತ್ರಿ ಎಚ್‌ಡಿ ಕುಮಾರಸ್ವಾಮಿ ಹೇಳಿಕೆ ಸಂಬಂಧ ರಾಜ್ಯ ಮಹಿಳಾ ಆಯೋಗ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡಿದೆ. ಅಲ್ಲದೇ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹಿಳಾ ಆಯೋಗ ಕುಮಾರಸ್ವಾಮಿಗೆ ನೋಟಿಸ್ ನೀಡಿದ್ದು, ಇದೀಗ ಈ ನೋಟಿಸ್ ಕರ್ನಾಟಕ ಹೈಕೋರ್ಟ್ ತಡೆ ನೀಡಿದೆ. ಇದರಿಂದ ಲೋಕಸಭಾ ಚುನಾವಣೆ ಸಮಯದಲ್ಲಿ ಮಾಜಿ ಮುಖ್ಯಮಂತ್ರಿ ಎಚ್‌ಡಿ ಕುಮಾರಸ್ವಾಮಿಗೆ ಬಿಗ್ ರಿಲೀಫ್ ಸಿಕ್ಕಂತಾಗಿದೆ.

ದೂರುಗಳು ಇಲ್ಲದಿದ್ದರೂ ಸ್ವಯಂಪ್ರೇರಿತ ಪ್ರಕರಣ ದಾಖಲಿಸಲಾಗಿದ್ದು, ಸ್ವತಃ ಅಧ್ಯಕ್ಷೆ ಸ್ಪಷ್ಟೀಕರಣ ಕೇಳಿ ,ಕುಮಾರಸ್ವಾಮಿ ಅವರಿಗೆ ನೋಟಿಸ್ ನೀಡಿದ್ದಾರೆ ಎಂದು ಮಾಜಿ ಸಿಎಂ ಕುಮಾರಸ್ವಾಮಿ ಪರ ವಕೀಲ ಎ.ವಿ.ನಿಶಾಂತ್ ವಾದ ಮಂಡಿಸಿದರು. ಈ ವಾದ ಆಲಿಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ, ಆಯೋಗದ ನೋಟಿಸ್‌ಗೆ ತಡೆ ನೀಡಿ ಆದೇಶ ಹೊರಡಿಸಿದೆ. ಕಾರಣ ಕೇಳಿ ಕುಮಾರಸ್ವಾಮಿಗೆ ನೋಟಿಸ್ ನೀಡಿಲ್ಲ, ಸಮನ್ಸ್ ನೀಡಿಲ್ಲ. ಸ್ಪಷ್ಟೀಕರಣ ನೀಡಿ ಇಲ್ಲವಾದರೆ ಹಾಜರಾಗುವಂತೆ ನೋಟಿಸ್ ನೀಡಲಾಗಿದೆ. ರಾಜ್ಯ ಮಹಿಳಾ ಆಯೋಗದ ಕ್ರಮ ವ್ಯಾಪ್ತಿ ಮೀರಿದಂತಿದೆ



ಎಂದು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ ಅಭಿಪ್ರಾಯಪಟ್ಟಿದೆ.

ತುರುವೇಕೆರೆಯಲ್ಲಿ ಲೋಕಸಭೆ ಚುನಾವಣಾ ಪ್ರಚಾರ ಭಾಷಣ ಮಾಡುವ ಸಂದರ್ಭದಲ್ಲಿ, ''ಕಾಂಗ್ರೆಸ್ ಸರಕಾರ ಕೊಟ್ಟಿರುವ ಗ್ಯಾರಂಟಿ ಯೋಜನೆಗಳಿಂದ ಹಳ್ಳಿಯ ತಾಯಂದಿರು ಸ್ವಲ್ಪ ದಾರಿ ತಪ್ಪಿದ್ದು, ಹಳ್ಳಿಯ ಹೆಣ್ಣು ಮಕ್ಕಳ ಬದುಕು ಏನಾಗಬೇಕು ಎಂಬುದರ ಕುರಿತು ಯೋಚನೆ ಮಾಡಬೇಕಾಗಿದೆ,'' ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಹೇಳಿಕೆ ನೀಡಿದ್ದರು. ಇದು ಭಾರೀ ವಿವಾದಕ್ಕೀಡಾಗಿತ್ತು. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಆದಿಯಾಗಿ ಕಾಂಗ್ರೆಸ್ ನಾಯಕರು ಕುಮಾರಸ್ವಾಮಿ ವಿರುದ್ಧ ಮುಗಿಬಿದ್ದಿದ್ದರು. ಅಲ್ಲದೇ ರಾಜ್ಯದೆಲ್ಲೆಡೆ ಮಹಿಳಾ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ಮಾಡಿ ಕುಮಾರಸ್ವಾಮಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು.

ಇನ್ನು ಈ ಪ್ರಕರಣ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದಂತೆಯೇ ರಾಜ್ಯ ಮಹಿಳಾ ಆಯೋಗ ಗಂಭೀರವಾಗಿ ಇದನ್ನು ಪರಿಗಣಿಸಿ ಸ್ವಯಂಪ್ರೇರಿತವಾಗಿ ದೂರು ದಾಖಲಿಸಿಕೊಂಡಿತ್ತು. ಅಲ್ಲದೇ ಈ ಬಗ್ಗೆ ಒಂದು ವಾರದೊಳಗೆ ಸ್ಪಷ್ಟನೆ ನೀಡುವಂತೆ ನೋಟಿಸ್ ನೀಡಿತ್ತು. ಈ ನೋಟಿಸ್ ವಿರುದ್ಧ ಕುಮಾರಸ್ವಾಮಿ ಹೈಕೋರ್ಟ್ ಮೆಟ್ಟಿಲೇರಿದ್ದರು. ಇದೀಗ ಹೈಕೋರ್ಟ್ ರಾಜ್ಯ ಮಹಿಳಾ ಆಯೋಗದ ನೋಟಿಸ್‌ಗೆ ತಡೆ ನೀಡಿದೆ.

''ಹೆಣ್ಣು ಮಕ್ಕಳ ಬಗ್ಗೆ ಅಪಾರ ಕಾಳಜಿ ಹೊಂದಿರಬೇಕಾದವರು ಈ ರೀತಿ ಬಹಿರಂಗವಾಗಿ ಹೆಣ್ಣುಮಕ್ಕಳನ್ನು ಅವಮಾನಿಸಿರುವುದನ್ನು ಗಂಭೀರವಾಗಿ ಪರಿಗಣಿಸಿದ್ದೇವೆ. ಕರ್ನಾಟಕ ರಾಜ್ಯ ಮಹಿಳಾ ಆಯೋಗ ಅಧಿನಿಯಮ- 1995 ಪರಿಚ್ಛೇದ 10 (ಎ)ರ ಮೇರೆಗೆ ತಾವು ನೋಟಿಸ್ ತಲುಪಿದ ಏಳು ದಿನಗಳೊಳಗೆ ಆಯೋಗಕ್ಕೆ ಖುದ್ದು ಹಾಜರಾಗಿ ಹೇಳಿಕೆ ಸಂಬಂಧ ಸ್ಪಷ್ಟೀಕರಣ ನೀಡಬೇಕು, ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಹೇಳಿದ್ದರು.

# ಹೌದು ನಾನು ಬಿಜೆಪಿ ಬಿ ಟೀಂ ನಾಯಕ

**ಚಿಕ್ಕಬಳ್ಳಾಪುರ:** ನನ್ನನ್ನು ಬಿಜೆಪಿ ಬಿ ಟೀಂ ನಾಯಕ ಎಂದಿದ್ದಾರೆ. ಹೌದು ನಾನು ಬಿ ಟೀಂ ನಾಯಕ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ ಮಾಜಿ ಪ್ರಧಾನಿ, ಜೆಡಿಎಸ್ ವರಿಷ್ಠ ಹೆಚ್‌ಡಿ ದೇವೇಗೌಡ ತೀಕ್ಷ್ಣ ತಿರುಗೇಟು ನೀಡಿದ್ದಾರೆ. ಜಿಲ್ಲೆಯ ಶಿಡ್ಲಘಟ್ಟದಲ್ಲಿ ಕೋಲಾರ ಲೋಕಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಮಲ್ಲೇಶಬಾಬು ಪರ ಪ್ರಚಾರದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಗ್ಯಾರಂಟಿಗಳ ಮೊರೆ ಹೋಗಿ ಕಳೆದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲಿಸಿದಿರಿ. ಈಗ ಬೆಂಗಳೂರಿನಲ್ಲಿ ಕುಡಿಯುವ ನೀರಿಗೂ ಮಹಿಳೆಯರು ಪರದಾಡುತ್ತಿದ್ದಾರೆ ಎಂದು ವಾಗ್ದಾಳಿ ಮಾಡಿದ್ದಾರೆ.

ಎತ್ತಿನಹೊಳೆ ಯೋಜನೆ ಮಂಜೂರು ಮಾಡಿದ್ದು ಮಾಜಿ ಸಿಎಂ ಜಗದೀಶ ಶೆಟ್ಟರ್. ಆದರೆ ಈಗ ಎತ್ತಿನಹೊಳೆ ಯೋಜನೆ ಪೈಪ್‌ಗಳು ತುಕ್ಕು ಹಿಡಿದಿವೆ. ಕಾಂಗ್ರೆಸ್‌ನವರು ಎತ್ತಿನಹೊಳೆಗೆ ಪ್ರಾಮುಖ್ಯತೆ ಕೊಡುತ್ತಿಲ್ಲ. ಲೋಕಸಭೆ ಚುನಾವಣೆ ಬಳಿಕ ಕಾಂಗ್ರೆಸ್ ಸರ್ಕಾರ ಇರಲ್ಲ ಎಂದು ಕಿಡಿಕಾರಿದ್ದಾರೆ.

ನನಗೆ 93 ವರ್ಷ ವಯಸ್ಸು ಆಗಿದೆ. 2014ರ



ಲೋಕಸಭಾ ಚುನಾವಣೆಯಲ್ಲಿ ಮೋದಿಗೆ ಸವಾಲು ಹಾಕಿ ನಾನು ಸೋತಿದ್ದೆ. ಸವಾಲಿನಂತೆ ಸಂಸದನ ಸ್ಥಾನಕ್ಕೆ ರಾಜೀನಾಮೆಗೆ ಮುಂದಾಗಿದ್ದೆ. ಆದರೆ ಮೋದಿ ನನ್ನ ಅನುಭವ ಬಳಸಿಕೊಳ್ಳಲು ನೀವು ಸಂಸತ್‌ನಲ್ಲಿ ಇರಬೇಕು ಎಂದಿದ್ದರು. ಆದರೆ ಈ ಭಾರಿ 400 ಎಂಪಿ ಗೆಲ್ಲುವ ಬಗ್ಗೆ ಮೋದಿ ಸಂಕಲ್ಪ ಮಾಡಿದ್ದಾರೆ ಎಂದು ಹೇಳಿದ್ದಾರೆ.

ಬಿಜೆಪಿ ಮುಖಂಡ ಅರವಿಂದ ಲಿಂಬಾವಳಿ ಮಾತನಾಡಿದ್ದು, ಮಾಲೂರಿನಲ್ಲಿ ನಡೆದ ಕಾಂಗ್ರೆಸ್ ಕಾರ್ಯಕ್ರಮದಲ್ಲಿ ಎಡಗೈಯಲ್ಲಿ ದೀಪ ಅಂಟಿಸುವುರ ಮೂಲಕ ರಾಹುಲ್ ಗಾಂಧಿ ಸನಾತನ ಧರ್ಮಕ್ಕೆ ಅವಮಾನ ಮಾಡಿದ್ದಾರೆ ಎಂದು ಕಿಡಿಕಾರಿದ್ದಾರೆ. ಬಂಡೇಪ್ಪ ಕಾಶಂಪುರ ಮಾತನಾಡಿ ಕುರುಬ ಸಮಾಜ ಸಿದ್ದರಾಮಯ್ಯ ಬದಲು ಮೋದಿಯನ್ನು ಬೆಂಬಲಿಸಬೇಕಿದೆ ಎಂದು ಹೇಳಿದ್ದಾರೆ.

ಚುನಾವಣೆ ಬಳಿಕ ಕಾಂಗ್ರೆಸ್ ಗ್ಯಾರಂಟಿ ಯೋಜನೆ ರದ್ದು ಮಾಡುತ್ತಾರೆ ಎಂಬ ಬಿಜೆಪಿಗರ ಹೇಳಿಕೆ ವಿಚಾರವಾಗಿ ಮಾಗಡಿ ಕಾಂಗ್ರೆಸ್ ಶಾಸಕ ಎಚ್‌ಸಿ ಬಾಲಕೃಷ್ಣ ಪ್ರತಿಕ್ರಿಯಿಸಿದ್ದು, ಅವರ ಯೋಗ್ಯತೆ ಅವರೆಲ್ಲರೂ ಅಪಪ್ರಚಾರದವರೆ. ಕಾಂಗ್ರೆಸ್‌ನವರು ಜನತಾದಳ ಇಬ್ಬರು ಅಪಪ್ರಚಾರದವರು. ಬಾಯ್ತಪ್ಪಿ ಬಿಜೆಪಿ ಅಪಪ್ರಚಾರ ಮಾಡುತ್ತಾರೆ ಎಂಬುದಕ್ಕೆ ಬದಲಾಗಿ ಕಾಂಗ್ರೆಸ್ ಜನತಾದಳದವರು ಅಪಪ್ರಚಾರ ಮಾಡುವವರು ಎಂದಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com